ಸಂಪುಟ: 14 Volume | ಸಂಚಿಕೆ: 54 Issue | ಪುಟಗಳು 08 Pages | ಸೋಮವಾರ 01 ಜೂನ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಮರದ ಮೇಲೆ ಕುಳಿತ ಹಕ್ಕಿಗೆ ಕೊಂಬೆ ಮುರಿದು ಬೀಳುವ ಭಯವಿರದು. ಅದು ನಂಬಿರುವುದು ತನ್ನ ರೆಕ್ಕೆಗಳನ್ನೇ ಹೊರತು ಕೊಂಬೆಯನ್ನಲ್ಲ.

–ಕುವೆಂಪು



ನೂತನ ಮುಖ್ಯಮಂತ್ರಿಯಾಗಿ ಡಿಕೆ ಶಿವಕುಮಾರ್ ಅವರಿಗೆ ವಿಜಯನಂದ ಕಾಶಪ್ಪನವರ್ ಹಾಗೂ ಅವರ ತಾಯಿ ಗೌರಮ್ಮನವರು ಅಭಿನಂದಿಸಿದರು.



ಶಾಸಕಾಂಗ ಪಕ್ಷದ ನಾಯಕರು, ಹಾಗೂ ನೂತನ ಮುಖ್ಯ ಮಂತ್ರಿ ಡಿ.ಕೆ. ಶಿವಕುಮಾರ ರವರಿಗೆ ಬೆಂಗಳೂರನಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲ ರವರು ಭೇಟಿ ಮಾಡಿ ಸನ್ಮಾನಿಸಿದರು. ಈ ಸಂದರ್ಬದಲ್ಲಿ ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ, ಕಾಂಗ್ರೆಸ್ ಪಕ್ಷದ ಸಹಕಾರ ಕ್ಷೇತ್ರದ ರಾಜ್ಯಾಧ್ಯಕ್ಷ ಧನರಾಜ ತಾಳಂಪಳ್ಳಿ, ಪಂಡಿತ್ ಚಿದ್ರಿ. ಸೇರಿದಂತೆ ಇತರರಿದ್ದರು.




ಪಿರಿಯಾಪಟ್ಟಣ: ಎಲ್ಲರಿಗೂ ನಮಸ್ತೆ ಈ ದಿವಸ ಪಿರಿಯಾಪಟ್ಟಣ ಪೊಲೀಸ್ ಠಾಣೆಯ ವತಿಯಿಂದ ಮೈಸೂರು ಜಿಲ್ಲಾ ವರಿಷ್ಠಾಧಿಕಾರಿಯಾದ ಶ್ರೀ ಮಲ್ಲಿಕಾರ್ಜುನ ಬಾಲದಂಡಿ ಅವರ ನಿರ್ದೇಶನದಂತೆ ಪಿರಿಯಾಪಟ್ಟಣ ಪೊಲೀಸ್ ಠಾಣಾ ಸರಹದ್ದಿನಲ್ಲಿ ಪಿರಿಯಾಪಟ್ಟಣ ಪೊಲೀಸ್ ಠಾಣ ಪೊಲೀಸ್ ನಿರೀಕ್ಷಕರಾದ ಶ್ರೀ ಗೋವಿಂದರಾಜು ಎಂ ವಿ ರವರ ನೇತೃತ್ವದಲ್ಲಿ ಮಾದಕ ದ್ರವ್ಯ ವ್ಯಸನದ ದುಷ್ಪರಿಣಾಮಗಳ ಬಗ್ಗೆ ಹಾಗೂ ನಶಾ ಮುಕ್ತ ಭಾರತ ಕಾರ್ಯಕ್ರಮದ ಬಗ್ಗೆ ಅರಿವು ಕಾರ್ಯಕ್ರಮ ಮಾಡಲಾಯಿತು. ಸದರಿ ಕಾರ್ಯಕ್ರಮದಲ್ಲಿ ಪೋಲಿಸ್ ಉಪನಿರೀಕ್ಷಕರಾದ ಶ್ರೀಮತಿ ಭಾರತಿ ಕೆ ಹೆಚ್ ರವರು ಹಾಗೂ ಸಿಬ್ಬಂದಿಗಳಾದ ಗಣೇಶ್ ರವರು ಅರಿವು ಕಾರ್ಯಕ್ರಮವನ್ನು ಮೂಡಿಸಿರುತ್ತಾರೆ.

## ಸದ್ಯಕ್ಕೆ ಡಿಸಿಎಂ ಸ್ಥಾನದ ಪ್ರಸ್ತಾವ ಇಲ್ಲ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ರಾಜ್ಯ ಸಚಿವ ಸಂಪುಟ ರಚನೆಯು ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ವಿವೇಚನೆಗೆ ಬಿಡಲಾಗಿದೆ. ಜೊತೆಗೆ ಸದ್ಯಕ್ಕೆ ಉಪ ಮುಖ್ಯಮಂತ್ರಿ ಸ್ಥಾನದ ಕುರಿತು ನಮಗೆ ಪ್ರಸ್ತಾವನೆ ಬಂದಿಲ್ಲ ಎಂದು ಎಐಸಿಸಿ ಅಧ್ಯಕ್ಷ ಹಾಗೂ ರಾಜ್ಯಸಭೆಯಲ್ಲಿನ ವಿರೋಧ ಪಕ್ಷದ ನಾಯಕ ಡಾ. ಮಲ್ಲಿಕಾರ್ಜುನ್ ಖರ್ಗೆಯವರು ಹೇಳಿದರು.

ನಗರದ ಬುದ್ಧ ವಿಹಾರಕ್ಕೆ ಭಾನುವಾರ ಭೇಟಿ ನೀಡಲು ವಿಮಾನ ನಿಲ್ದಾಣದಲ್ಲಿ ಬಂದಿಳಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಟ್ಟು ಎರಡು ಹಂತಗಳಲ್ಲಿ ಸಚಿವ ಸಂಪುಟ ರಚನೆಯಾಗಲಿದೆ. ಮೊದಲ ಹಂತದಲ್ಲಿ ಮುಖ್ಯಮಂತ್ರಿಗಳೊಂದಿಗೆ ಕೆಲವು ಸಚಿವರು ಪ್ರಮಾಣವಚನ ಸ್ವೀಕರಿಸುವರು. ನಂತರ ಹದಿನೈದು ಇಲ್ಲವೇ ಒಂದು ತಿಂಗಳಿನ ಅವಧಿಯಲ್ಲಿ ಉಳಿದ ಸಚಿವ ಸಂಪುಟ ರಚನೆ ಪೂರ್ಣಗೊಳ್ಳಲಿದೆ ಎಂದರು.



ಮೊದಲ ಹಂತದಲ್ಲಿ ಎಷ್ಟು ಸಚಿವರು ಪ್ರಮಾಣವಚನ ಸ್ವೀಕರಿಸುತ್ತಾರೆ ಹಾಗೂ ಎಷ್ಟು ಜನ ಉಪ ಮುಖ್ಯಮಂತ್ರಿಗಳು ಇರುತ್ತಾರೆ ಎಂಬುದರ ಕುರಿತು ಪಕ್ಷದ ವರಿಷ್ಠರಿಗೆ ಇಲ್ಲಿಯವರೆಗೆ ಯಾವುದೇ ಪ್ರಸ್ತಾವನೆ ಬಂದಿಲ್ಲ. ಮೊದಲ ಹಂತದಲ್ಲಿ 8ರಿಂದ ಹತ್ತು ಜನ ಸಚಿವರು ಪ್ರಮಾಣವಚನ ಸ್ವೀಕರಿಸುವ ಸಾಧ್ಯತೆ ಇದೆ. ಆ ಕುರಿತು ಜೂನ್ 3ರಂದೇ ಅಂತಿಮ ನಿರ್ಧಾರ ಆಗಲಿದೆ. ಸಚಿವ ಸಂಪುಟ ರಚನೆ ಹಾಗೂ ಉಪಮುಖ್ಯಮಂತ್ರಿ ಹುದ್ದೆ ಕುರಿತು ಮುಖ್ಯಮಂತ್ರಿಗಳೇ ಅಂತಿಮ ನಿರ್ಣಯ ಕೈಗೊಳ್ಳುವರು ಎಂದು ಅವರು ಹೇಳಿದರು.

## ಸ್ವಚ್ಛತೆಗೆ ಕೈ ಜೋಡಿಸಲು ಪುರಸಭೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಘನತ್ಯಾಜ್ಯ ವಸ್ತು ನಿರ್ವಹಣೆ ನೂತನ ನಿಯಮಗಳ್ವಯ ಪುರಸಭೆ ವ್ಯಾಪ್ತಿಯ ಎಲ್ಲಾ ಸಾರ್ವಜನಿಕರು ಮತ್ತು ವ್ಯಾಪಾರಸ್ಥರು ಘನತ್ಯಾಜ್ಯ ವಸ್ತುಗಳನ್ನು ನಾಲ್ಕು ವಿಧಗಳಲ್ಲಿ ಕಡ್ಡಾಯವಾಗಿ ಮೂಲದಲ್ಲಿಯೇ ವಿಂಗಡಿಸಿ ಪುರಸಭೆಯ ಕಸ ಸಂಗ್ರಹಿಸುವ ಟಿಪ್ಪರ್‌ಗಳಿಗೆ ನೀಡುವಂತೆ ಪಟ್ಟಣದಲ್ಲಿ ರವಿವಾರ ವಿವಿಧ ಓಣಿಗಳಿಗೆ ಪುರಸಭೆಯ ಹಿರಿಯ ಆರೋಗ್ಯ ನಿರೀಕ್ಷಕ ರವಿಕುಮಾರ್ ಸ್ವಾಮಿ ಹಾಗೂ ಕಿರಿಯ ಆರೋಗ್ಯ ನಿರೀಕ್ಷಕಿ ವೈಶಾಲಿ ಇವರು ಭೇಟಿ ಮನವಿ ಮಾಡಿದರು. ನಂತರ ಮಾತನಾಡಿ, ಅಡುಗೆ ಮನೆಯಲ್ಲಿ ಸಂಗ್ರಹವಾಗುವ ಹಾಗೂ ಇತರೆ ಕರಗುವ ತ್ಯಾಜ್ಯ ವಸ್ತುಗಳನ್ನು ಹಸಿ ತ್ಯಾಜ್ಯ ಎಂದು, ಎಲ್ಲಾ ರೀತಿಯ ಪ್ಲಾಸ್ಟಿಕ್ ಮತ್ತು ಬಟ್ಟೆಯ ತ್ಯಾಜ್ಯವನ್ನು ಒಣ ತ್ಯಾಜ್ಯ ಎಂದು ಹಾಗೂ ಡೈಪರ್, ಸ್ಯಾನಿಟರಿ ನ್ಯಾಪ್ಕಿನ್ ಸೇರಿದಂತೆ ಸ್ಯಾನಿಟರಿ ತ್ಯಾಜ್ಯವನ್ನು



ಹಾಗೂ ಬಣ್ಣದ ಡಬ್ಬ, ಕೀಟನಾಶಕ ಅವಧಿ ಮೀರಿದ ಔಷಧಿಗಳು ಬಳಸಿದ ಸಿರಂಜ್ ನೀಡಲ್ಸ್, ಬಲ್ಬ್, ಹಳೆಯ ಬ್ಯಾಟರಿ ಮುಂತಾದವುಗಳನ್ನು ವಿಶೇಷ ಕಾಳಜಿ ತ್ಯಾಜ್ಯ ಎಂದು ಪ್ರತ್ಯೇಕವಾಗಿ ವಿಂಗಡಿಸಿ ನೀಡುವ ಮೂಲಕ ಸ್ವಚ್ಛತೆಗೆ ಕೈ ಜೋಡಿಸಬೇಕೆಂದು ಮನವಿ ಮಾಡಿದರು.

# ಸಂಪುಟ ರಚನೆ ಸರ್ಕಸ್

## ನೂತನ ಸಿಎಂ ಆಗಿ ಡಿಕೆಶಿ ಪ್ರಮಾಣ ವಚನಕ್ಕೆ ಸಜ್ಜು | 11:11:11 ಸಚಿವ ಸ್ಥಾನಗಳ ಫಾರ್ಮುಲಾ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಡಿ.ಕೆ. ಶಿವಕುಮಾರ್ ಅವರ ನೇತೃತ್ವದ ಸರ್ಕಾರಕ್ಕೆ ಸಕಲ ಸಿದ್ಧತೆ ನಡೆದಿದೆ.

ಡಿಕೆಶಿ ಅವರು ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲು ಸಜ್ಜಾಗುತ್ತಿದ್ದಾರೆ. ಏತನ್ಮಧ್ಯೆ ಸಚಿವ ಸಂಪುಟ ರಚನೆಗೆ ಕಾಂಗ್ರೆಸ್ ಹೈಕಮಾಂಡ್ ಭಾರೀ ಕಸರತ್ತು ನಡೆಸಿದೆ.

**ಸಚಿವ ಸ್ಥಾನ ಫಾರ್ಮುಲಾ:** ಪಕ್ಷದ ವಿವಿಧ ಬಣಗಳ ನಡುವೆ ಸಮತೋಲನ ಕಾಯ್ದುಕೊಳ್ಳುವ ಉದ್ದೇಶದಿಂದ 11:11:11 ಸಚಿವ ಸ್ಥಾನಗಳ ಫಾರ್ಮುಲಾ ಅಂತಿಮಗೊಳಿಸುವತ್ತ ಹೈಕಮಾಂಡ್ ಮುಂದಾಗಿದೆ ಎಂದು ತಿಳಿದು ಬಂದಿದೆ.

ಒಟ್ಟು 34 ಸದಸ್ಯರ ಸಚಿವ ಸಂಪುಟದಲ್ಲಿ ಮುಖ್ಯಮಂತ್ರಿ ಸೇರಿದಂತೆ 11 ಸ್ಥಾನಗಳನ್ನು ಹೈಕಮಾಂಡ್ ಆಯ್ಕೆಯ ನಾಯಕರಿಗೆ ಬಿಟ್ಟುಕೊಡಲಾಗಿದೆ.

**ಬದಲಾವಣೆ ಸಾಧ್ಯತೆ:** 11 ಸ್ಥಾನಗಳನ್ನು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಬಲಿಗರಿಗೆ ಹಾಗೂ 11 ಸ್ಥಾನಗಳನ್ನು ನೂತನ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರ ಆಪ್ತರಿಗೆ ನೀಡುವ ಕುರಿತು ಚರ್ಚೆ ನಡೆದಿದೆ. ಅಂತಿಮ ಹಂತದ ಮಾತುಕತೆಗಳ ಆಧಾರದಲ್ಲಿ ಈ ಸಂಖ್ಯೆಯಲ್ಲಿ ಸಣ್ಣಪುಟ್ಟ ಬದಲಾವಣೆಗಳಾಗುವ ಸಾಧ್ಯತೆಯನ್ನು ತಳ್ಳಿಹಾಕುವಂತಿಲ್ಲ.





### ಯುವ ಶಕ್ತಿಗೆ ಹೈ ಒತ್ತು

ಹೊಸ ಸರ್ಕಾರವು ಚುರುಕಾಗಿ ಕಾರ್ಯನಿರ್ವಹಿಸಲು ಯುವ, ಸಕ್ರಿಯ, ಉತ್ತಮ ಸಾಧನೆ ತೋರಿದ ಶಾಸಕರಿಗೆ ಮೊದಲ ಆದ್ಯತೆ ನೀಡಬೇಕು ಎಂದು ಹೈಕಮಾಂಡ್ ಸ್ಪಷ್ಟ ಸೂಚನೆ ನೀಡಿದೆ. ಸಚಿವ ಸ್ಥಾನ ಯಾರಿಗೆ ಸಿಗುತ್ತದೆ ಎಂಬುದೇ ಈ ಸರ್ಕಾರದ ಕಾರ್ಯಶೈಲಿ ಮತ್ತು ಜನರ ಮುಂದೆ ಮೂಡುವ ಚಿತ್ರಣವನ್ನು ನಿರ್ಧರಿಸಲಿದೆ ಎಂದು ಮೂಲ ಖಚಿತ ಪಡಿಸಿದೆ.

### ಮೊದಲ ಹಂತದಲ್ಲೇ 10ಕ್ಕೂ ಹೆಚ್ಚು ನಾಯಕರಿಗೆ ಅವಕಾಶ

ಡಿ.ಕೆ. ಶಿವಕುಮಾರ್ ಅವರೊಂದಿಗೆ ಮೊದಲ ಹಂತದಲ್ಲಿ ಕನಿಷ್ಠ 10 ಪ್ರಮುಖ ನಾಯಕರು ಸಚಿವರಾಗಿ ಪ್ರಮಾಣವಚನ ಸ್ವೀಕರಿಸುವ ಸಾಧ್ಯತೆ. ಆರಂಭದಲ್ಲಿ ಡಿಸಿಎಂ ಹುದ್ದೆ ಕುರಿತು ಚರ್ಚೆ ನಡೆದಿದ್ದರೂ, ಹೊಸ ಸಚಿವ ಸಂಪುಟದಲ್ಲಿ ಡಿಸಿಎಂಗಳ ನೇಮಕ ಇರದು ಎಂದು ಕಾಂಗ್ರೆಸ್ ಧುರೀಣರು ಸ್ಪಷ್ಟಪಡಿಸಿದ್ದಾರೆ.

### ಸಚಿವ ಸ್ಥಾನಕ್ಕೆ ಪ್ರಮುಖರ ಹೆಸರು



ಡಾ.ಯತೀಂದ್ರ, ಜಾರ್ಜ್, ಅಜಯ್ ಸಿಂಗ್, ರಾಮಲಿಂಗಾರೆಡ್ಡಿ, ಡಾ.ಜಿ.ಪರಂ, ಎಂ.ಬಿ.ಪಾಟೀಲ್, ಖಾದರ್, ಕೃಷ್ಣ ಬೈರೇಗೌಡ, ದಿನೇಶ್, ಬೈರತಿ ಸುರೇಶ್, ಜಮೀರ್, ಕೃಷ್ಣಮೂರ್ತಿ, ನಾರಾಯಣಸ್ವಾಮಿ, ನರೇಂದ್ರಸ್ವಾಮಿ, ಪುಟ್ಟರಂಗ ಶೆಟ್ಟಿ, ಜಯಚಂದ್ರ, ಸತೀಶ್ ಜಾರಕಿಹೊಳಿ, ಅಪ್ಪಾಜಿ ನಾಡಗೌಡ, ಎಚ್.ಕೆ.ಪಾಟೀಲ್, ಬಿ.ಆರ್.ಪಾಟೀಲ್, ಬಸವರಾಜ ರಾಯರೆಡ್ಡಿ, ಕೆ.ಎಂ.ಶಿವಲಿಂಗೇಗೌಡ, ಎನ್.ಎ.ಹ್ಯಾರಿಸ್ ಇತರೆ ಪ್ರಮುಖ ಹೆಸರು ಕೇಳಿ ಬಂದಿದೆ.

### ಶೀಘ್ರ ಕೆಪಿಸಿಸಿ ಅಧ್ಯಕ್ಷ ಆಯ್ಕೆ

ರಾಜ್ಯ ಕಾಂಗ್ರೆಸ್‌ನ ನೂತನ ಅಧ್ಯಕ್ಷರ ಆಯ್ಕೆಯನ್ನೂ ಶೀಘ್ರದಲ್ಲೇ ಘೋಷಿಸುವ ಸಾಧ್ಯತೆ ಇದೆ. ಈ ಹುದ್ದೆಗೆ ಸಚಿವ ಪ್ರಿಯಾಂಕ್ ಖರ್ಗೆ, ಸತೀಶ್ ಜಾರಕಿಹೊಳಿ ಅವರ ಹೆಸರು ಕೇಳಿಬರುತ್ತಿದೆ. ಕಳೆದ ಸರ್ಕಾರದಲ್ಲಿ ಸಚಿವರಾಗಿದ್ದ ಬಿ.ನಾಗೇಂದ್ರ, ಕೆ.ಎನ್.ರಾಜಣ್ಣಗೆ ಅವಕಾಶ ಸಿಗದ ಹಿನ್ನೆಲೆ, ಈ ಬಾರಿ ಪರಿಶಿಷ್ಟರಿಗೆ ಸೂಕ್ತ ಪ್ರಾತಿನಿಧ್ಯ ನೀಡುವ ವಿಚಾರ ಕಾಂಗ್ರೆಸ್‌ಗೆ ಪ್ರಮುಖ ಸವಾಲಾಗಿದೆ.

## ಆಯ ತಪ್ಪಿ ಬಿದ್ದು ಯುವಕರಿಬ್ಬರೂ ಸ್ಥಳದಲ್ಲೇ ದುರ್ಮರಣ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ತಾಲೂಕಿನ ಮಲಗಿನ ಕೆರೆಯ ಸಮೀಪ ಹುಣಸೂರು ಮಾಕೋಡು ರಸ್ತೆಯಲ್ಲಿ ಭಾನುವಾರ ಸಂಜೆ 3 ಗಂಟೆ ಸಮಯದಲ್ಲಿ ಘಟನೆ ನಡೆದಿದೆ.

ಮೃತ ಯುವಕರು ಹುಣಸೂರು ತಾಲೂಕಿನ ಗಾವಡಗೆರೆ ಹೋಬಳಿಯ ಮರೂರು ಗ್ರಾಮದ ಯುವಕರು. ಮೃತರಾದ ರಾಜ ನಾಯಕ (38) ಸುದೀಪ್ (25) ಸ್ಥಳದಲ್ಲೇ ಸಾವನಪ್ಪಿದ ಯುವಕರು. ರಾಜನಾಯಕ ಮದುವೆಯಾಗಿದ್ದು ಇಬ್ಬರು ಮಕ್ಕಳಿದ್ದರೆ ಸುದೀಪ್ 8 ತಿಂಗಳ ಹಿಂದೆ ಪ್ರೀತಿಸಿ ವಿವಾಹವಾಗಿದ್ದ.

**ಘಟನೆಯ ವಿವರ:**– ರಾಜನಾಯಕ ಮತ್ತು ಸುದೀಪ್ ಒಂದೇ ಗ್ರಾಮದವರಾಗಿದ್ದು ಇಬ್ಬರು ಸ್ನೇಹಿತರು ಇವರು ಪ್ರತಿನಿತ್ಯ ಎಳನೀರು ವ್ಯಾಪಾರ ಮಾಡಿಕೊಂಡು ಜೀವನ ನಡೆಸುತ್ತಿದ್ದು ನಾಳೆ ಸೋಮವಾರಕ್ಕೆ ಎಳನೀರು ಬೇಕಾಗಿರುವುದರಿಂದ ತೋಟಗಳನ್ನು ನೋಡಿಕೊಂಡು ಬರಲು ಹೋಗಿದ್ದರು ವಾಪಸ್ ಬರುವಾಗ ಬೈಕ್ ನಿಂದ ಆಯಾ ತಪ್ಪಿ ಬಿದ್ದು ಸ್ಥಳದಲ್ಲೇ ಮೃತ ಪಟ್ಟಿರುವ ಘಟನೆ ನಡೆದಿದೆ.

## ಖಂಡ್ರೆಗೆ ಡಿಸಿಎಂ, ರಹೀಂ ಖಾನ್‌ಗೆ ಸಚಿವ ಸ್ಥಾನಕ್ಕೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬೀದರ್



ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿ ಹಾಗೂ ಕಾಂಗ್ರೆಸ್ ಪಕ್ಷದ ಸಂಘಟನಾತ್ಮಕ ಬಲವರ್ಧನೆಗಾಗಿ ಅರಣ್ಯ, ಪರಿಸರ ಮತ್ತು ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರಿಗೆ ಉಪಮುಖ್ಯಮಂತ್ರಿ (ಡಿಸಿಎಂ) ಸ್ಥಾನ ಹಾಗೂ ಹಿರಿಯ ಶಾಸಕ ರಹೀಂ ಖಾನ್ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಕಾಂಗ್ರೆಸ್ ಯುವ ಮುಖಂಡ, ಬೀದರ ಜಿಲ್ಲಾ ವಕ್ಫ್ ಬೋರ್ಡ್ ಅಧ್ಯಕ್ಷ ಹಾಗೂ ಎನ್‌ಎಸ್‌ಯುಐ ರಾಷ್ಟ್ರೀಯ ಸಂಯೋಜಕ ಮೊಹಮ್ಮದ್ ಫಿರೋಜ್ ಖಾನ್ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಕಲ್ಯಾಣ ಕರ್ನಾಟಕದ 41 ವಿಧಾನಸಭಾ ಕ್ಷೇತ್ರಗಳ ಪೈಕಿ 37 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಜಯಗಳಿಸಿದ್ದು, ಆರು ಲೋಕಸಭಾ ಕ್ಷೇತ್ರಗಳಲ್ಲೂ ಕಾಂಗ್ರೆಸ್ ಗೆಲುವು ಸಾಧಿಸಿದೆ. ಹೀಗಾಗಿ ಈ ಭಾಗಕ್ಕೆ ಸರ್ಕಾರದಲ್ಲಿ ಸೂಕ್ತ ಪ್ರಾತಿನಿಧ್ಯ ನೀಡುವುದು ಅಗತ್ಯವಾಗಿದೆ ಎಂದು ತಿಳಿಸಿದ್ದಾರೆ.

## ಆಂಜನೇಯ ದೇಗುಲದಲ್ಲಿ ವಿಶೇಷ ಪೂಜೆ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ರಾಜ್ಯದಲ್ಲಿ ರಚನೆ ಆಗಲಿರುವ ನೂತನ ಕಾಂಗ್ರೆಸ್ ಸರಕಾರದಲ್ಲಿ ಭಾಲ್ಕಿ ಕ್ಷೇತ್ರದ ಶಾಸಕ ಈಶ್ವರ ಖಂಡ್ರೆ ಅವರಿಗೆ ಉಪ ಮುಖ್ಯಮಂತ್ರಿ ಹುದ್ದೆ ಸಿಗಲಿ ಎಂದು ಹಾರೈಸಿ ಅವರ ಅಭಿಮಾನಿಗಳು, ಹಿತೈಷಿಗಳು ನಗರದಲ್ಲಿ ವಿಶೇಷ ಪೂಜೆಯೊಂದಿಗೆ ಪ್ರಾರ್ಥನೆ ಸಲ್ಲಿಸಿದರು.

ನಗರದ ಆಂಜನೇಯ ದೇಗುಲದಲ್ಲಿ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರು, ಅಭಿಮಾನಿಗಳು ಸೇರಿ ಖಂಡ್ರೆ ಅವರ ಭಾವಚಿತ್ರದೊಂದಿಗೆ ಶನಿವಾರ ಆಂಜನೇಯ ದೇವರಿಗೆ ಖಂಡ್ರೆ ಹೆಸರಿನಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ನಂತರ ಪ್ರಮುಖರು ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಸರಕಾರದಲ್ಲಿ 2 ಸಲ ಸಚಿವರಾಗಿ ಈಶ್ವರ ಖಂಡ್ರೆ ಅವರು ರಾಜ್ಯದ ಪ್ರಗತಿಗೆ ಹೊಸ ದಿಕ್ಕು ನೀಡಿದ್ದಾರೆ.

ಈ ಹಿಂದಿನ ಮಾಜಿ ಸಿಎಂ ಸಿದ್ದರಾಮಯ್ಯ ಸರಕಾರದಲ್ಲಿ ಕಾಂಗ್ರೆಸ್ ಸರಕಾರದಲ್ಲಿ ಅರಣ್ಯ ಇಲಾಖೆ ಸಚಿವರಾಗಿ ಈಶ್ವರ ಖಂಡ್ರೆ ಅವರು ಹಸಿರು ಕ್ರಾಂತಿಗೈದಿದ್ದಾರೆ. ಕಳೆದ 3 ವರ್ಷಗಳಲ್ಲಿ ರಾಜ್ಯದಾದ್ಯಂತ 11 ಕೋಟಿ ಸಸಿಗಳನ್ನು ನೆಡುವ ಮೂಲಕ ದಾಖಲೆ ಬರೆದಿದ್ದಾರೆ.

ಸೇವೆ, ಪಕ್ಷ ನಿಷ್ಠೆ ಮತ್ತು ಹಿರಿತನವನ್ನು ಪರಿಗಣಿಸಿ ಖಂಡ್ರೆ ಅವರನ್ನು ಕಾಂಗ್ರೆಸ್ ಪಕ್ಷದ ವರಿಷ್ಠರು ಉಪ ಮುಖ್ಯಮಂತ್ರಿಗಳನ್ನಾಗಿ ಆಯ್ಕೆ ಮಾಡಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಪಕ್ಷದ ಪ್ರಧಾನ ಕಾರ್ಯದರ್ಶಿ ಪ್ರಕಾಶ ಮಾಶೆಟ್ಟೆ, ಯುವ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಶಿವಕುಮಾರ(ಟಿಂಕು) ರಾಜಭವನ, ಪ್ರಮುಖರಾದ ಅನಿಲ ಲೋಖಂಡೆ, ಕಪಿಲ ಕಲ್ಯಾಣೆ, ಸಂಗಮೇಶ ವಾಲೆ, ಕುಮಾರ, ಮಲ್ಲಿಕಾರ್ಜುನ, ವಿನೋದ, ಶಿವಾನಂದ, ಸಂತೋಷ ಸೇರಿದಂತೆ ಹಲವರು ಇದ್ದರು.

### ನಮ್ಮ ಕರ್ನಾಟಕ ಸೇನೆಯಿಂದ ಪೂಜೆ

ಶಾಸಕ ಈಶ್ವರ ಖಂಡ್ರೆ ಅವರಿಗೆ ಉಪ ಮುಖ್ಯಮಂತ್ರಿ ಹುದ್ದೆ ಸಿಗಲಿ ಎಂದು ಹಾರೈಸಿ ನಮ್ಮ ಕರ್ನಾಟಕ ಸೇನೆಯ ಜಿಲ್ಲಾ ಘಟಕದ ಪದಾಧಿಕಾರಿಗಳು ಆಂಜನೇಯ ದೇವರಿಗೆ ವಿಶೇಷ ಪೂಜೆ ಸಲ್ಲಿಸಿದರು. ತಾಲೂಕಿನ ಚಳಕಾಪುರ ಗ್ರಾಮದ ಆಂಜನೇಯ ದೇವಸ್ಥಾನದಲ್ಲಿ ನಮ್ಮ ಕರ್ನಾಟಕ ಸೇನೆಯ ಜಿಲ್ಲಾಧ್ಯಕ್ಷ ಗಣೇಶ ಪಾಟೀಲ್ ಜ್ಯಾಂತಿ ನೇತೃತ್ವದಲ್ಲಿ ಪದಾಧಿಕಾರಿಗಳು ಖಂಡ್ರೆ ಭಾವಚಿತ್ರದೊಂದಿಗೆ ಶನಿವಾರ ಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಸಂಘಟನೆ ಜಿಲ್ಲಾ ಉಪಾಧ್ಯಕ್ಷ ರಾಜಕುಮಾರ ಪಾಟೀಲ್, ಜಿಲ್ಲಾ ಯುವ ಘಟಕದ ಅಧ್ಯಕ್ಷ ಸುದೀಪ ತುಗಾವೆ, ತಾಲೂಕು ಅಧ್ಯಕ್ಷ ಬಸವರಾಜ ಕಾರಬಾರಿ, ಗೌರವಾಧ್ಯಕ್ಷ ಪ್ರಶಾಂತ ಹಣಮಶೆಟ್ಟಿ, ಉಪಾಧ್ಯಕ್ಷ ಮಹೇಶ ರಾಚೋಟೆ, ಅನಿಲ ಪಾಟೀಲ್ ಸೇರಿದಂತೆ ಮುಂತಾದವರು ಇದ್ದರು.






## ಡಿ.ಕೆ ಶಿವಕುಮಾರ್ ನೇತೃತ್ವದ ಸಚಿವ ಸಂಪುಟ ರಚನೆಗೆ ಇನ್ನೂ ಪ್ರಸ್ತಾವನೆ ಬಂದಿಲ್ಲ: ಮಲ್ಲಿಕಾರ್ಜುನ ಖರ್ಗೆ

## ಈಶ್ವರ ಖಂಡ್ರೆ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಲು ಪರಿಗಣಿಸಲಿ

ರಾಜ್ಯ ರಾಜಕಾರಣದಲ್ಲಿ ಸಚಿವ Eshwar Khandre ಅವರು ತಮ್ಮ ಸರಳತೆ, ಪ್ರಾಮಾಣಿಕತೆ ಹಾಗೂ ಜನಪರ ಕಾರ್ಯಗಳ ಮೂಲಕ ವಿಶಿಷ್ಟ ಸ್ಥಾನವನ್ನು ಗಳಿಸಿಕೊಂಡಿದ್ದಾರೆ. ಹಲವು ದಶಕಗಳಿಂದ ಸಾರ್ವಜನಿಕ ಜೀವನದಲ್ಲಿ ತೊಡಗಿಸಿಕೊಂಡಿರುವ ಅವರು, ಜನರ ಸಮಸ್ಯೆಗಳಿಗೆ ಸ್ಪಂದಿಸುವ ನಾಯಕನಾಗಿ ಗುರುತಿಸಿಕೊಂಡಿದ್ದಾರೆ.

### ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ಕರ್ನಾಟಕದ ಅಭಿವೃದ್ಧಿಗೆ ಹಾಗೂ ಪಕ್ಷದ ಸಂಘಟನೆಗೆ ಅವರು ನೀಡಿರುವ ಕೊಡುಗೆ ಗಮನಾರ್ಹವಾಗಿದೆ. ಗ್ರಾಮೀಣ ಭಾಗಗಳ ಅಭಿವೃದ್ಧಿ, ರೈತರ ಸಮಸ್ಯೆಗಳ ಪರಿಹಾರ, ಸಾಮಾಜಿಕ ಸಾಮರಸ್ಯ ಹಾಗೂ ಜನಸೇವೆಗೆ ಆದ್ಯತೆ ನೀಡುವ ಮೂಲಕ ಅವರು ಜನರ ವಿಶ್ವಾಸ ಗಳಿಸಿದ್ದಾರೆ. ಇಂತಹ ಅನುಭವೀ ಹಾಗೂ ಜನಪ್ರಿಯ ನಾಯಕರಿಗೆ ಹೆಚ್ಚಿನ ಜವಾಬ್ದಾರಿ ನೀಡುವುದು ರಾಜ್ಯದ ಅಭಿವೃದ್ಧಿಗೆ ಸಹಕಾರಿಯಾಗಲಿದೆ.

ಆದ್ದರಿಂದ ಮುಖ್ಯಮಂತ್ರಿ ಹಾಗೂ ಪಕ್ಷದ ವರಿಷ್ಠರು ಈಶ್ವರ ಖಂಡ್ರೇ ಅವರಿಗೆ ಉಪ ಮುಖ್ಯಮಂತ್ರಿ (ಡಿ.ಸಿ.ಎಂ) ಸ್ಥಾನ ನೀಡುವ ಬಗ್ಗೆ ಗಂಭೀರವಾಗಿ ಪರಿಗಣಿಸಬೇಕು ಎಂಬುದು ಅನೇಕ ಕಾರ್ಯಕರ್ತರು ಮತ್ತು ಅಭಿಮಾನಿಗಳ ಆಶಯವಾಗಿದೆ. ಅವರ ಅನುಭವ, ಆಡಳಿತ ಕೌಶಲ್ಯ ಮತ್ತು ಜನಸೇವೆಯ ಮನೋಭಾವ ರಾಜ್ಯದ ಆಡಳಿತಕ್ಕೆ ಮತ್ತಷ್ಟು ಬಲ ನೀಡಬಲ್ಲದು.

ಯೋಗ್ಯತೆ ಮತ್ತು ಸೇವೆಯನ್ನು ಗುರುತಿಸಿ ಜವಾಬ್ದಾರಿಗಳನ್ನು ನೀಡಿದಾಗ ಪ್ರಜಾಪ್ರಭುತ್ವ ಮತ್ತಷ್ಟು ಬಲಗೊಳ್ಳುತ್ತದೆ. ಈ ನಿಟ್ಟಿನಲ್ಲಿ ಈಶ್ವರ ಖಂಡ್ರೇ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡುವ ಕುರಿತು ಸರ್ಕಾರ ಹಾಗೂ ಪಕ್ಷದ ನಾಯಕತ್ವ ಸಕಾರಾತ್ಮಕ ನಿರ್ಧಾರ ಕೈಗೊಳ್ಳಲಿ ಎಂಬುದು ಜನರ ನಿರೀಕ್ಷೆಯಾಗಿದೆ.



## ಶಿಕ್ಷಣ ಇಲಾಖೆಯಲ್ಲಿ ಸೇವೆ ಸಲ್ಲಿಸುವುದು ಪುಣ್ಯದ ಕೆಲಸ




> ಕಷ್ಟದ ಸಮಯದಲ್ಲಿ ಆಶ್ರಯ ನೀಡಿದ ಶಿಕ್ಷಣ ಸಂಸ್ಥೆ ಮತ್ತು ಗೆಳೆಯರ ಸಹಕಾರ ಜೀವಮಾನದಲ್ಲಿ ಮರೆಯಲಾಗುವುದಿಲ್ಲ. ಶಿಕ್ಷಕರಾದವರು ಸದಾ ಹಸನ್ಮುಖಿಯಾಗಿ, ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಗಾಗಿ ದುಡಿಯುತ್ತಿರಬೇಕು.
>
> –ವಿಜಯಕುಮಾರ ಗೌಡಗಾವೆ
> ನಿವೃತ್ತ ಶಿಕ್ಷಕರು, ಪ್ರಿಯದರ್ಶಿ ಸ್ಮಾರಕ ಪ್ರೌಢಶಾಲೆ, ಭಾಲ್ಕಿ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ಶಿಕ್ಷಣ ಇಲಾಖೆಯಲ್ಲಿ ಸೇವೆ ಸಲ್ಲಿಸುವುದು ಪುಣ್ಯದ ಕೆಲಸವಾಗಿದೆ ಎಂದು ಜನಪ್ರೀಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ। ದೇವಿದಾಸ ರೇಷ್ಮೆ ಅಭಿಪ್ರಾಯಪಟ್ಟರು.

ಪಟ್ಟಣದ ಪ್ರಿಯದರ್ಶಿ ಸ್ಮಾರಕ ಪ್ರೌಢಶಾಲೆಯಲ್ಲಿ ಶನಿವಾರ ನಡೆದ ವಯೋನಿವೃತ್ತ ಶಿಕ್ಷಕ ವಿಜಯಕುಮಾರ ಗೌಡಗಾವೆಯವರ ಅಭಿನಂದನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸರ್ಕಾರದ ನಿಯಮದಂತೆ 60 ವರ್ಷಗಳ ನಂತರ ಎಲ್ಲರೂ ಸೇವೆಯಿಂದ ನಿವೃತ್ತಿಯಾಗುವುದು ಸರ್ವೇಸಾಮಾನ್ಯ, ಅದರೆ ಶಿಕ್ಷಣ ಇಲಾಖೆಯಲ್ಲಿ ಸೇವೆ ಸಲ್ಲಿಸಿ, ಮಕ್ಕಳೊಂದಿಗೆ ಬೆರೆತು ಮಾಡುವ ಸೇವೆ ಸ್ಮರಣೀಯವಾಗಿರುತ್ತದೆ. ಹೀಗಾಗಿ ಶಿಕ್ಷಣ ಇಲಾಖೆಯಲ್ಲಿ ಸೇವೆ ಸಲ್ಲಿಸುವುದು ಪುಣ್ಯದ ಕೆಲಸವೆಂದು ಭಾವಿಸಿದ್ದೇನೆ. ಶಿಕ್ಷಕ ವಿಜಯಕುಮಾರ ಗೌಡಗಾವೆಯವರು ಸಂಸ್ಥೆಯ ಕಷ್ಟದ ಕಾಲದಲ್ಲಿಯೂ ಉತ್ತಮ ಕಾರ್ಯ ನಿರ್ವಹಿಸಿ, ನಮ್ಮ ಶಿಕ್ಷಣ ಸಂಸ್ಥೆ ಇಷ್ಟು ಎತ್ತರಕ್ಕೆ ಬೆಳೆಸುವಲ್ಲಿ ಸಹಕಾರಿಯಾಗಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸಂಸ್ಥೆಯ ಕಾರ್ಯದರ್ಶಿ ರಮೇಶಕುಮಾರ ಹರನಾಳ, ವಿಜಯಕುಮಾರ ಗೌಡಗಾವೆಯವರು ವಯೋಸಹಜ ನಿವೃತ್ತಿಯಾಗಿದ್ದಾರೆ. ಆವರು ಪ್ರವೃತ್ತಿಯಿಂದ ನಿವೃತ್ತರಾಗಿಲ್ಲ. ಮುಂದೆಯೂ ವಿದ್ಯಾರ್ಥಿಗಳೊಂದಿಗೆ ಬೆರೆತು ಸೇವೆ ಮಾಡುವ ಹುಮ್ಮಸ್ಸು ಅವರಲ್ಲಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಮುಖ್ಯಶಿಕ್ಷಕ ಚಂದ್ರಕಾಂತ ವಾಡಿಕರ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಕ್ಷಣ ಇಲಾಖೆಯ ಸಿಆರ್‌ಪಿ ನೀಲಕಂಠ ಕುರ್ಣೆ, ಶಿಕ್ಷಕ ಧನರಾಜ ನೀಲಂಗೆ, ನಿವೃತ್ತ ಮುಖ್ಯಶಿಕ್ಷಕ ಜಯರಾಜ ದಾಬಶೆಟ್ಟಿ ನಿವೃತ್ತ ಶಿಕ್ಷಕ ವಿಜಯಕುಮಾರ ಗೌಡಗಾವೆಯವರ ಕಾರ್ಯಕ್ಷಮತೆಯ ಬಗ್ಗೆ ಮಾತನಾಡಿದರು. ಇದೇವೇಳೆ ಜನಪ್ರೀಯ ಶಿಕ್ಷಣ ಸಂಸ್ಥೆ, ಶಿಕ್ಷಣ ಇಲಾಖೆ, ವಿಜಯಕುಮಾರ ಗೆಳೆಯರಬಳಗ ಮತ್ತು ನಾಗರಿಕರಿಂದ ನಿವೃತ್ತ ಶಿಕ್ಷಕ ವಿಜಯಕುಮಾರ ಗೌಡಗಾವೆ ದಂಪತಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಪ್ರಮುಖರಾದ ಹೇಮಲತಾ ರೇಷ್ಮೆ, ಸುಕನ್ಯಾ ರೇಷ್ಮೆ, ಆಶಾ ರಾಠೋಡ, ಕಸಾಪ ಉಪಾಧ್ಯಕ್ಷ ಮಲ್ಲಿಕಾರ್ಜುನ ಕುಂಚಗೆ, ಶಿಕ್ಷಕ ಶಿವಕುಮಾರ ಸ್ವಾಮಿ, ಚಂದ್ರಕಾಂತ ಬಿರಾದಾರ, ಸಂಜೀವಕುಮಾರ ಮೇತ್ರೆ, ಶಿವಕುಮಾರ, ತುಕಾರಾಮ, ಅನೀಲಕುಮಾರ ಗಾಯಕವಾಡ, ವಿಠಲರಾವ ಬಿರಾದಾರ ಉಪಸ್ಥಿತರಿದ್ದರು. ಸುನೀಲಕುಮಾರ ಮೇತ್ರೆ ಸ್ವಾಗತಿಸಿದರು. ಶಿವಕುಮಾರ ಸ್ವಾಮಿ ನಿರೂಪಿಸಿದರು. ಸುಕನ್ಯಾ.ಆರ್ ವಂದಿಸಿದರು.

## ಖಂಡ್ರೆ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು: ಸಂಗಮೇಶ ಮೂಲಗೆ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**




ವೀರಶೈವ–ಲಿಂಗಾಯತ ಸಮುದಾಯವು ರಾಜ್ಯದ ಅತಿದೊಡ್ಡ ಸಮುದಾಯಗಳಲ್ಲಿ ಒಂದಾಗಿದ್ದು, ಕಾಂಗ್ರೆಸ್ ಪಕ್ಷದ 36 ಶಾಸಕರು ಈ ಸಮುದಾಯವನ್ನು ಪ್ರತಿನಿಧಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ ಭಾಗದ ಪ್ರಬಲ ನಾಯಕರು, ಅಖಿಲ ಭಾರತ ವೀರಶೈವ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರು ಹಾಗೂ ಹಿರಿಯ ಸಚಿವರಾದ ಈಶ್ವರ ಖಂಡ್ರೆ ಅವರನ್ನು ಉಪ ಮುಖ್ಯಮಂತ್ರಿ ಹುದ್ದೆಗೆ ಪರಿಗಣಿಸಬೇಕೆಂದು ವೀರಶೈವ ಲಿಂಗಾಯತ ಸಮಾಜದ ಯುವ ಮುಖಂಡರಾದ ಸಂಗಮೇಶ ಮೂಲಗೆ ಮನವಿ ಮಾಡಿದರು."

ಎಐಸಿಸಿ ಅಧ್ಯಕ್ಷರಾದ ಶ್ರೀ ಮಲ್ಲಿಕಾರ್ಜುನ ಖರ್ಗೆ ಅವರು, ಶ್ರೀ ರಾಹುಲ್ ಗಾಂಧಿ ಅವರು ಹಾಗೂ ಕಾಂಗ್ರೆಸ್ ಹೈಕಮಾಂಡ್ ನಾಯಕರಿಗೆ ವಿನಮ್ರ ಮನವಿ.

ಕರ್ನಾಟಕದಲ್ಲಿ ಹೊಸ ನಾಯಕತ್ವದೊಂದಿಗೆ ಸರ್ಕಾರ ರಚನೆಯಾಗುತ್ತಿರುವ ಈ ಸಂದರ್ಭದಲ್ಲಿ, ರಾಜ್ಯದ ಎಲ್ಲ ಪ್ರದೇಶಗಳು ಹಾಗೂ ಸಮುದಾಯಗಳಿಗೆ ನ್ಯಾಯಯುತ ಪ್ರಾತಿನಿಧ್ಯ ನೀಡುವುದು ಅತ್ಯಂತ ಮಹತ್ವದ್ದಾಗಿದೆ. ಶ್ರೀ ಈಶ್ವರ ಖಂಡ್ರೆ ಅವರು ಹಲವು ದಶಕಗಳಿಂದ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಸಿಪಾಯಿಯಾಗಿ ಕಾರ್ಯನಿರ್ವಹಿಸಿದ್ದು, ಕೆಪಿಸಿಸಿ ಕಾರ್ಯಾಧ್ಯಕ್ಷರಾಗಿ ಪಕ್ಷ ಸಂಘಟನೆಯನ್ನು ಬಲಪಡಿಸುವಲ್ಲಿ ಮಹತ್ವದ ಪಾತ್ರವಹಿಸಿದ್ದಾರೆ. ಸಂಕಷ್ಟದ ಸಂದರ್ಭಗಳಲ್ಲಿಯೂ ಪಕ್ಷದ ಪರವಾಗಿ ದೃಢವಾಗಿ ನಿಂತು, ರಾಜ್ಯದಾದ್ಯಂತ ಕಾಂಗ್ರೆಸ್ ಸಂಘಟನೆಯನ್ನು ಬಲಿಷ್ಠಗೊಳಿಸಲು ಶ್ರಮಿಸಿದ್ದಾರೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಕಾಂಗ್ರೆಸ್ ಪಕ್ಷದ ನೆಲೆಯನ್ನು ಗಟ್ಟಿಗೊಳಿಸುವಲ್ಲಿ ಅವರ ಕೊಡುಗೆ ಅಪಾರವಾಗಿದೆ. ಅನುಭವಿ ಆಡಳಿತಗಾರರಾಗಿ, ಸಮರ್ಥ ಸಂಘಟಕರಾಗಿ ಹಾಗೂ ಜನನಾಯಕರಾಗಿ ಗುರುತಿಸಿಕೊಂಡಿರುವ ಶ್ರೀ ಈಶ್ವರ ಖಂಡ್ರೆ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡುವುದರಿಂದ ವೀರಶೈವ–ಲಿಂಗಾಯತ ಸಮುದಾಯದ ವಿಶ್ವಾಸ ಮತ್ತಷ್ಟು ಬಲಗೊಳ್ಳುವುದರ ಜೊತೆಗೆ, ಕಲ್ಯಾಣ ಕರ್ನಾಟಕ ಭಾಗಕ್ಕೂ ಸಮರ್ಪಕ ಪ್ರಾತಿನಿಧ್ಯ ದೊರೆಯಲಿದೆ.

ಇದು ಪಕ್ಷದ ಸಾಮಾಜಿಕ ಸಮತೋಲನ ಮತ್ತು ರಾಜಕೀಯ ಬಲವರ್ಧನೆಗೂ ಸಹಕಾರಿಯಾಗಲಿದೆ.

ಪಕ್ಷಕ್ಕಾಗಿ ದುಡಿದವರಿಗೆ ಗೌರವ, ಸಮುದಾಯಕ್ಕೆ ನ್ಯಾಯ, ಕಲ್ಯಾಣ ಕರ್ನಾಟಕಕ್ಕೆ ಪ್ರಾತಿನಿಧ್ಯ – ಈ ಮೂರು ಕಾರಣಗಳಿಗಾಗಿ ಶ್ರೀ ಈಶ್ವರ ಖಂಡ್ರೆ ಅವರನ್ನು ಉಪ ಮುಖ್ಯಮಂತ್ರಿಯನ್ನಾಗಿ ನೇಮಿಸಬೇಕು.

"ಪಕ್ಷ ಸಂಘಟನೆಗೆ ಶಕ್ತಿ ತುಂಬಿದ ನಾಯಕ, ವೀರಶೈವ–ಲಿಂಗಾಯತ ಸಮುದಾಯದ ಪ್ರಬಲ ಧ್ವನಿ, ಕಲ್ಯಾಣ ಕರ್ನಾಟಕದ ಹೆಮ್ಮೆಯ ಪುತ್ರ –ಶ್ರೀ ಈಶ್ವರ ಖಂಡ್ರೆ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ವೀರಶೈವ ಲಿಂಗಾಯತ ಸಮಾಜದ ಯುವ ಮುಖಂಡರಾದ ಸಂಗಮೇಶ ಮೂಲಗೆ ಮನವಿ ಮಾಡಿದರು."

## ಈಶ್ವರ್ ಖಂಡ್ರೆ ಅವರಿಗೆ ಡಿಸಿಎಂ, ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಆಗ್ರಹ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**



ಜೂ. 3 ರಂದು ರಾಜ್ಯದಲ್ಲಿ ಹೊಸ ಸರ್ಕಾರ ಅಸ್ತಿತ್ವಕ್ಕೆ ಬರುತ್ತಿದ್ದು, ಆ ಹೊಸ ಸರ್ಕಾರದಲ್ಲಿ ಈಶ್ವರ್ ಖಂಡ್ರೆ ಅವರಿಗೆ ಉಪ ಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಸ್ಥಾನ ನೀಡಬೇಕು ಎಂದು ಮಾಜಿ ಜಿಲ್ಲಾ ಪಂಚಾಯತ್ ಅಧ್ಯಕ್ಷ ಶಿವರಾಜ ಹಾಸನಕರ್ ಆಗ್ರಹಿಸಿದರು.

ರವಿವಾರ ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಈಶ್ವರ್ ಖಂಡ್ರೆ ಅವರು ಕಾಂಗ್ರೆಸ್ ನ ಧೀಮಂತ ನಾಯಕರಾಗಿದ್ದಾರೆ. ಕಾಂಗ್ರೆಸ್ ಪಕ್ಷಕ್ಕಾಗಿ ಅವರು ಅಪಾರವಾದ ಕೊಡುಗೆ ನೀಡಿದ್ದು, ರಾಜ್ಯದಾದ್ಯಂತ ತನ್ನದೇಯಾದ ಛಾಪು ಮೂಡಿಸಿದ್ದಾರೆ ಎಂದರು.

ಈಶ್ವರ್ ಖಂಡ್ರೆ ಅವರು ಎರಡು ದಶಕಗಳ ಕಾಲ ನಾಲ್ಕು ಬಾರಿ ಶಾಸಕರಾಗಿ, ಸಚಿವರಾಗಿ ಆಯ್ಕೆಯಾಗಿ ಅನೇಕ ಜನಪರ ಕೆಲಸಗಳು ಮಾಡಿದ್ದಾರೆ. ಹಾಗೆಯೇ ಅಖಿಲ ಭಾರತೀಯ ವೀರಶೈವ ಲಿಂಗಾಯತ ಮಹಾಸಭೆಯ ಅಧ್ಯಕ್ಷರಾಗಿಯೂ ಅವರು ಕೆಲಸ ಮಾಡಿದ್ದಾರೆ. ಎಲ್ಲ ಜಾತಿ ಜನಾಂಗದ ಜನರಿಗೆ ತಮ್ಮ ಜೊತೆಗೆ ತೆಗೆದುಕೊಂಡು ಹೋಗುವ ಕೆಲಸ ಅವರು ಮಾಡುತ್ತಿದ್ದಾರೆ ಎಂದು ಅವರು ಹೇಳಿದರು.

ಜಾತ್ಯತೀತ ಸಿದ್ಧಾಂತದ ತತ್ವದ ಮೇಲೆ ಅಪಾರವಾದ ನಂಬಿಕೆ ಇಟ್ಟುಕೊಂಡಿರುವ ಈಶ್ವರ್ ಖಂಡ್ರೆ ಅವರು, ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಕೂಡ ನ್ಯಾಯ ಕೊಡಿಸುತ್ತಾರೆ. ಬರುವ 2028ರ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಬೇಕಾದರೆ ಈಶ್ವರ್ ಖಂಡ್ರೆ ಅವರನ್ನು ಡಿಸಿಎಂ ಹಾಗೂ ಕೆಪಿಸಿಸಿ ಅಧ್ಯಕ್ಷ ಸ್ಥಾನ ನೀಡಬೇಕು ಎಂದು ಅವರು ಆಗ್ರಹಿಸಿದರು.

ಪಿ ಎಲ್ ಡಿ ಬ್ಯಾಕ್ ಮಾಜಿ ಅಧ್ಯಕ್ಷ ಮಡಿವಾಳಪ್ಪ ಮಂಗಲಗಿ, ಕಾಂಗ್ರೆಸ್ ಮುಖಂಡರುಗಳಾದ ನಿಸಾರ್ ಅಹಮ್ಮದ್, ಗುಂಡೆರಾವ್ ಪಾಟೀಲ್, ಮಹಮ್ಮದ್ ಖಾನ್, ಮುಸ್ತಾಕ್ ಅಹಮ್ಮದ್, ಪ್ರದೀಪ್ ನಾಟೆಕರ್, ಸೋನು ನಾಗಸೇನ್, ರಾಜಕುಮಾರ್ ಹಾಳೆ, ಮಲ್ಲಿಕಾರ್ಜುನ್ ಹಾಲಿಪುರ್ಗಾ ಹಾಗೂ ರಾಜಕುಮಾರ್ ನಾಯಕೋಡೆ ಸೇರಿದಂತೆ ಇತರರು ಪತ್ರಿಕಾಗೋಷ್ಠಿಯಲ್ಲಿ ಇದ್ದರು.

## ಖಂಡ್ರೆಗೆ ಡಿಸಿಎಂ ಸ್ಥಾನ ನೀಡಲು ಸಂತೋಷ್ ಬಿರಾದಾರ್ ಮನವಿ



**ಕಮಲನಗರ:** ಕರ್ನಾಟಕದ ನೂತನ ಕಾಂಗ್ರೆಸ್ ಸರ್ಕಾರದಲ್ಲಿ ಪ್ರಾದೇಶಿಕ ಸಮತೋಲನ ಕಾಯ್ದುಕೊಳ್ಳಲು ಮತ್ತು ಕಲ್ಯಾಣ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿಗಾಗಿ ಹಿರಿಯ ಶಾಸಕ ಶ್ರೀ ಈಶ್ವರ ಖಂಡ್ರೆ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಕಮಲನಗರದ ಯುವ ಕಾಂಗ್ರೆಸ್ ಮುಖಂಡ ಶ್ರೀ ಸಂತೋಷ ಬಿರಾದಾರ್ ಹೈಕಮಾಂಡ್‌ಗೆ ವಿನಂತಿಸಿದ್ದಾರೆ.

ಈ ಕುರಿತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಜನಪ್ರಿಯ ನಾಯಕ ರಾಹುಲ್ ಗಾಂಧಿ ಅವರಿಗೆ ಪತ್ರಿಕಾ ಪ್ರಕಟಣೆ ಮೂಲಕ ಮನವಿ ಮಾಡಿರುವ ಅವರು, ಪ್ರಮುಖವಾಗಿ ಮೂರು ಅಂಶಗಳನ್ನು ಉಲ್ಲೇಖಿಸಿದ್ದಾರೆ:


**ಕಲ್ಯಾಣ ಕರ್ನಾಟಕಕ್ಕೆ ನ್ಯಾಯ:** ಹಿಂದುಳಿದ ಈ ಭಾಗದ ಪ್ರಗತಿ ಹಾಗೂ ಜನರ ಧ್ವನಿಯಾಗಲು ದಕ್ಷ ನಾಯಕ ಈಶ್ವರ ಖಂಡ್ರೆ ಅವರಿಗೆ ಉನ್ನತ ಪ್ರಾತಿನಿಧ್ಯ ನೀಡುವುದು ಅತ್ಯಗತ್ಯ.

**ದೀರ್ಘ ಆಡಳಿತಾತ್ಮಕ ಅನುಭವ:** ಪಕ್ಷ ನಿಷ್ಠೆ, ಅಪಾರ ಜನಬೆಂಬಲ ಹಾಗೂ ದೀರ್ಘಕಾಲದ ರಾಜಕೀಯ ಅನುಭವ ಹೊಂದಿರುವ ಖಂಡ್ರೆ ಅವರು ರಾಹುಲ್ ಗಾಂಧಿಯವರ ಪ್ರಾದೇಶಿಕ ಸಬಲೀಕರಣದ ಆಶಯಕ್ಕೆ ಸೂಕ್ತ ನಾಯಕರಾಗಿದ್ದಾರೆ.

**ಪ್ರಾದೇಶಿಕ ಸಮತೋಲನ:** ಮುಖ್ಯಮಂತ್ರಿ ಶ್ರೀ ಡಿ.ಕೆ. ಶಿವಕುಮಾರ್ ಅವರ ಸಚಿವ ಸಂಪುಟದಲ್ಲಿ ಈಶ್ವರ ಖಂಡ್ರೆ ಅವರಿಗೆ ಡಿಸಿಎಂ ಸ್ಥಾನ ನೀಡುವ ಮೂಲಕ ಕಲ್ಯಾಣ ಕರ್ನಾಟಕದ ಜನತೆಗೆ ಉನ್ನತ ಗೌರವ ಹಾಗೂ ನ್ಯಾಯ ಒದಗಿಸಿಕೊಡಬೇಕು ಎಂದು ಸಂತೋಷ ಬಿರಾದಾರ್ ಕಮಲನಗರ ಒತ್ತಾಯಿಸಿದ್ದಾರೆ.

## ನೀರು, ನೆಲ, ಜನರ ವಿಚಾರದಲ್ಲಿ ರಾಜಕಾರಣ ಮಾಡುವುದಿಲ್ಲ: ಬೊಮ್ಮಾಯಿ

• **ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ**



ಚಿಕ್ಕಬಳ್ಳಾಪುರ ಮತ್ತು ಕೋಲಾರ ಬರ ಪೀಡಿತ ಜಿಲ್ಲೆಗಳಿಗೆ ಹೊಸ ಮುಖ್ಯಮಂತ್ರಿಗಳು ನೀರು ತಂದು ನೀರಿನ ದಾಹ ನೀಗಿಸಬೇಕು. ನಾವು ಎಲ್ಲ ರೀತಿಯ ಸಹಕಾರ ನೀಡುತ್ತೇವೆ. ನೀರು, ನೆಲ, ಜನರ ವಿಚಾರದಲ್ಲಿ ನಾವು ರಾಜಕಾರಣ ಮಾಡುವುದಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.

ಇಂದು ಚಿಕ್ಕಬಳ್ಳಾಪುರದಲ್ಲಿ ನಡೆದ ಚಿಕ್ಕಬಳ್ಳಾಪುರ ಕಾರ್ಯನಿರತ ಪತ್ರಕರ್ತರ ಸಂಘದ ಪತ್ರಕರ್ತರ ಮಕ್ಕಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ದಿಕ್ಸೂಚಿ ಭಾಷಣ ಮಾಡಿದರು.

ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಯ ಮಣ್ಣು ಬಹಳ ಶ್ರೇಷ್ಠವಾಗಿರುವಂಥದ್ದು ಇಲ್ಲಿಯ ರೈತರ ಬೆವರಿನ ಹನಿ ಭೂಮಿಗೆ ಬಿದ್ದರೆ ಭೂಮಿ ತಾಯಿ ಒಳ್ಳೆಯ ಬೆಳೆ ಕೊಡುತ್ತಾಳೆ ಒಂದು ಕಾಲದಲ್ಲಿ ಇಡೀ ಬೆಂಗಳೂರಿಗೆ ತರಕಾರಿ, ಹಣ್ಣು, ರೇಷ್ಮೆ, ಕೊಡುವ ಕೆಲಸ ಈ ಜಿಲ್ಲೆಗಳು ಮಾಡುತ್ತಿದ್ದವು. ಇಲ್ಲಿ ಐದು ನದಿಗಳಿದ್ದರೂ ಬತ್ತಿ ಹೋಗಿವೆ. ಪಶ್ಚಿಮ ಘಟ್ಟದಿಂದ ಹರಿದು ಬರುವಜೀವಸೆಲೆ ನಿಂತು ಹೋಗಿದೆ. ಪಶ್ಚಿಮ ಘಟ್ಟದಲ್ಲಿ ನೀರಿನ ಸೆಲೆಯನ್ನು ಉಳಿಸುವ ಪಯತ್ನ ಮಾಡದ ಕಾರಣ ಇದೆಲ್ಲ ಆಗಿದೆ ಎಂದರು.

**ಎತ್ತಿನಹೊಳೆ ಯೋಜನೆ**

ನಾನು ನೀರಾವರಿ ಸಚಿವನಿದ್ದಾಗ ಕೋಲಾರದ ಪತಕರ್ತರು ಇಲ್ಲಿ ಫ್ಲೋರೈಡ್ ಯುಕ್ತ ನೀರಿದೆ ಅದನ್ನು ಬಂದು ನೋಡಿ ಎಂದು ಹೇಳಿದರು. ನಾನು ಬಂದು ನೋಡಿ ತಾಂತ್ರಿಕ ತಜ್ಞರೊಡನೆ ಮಾತನಾಡಿದೆ. ಅಂತಾರಾಜ್ಯ ವಿವಾದ ಇಲ್ಲದಂತೆ ಎತ್ತಿನ ಹೊಳೆ ಯೋಜನೆಯನ್ನು ಮಾಡಿದೆ. ಅದಕ್ಕೂ ಮೊದಲು ನೇತ್ರಾವತಿ ತಿರುವು ಯೋಜನೆ ಪ್ರಸ್ತಾಪ ಇತ್ತು. ಅದರಿಂದ ಸುಮಾರು 11 ಸಾವಿರ ಹೆಕ್ಟೇರ್ ಅರಣ್ಯ ನಾಶವಾಗುತ್ತಿತ್ತು. ಹೀಗಾಗಿ ಅದು ಸಾಧ್ಯವಿಲ್ಲವಾಯಿತು. ನನ್ನ ಉದ್ದೇಶ ಪೈಪ್ ಲೈನ್ ಮೂಲಕ ನೀರು ತಂದಿದ್ದರೆ ಹತ್ತು ಟಿಎಂಸಿ ನೀರು ಎರಡೂ ಜಿಲ್ಲೆಗೆ ಕೊಡಬಹುದಿತ್ತು. ಯಾರಿಗೆ ತಾಂತ್ರಿಕ ಜ್ಞಾನ ಇಲ್ಲವೋ ಅವರು ಅಲ್ಲಿ ನೀರೇ ಇಲ್ಲ ಎಂದು ಅಭಿಪ್ರಾಯ ಸೃಷ್ಟಿಸಿದರು. ಅದಕ್ಕಾಗಿ ಎರಡು ವರ್ಷ ಹಾಳಾಯಿತು. ಆ ನಂತರ ಕಾಲುವೆ ಮೂಲಕ. ನೀರು ತರುವ ಪ್ರಯತ್ನ ನಡೆದಿದೆ. ಈಗ ಹೊಸ ಮುಖ್ಯಮಂತ್ರಿ ಬಂದಿದ್ದಾರೆ. ಅವರು ನೀರಾವರಿ ಸಚಿವರಾಗಿ ಕೆಲಸ ಮಾಡಿದ್ದಾರೆ. ನಾವು ಎತ್ತಿನಹೊಳೆ ಲಿಫ್ಟ್ ಮೂಲಕ ನೀರು ತರುವ ಕಾರ್ಯ ಮಾಡಿದ್ದೇವು ಅವರು ಅದಕ್ಕೆ ಬಟನ್ ಹೊಡೆಯುವ ಮೂಲಕ ಆರಂಭಿಸಿದ್ದಾರೆ ಎಂದರು.

**ಜಲ ಕಾಯ್ದೆ ಬದಲಾಗಬೇಕು**

ಬರ ಪೀಡಿತ ಜಿಲ್ಲೆಗಳಿಗೆ ನೀರು ತಂದು ನೀರಿನ ದಾಹ ನೀಗಿಸಬೇಕು. ನಾವು ಎಲ್ಲ ರೀತಿಯ ಸಹಕಾರ ನೀಡುತ್ತೇವೆ. ನೀರಿನ ವಿಚಾರ, ಜನರ ವಿಚಾರದಲ್ಲಿ ನೆಲದ ವಿಚಾರದಲ್ಲಿ ನಾವು ರಾಜಕಾರಣ ಮಾಡುವುದಿಲ್ಲ. ಒಂದು ಸಮಯ ಕಳೆದರೆ ಅದರ ದೂರಗಾಮಿಯ ಪರಿಣಾಮವಾಗುತ್ತದೆ. ಒಂದು ಸಮಯ ಕಳೆದರು ಅದರ ವೆಚ್ಚ ಒಂದು ಸಾವಿರ ಕೋಟಿ ಇದ್ದದ್ದು ಹತ್ತು ಪಟ್ಟು ಹೆಚ್ಚಾಗುತ್ತದೆ. ಒಂದು ಅಂತಾರಾಜ್ಯ ಜಲ ವಿವಾದ ಐವತ್ತು ವರ್ಷವಾದರೂ ಮುಗಿದಿಲ್ಲ. ಅದಕ್ಕೆ ನಾನು ಸಂಸತ್ತಿನಲ್ಲಿ ಅಂತಾರಾಜ್ಯ ಜಲವಿವಾದ ಕಾಯಿದೆ ಸಂಪೂರ್ಣ ಬದಲಾವಣೆ ಮಾಡಬೇಕು. ನದಿ ಅಭಿವೃದ್ಧಿ ನಿಟ್ಟಿನಲ್ಲಿ ಬದಲಾವಣೆ ಮಾಡಬೇಕು ಎಂದು ಸಂಸತ್ತಿನಲ್ಲಿ ಹೇಳಿದ್ದೇನೆ. ಪ್ರಧಾನ ಮಂತಿಗಳು ಈ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಿದ್ದಾರೆ. ನ್ಯಾಯಮಂಡಳಿಗಳಲ್ಲಿ ವರ್ಷಾನುಗಟ್ಟಲೇ ಬಿದ್ದಿರುವ ಪ್ರಕರಣಗಳನು ಕಾನೂನು ಬದಲಾವಣೆ ಮಾಡಲು ಉತ್ಸುಕರಾಗಿದ್ದಾರೆ. ಅದು ಕಾನೂನು ಬದಲಾದರೆ ಬಹಳಷ್ಟು ಬದಲಾವಣೆಯಾಗುತ್ತದೆ ಎಂದರು.

**ಪತ್ರಕರ್ತರದ್ದು ಜವಾಬ್ದಾರಿ**

ಇದು ನಮ್ಮ ಬದುಕಿನ ಪಶ್ನೆ. ಪತ್ರಕರ್ತರು ಇದಕ್ಕೆ ಬಹಳಷ್ಟು ಬೆಂಬಲ ಕೊಟ್ಟಿದ್ದರು. ಮುಂದೆಯೂ ಕೊಡುತ್ತಾರೆ ಎನ್ನುವ ವಿಶ್ವಾಸ ಇದೆ. ಚಿಕ್ಕಬಳ್ಳಾಪುರ ಪತ್ರಕರ್ತರು ಇದರ ಬಗ್ಗೆ ಹೆಚ್ಚಿನ ಬೆಂಬಲ ಕೊಡಬೇಕು. ಇಡ್ಲಿ ದೋಸೆಗಿಂತ ಪ್ರತಿಯೊಬ್ಬರ ಮನೆಗೆ ಅನ್ನ ಕೊಡುವ ಜವಾಬ್ದಾರಿಯನ್ನು ತಾವು ತೆಗೆದುಕೊಳ್ಳಬೇಕು. ಪತಕರ್ತರೊಂದಿಗಿನ ನಮ್ಮ ಸಂಬಂಧ ಯಾವಾಗಲೂ ಉತ್ತಮವಾಗಿದೆ. ನಾನು ಮುಖ್ಯಮಂತ್ರಿಯಾಗಿದ್ದಾಗ ಸ್ಥಳೀಯ ಪತ್ರಿಕೆಗಳಿಗೆ 4 ಪುಟಗಳ ಜಾಹೀರಾತು ನೀಡಲು ಆದೇಶ ಮಾಡಿದೆ. ಅದೇ ರೀತಿ ಹಿಂದುಳಿದ ವರ್ಗಗಳ ಪತ್ರಿಕೆಗಳಿಗೆ ಜಾಹೀರಾತು ನೀಡಲು ಆದೇಶ ಮಾಡಿದೆ. ಎಲ್ಲ ಸಮುದಾಯಗಳ ಧ್ವನಿಗಳು ಬೆಳಕಿಗೆ ಬರಬೇಕು. ಕೇವಲ ಶಹರದ ಸುದ್ದಿಯನ್ನು ಮಾಡದೇ ಎಲ್ಲ ವರ್ಗದ ಧ್ವನಿಯಾಗಿ ಕೆಲಸ ಮಾಡಬೇಕು. ಉತ್ತಮ ಕೆಲಸ ಮಾಡುತ್ತಿದ್ದೀರಿ. ಮಕ್ಕಳ ಪ್ರತಿಭೆಗಳನ್ನು ಗುರುತಿಸಿರುವುದು ಬಹಳ ಸಂತೋಷವಾಗಿದೆ. ಸಂಸದ ಡಾ. ಸುಧಾಕರ್ ಅವರು ಬಂದ ಮೇಲೆ ಚಿಕ್ಕಬಳ್ಳಾಪುರ ಜಿಲ್ಲೆಯ ಅಭಿವೃದ್ಧಿಯಾಗಿದೆ. ಮೆಡಿಕಲ್ ಕಾಲೇಜು, ಕನ್ನಡ ಭವನ ತರಲು ಅವರು ಸಾಕಷ್ಟು ಪ್ರಯತ್ನ ಮಾಡಿದ್ದಾರೆ ಎಂದು ಹೇಳಿದರು.

## ಡಾ.ಎಚ್.ಸಿ.ಮಹಾದೇವಪ್ಪಗೆ ಸಚಿವ ಸ್ಥಾನ ನೀಡಲು ಆಗ್ರಹ



• ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ

ಕಾಂಗ್ರೆಸ್ ವರಿಷ್ಠರು ದಲಿತ ಸಮುದಾಯಕ್ಕೆ ಸೇರಿದ ಡಾ. ಎಚ್ ಸಿ ಮಹಾದೇವಪ್ಪ ರವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕೆಂದು ಡಾ. ಎಚ್ ಸಿ ಮಹಾದೇವಪ್ಪ ಅಭಿಮಾನಿಗಳ ಸಂಘದ ತಾಲೂಕು ಅಧ್ಯಕ್ಷ ಪಿಪಿ ಕುಮಾರ್ ಆಗ್ರಹಿಸಿದ್ದಾರೆ.

ಅವರು ನೀಡಿರುವ ಪತ್ರಿಕಾ ಹೇಳಿಕೆಯಲ್ಲಿ ಪರಿಶಿಷ್ಟ ಜಾತಿಯ ಬಲಗೈ ಸಮುದಾಯವು ಕರ್ನಾಟಕದ ದೊಡ್ಡ ಸಮುದಾಯದಲ್ಲೊ ಒಂದಾಗಿದ್ದು ಈ ಸಮುದಾಯದ ಹಿರಿಯ ಅನುಭವ ಪ್ರಮುಖ ರಾಜಕಾರಣಿ ಯಾಗಿರುವ ಡಾ. ಎಚ್ ಸಿ ಮಹಾದೇವಪ್ಪ ರವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕೆಂದು ಪಿಪಿ ಕುಮಾರ್ ಮತ್ತು ವಿವಿಧ ಸಂಘಟನೆಯ ಹಾಗೂ ದಲಿತ ಮುಖಂಡರಾದ ಟಿ ಈರಯ್ಯ.ಪಿಪಿ ಮಹಾದೇವ್. ಸೇರಿದಂತೆ ಮತ್ತಿತರರು ಮನವಿ ಮಾಡಿಕೊಂಡಿದ್ದಾರೆ.

## ನಿವೃತ್ತ ಶಿಕ್ಷಕ ಅಣ್ಣಯ್ಯನವರಿಗೆ ಬೀಳ್ಕೊಡುಗೆ



• ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ

ನಿವೃತ್ತಿ ಎಂಬುದು ನಿರ್ವಹಿಸುತ್ತಿರುವ ವೃತ್ತಿಯ ನಿಯಮದ ಭಾಗವೇ ವಿನಃ ಯಾವುದೇ ಮಾರ್ಗಗಳನ್ನು ಆಯ್ಕೆ ಮಾಡಿಕೊಂಡು ಉತ್ತಮಗೊಳಿಸುವ ಅವಕಾಶವೇ ಹೆಚ್ಚು ಎಂದು ಶಿಕ್ಷಕ ಬೈರಪ್ಪ ತಿಳಿಸಿದರು.

ತಾಲೂಕಿನ ಕೆಎಸ್ಕೆ ನಗರದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಕಳೆದ 6 ವರ್ಷಗಳಿಂದ ಸೇವೆ ಸಲ್ಲಿಸಿ ಇಲ್ಲೇ ನಿವೃತ್ತಿಯಾಗುತ್ತಿರುವ ಕೆಕೆ ಅಣ್ಣಯ್ಯ ರವರಿಗೆ ಶನಿವಾರ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ದೇಹದ ಆರೋಗ್ಯ ಮಾತ್ರ ಅಲ್ಲದೆ ಸಮಾಜದ ಆರೋಗ್ಯಕರವಾದ ಚಟುವಟಿಕೆಯ ಬಗ್ಗೆ ಸದಾಕಾಲ ಸ್ವತಂತ್ರವಾಗಿರಲು ಸಹಕಾರಿಯಾಗಿರುವುದರಿಂದ ಸದುಪಯೋಗಪಡಿಸಿಕೊಳ್ಳಬೇಕು ಎಂದು ಕಿವಿ ಮಾತು ಹೇಳಿದರು.

ಈ ಸಂದರ್ಭದಲ್ಲಿ ಕೃಷಿಕ ಸಮಾಜದ ತಾಲೂಕು ಪ್ರಧಾನ ಕಾರ್ಯದರ್ಶಿ ಎಚ್ ಡಿ ರಮೇಶ್ ಶಿಕ್ಷಕರಾದ ಗಣೇಶ್. ಸಿಕೆ ರಾಜು. ರಾಮು. ಬಸವರಾಜು. ದಿನೇಶ್.ಕೆಕೆ ಪುಟ್ಟಸ್ವಾಮಿ. ಪೂರ್ಣಿಮಾ. ನಂದಿನಿ. ಗಾಯಿತ್ರಿ. ಸಾಕಮ್ಮ. ನಾಗರಾಜ್. ಶ್ರೀನಿವಾಸ್. ತಿಮ್ಮೇಗೌಡ. ಸೇರಿದಂತೆ ಮತ್ತಿದ್ದರು ಹಾಜರಿದ್ದರು.

## ಖಾಸಗಿ ಬಸ್ ಪಲ್ಟಿ : ಓರ್ವ ಸಾವು, 21ಕ್ಕೂ ಹೆಚ್ಚು ಮಂದಿಗೆ ಗಾಯ



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಬಳ್ಳಾರಿಯಿಂದ ಗೋವಾಕ್ಕೆ ತೆರಳುತ್ತಿದ್ದ ಖಾಸಗಿ ಸೀಬರ್ಡ್ ಸ್ಲೀಪರ್ ಬಸ್ ಚಾಲಕನ ನಿಯಂತ್ರಣ ತಪ್ಪಿ ಪಲ್ಟಿಯಾದ ಪರಿಣಾಮ ಓರ್ವ ಪ್ರಯಾಣಿಕ ಮೃತಪಟ್ಟು, 21ಕ್ಕೂ ಹೆಚ್ಚು ಮಂದಿ ಗಾಯಗೊಂಡ ಘಟನೆ ಶನಿವಾರ ಬೆಳಗಿನ ಜಾವ ಕಂಚಿನಬಾಗಿಲ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಭವಿಸಿದೆ.

ಅಪಘಾತಕ್ಕೀಡಾದ ಬಸ್‌ನಲ್ಲಿ ಒಟ್ಟು 36 ಪ್ರಯಾಣಿಕರಿದ್ದರು ಎಂದು ತಿಳಿದುಬಂದಿದೆ. ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡಿ-ದ್ದ ಆಂಧ್ರ ಮೂಲದ ಪ್ರಯಾಣಿಕ ಶರಣಯ್ಯ (42) ಆಸ್ಪತ್ರೆಗೆ ಸಾಗಿಸುವ ಮಾರ್ಗಮಧ್ಯೆ ಕೊನೆಯುಸಿರೆಳೆದಿದ್ದಾನೆ. ಗಂಭೀರವಾಗಿ ಗಾಯಗೊಂಡಿರುವ 6 ಮಂದಿಯನ್ನು ಹೆಚ್ಚಿನ ಚಿಕಿತ್ಸೆಗಾಗಿ ಕಾರವಾರದ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ.

ಇನ್ನುಳಿದ 15ಕ್ಕೂ ಹೆಚ್ಚು ಪ್ರಯಾಣಿಕರಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಅವರಿಗೆ ಅಂಕೋಲಾ ತಾಲೂಕು ಸರಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಅಪಘಾತದ ತೀವ್ರತೆಗೆ ಬಸ್ ರಾಷ್ಟ್ರೀಯ ಹೆದ್ದಾರಿಗೆ ಅಡ್ಡಲಾಗಿ ಬಿದ್ದಿದ್ದರಿಂದ ಹೆದ್ದಾರಿಯಲ್ಲಿ ವಾಹನ ಸಂಚಾರ ಸಂಪೂರ್ಣವಾಗಿ ಸ್ಥಗಿತಗೊಂಡಿತ್ತು. ಇದರ ಪರಿಣಾಮವಾಗಿ ರಸ್ತೆಯ ಎರಡೂ ಬದಿಯಲ್ಲಿ ಕಿಲೋಮೀಟರ್‌ಗಟ್ಟಲೆ ನೂರಾರು ವಾಹನಗಳು ಸಾಲುಗಟ್ಟಿ ನಿಂತಿದ್ದವು.ಮಾಹಿತಿ ತಿಳಿಯುತ್ತಿದ್ದಂತೆ ತಕ್ಷಣವೇ ಸ್ಥಳಕ್ಕೆ ಧಾವಿಸಿದ ಅಂಕೋಲಾ ಠಾಣೆಯ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿ, ಗಾಯಾಳುಗಳನ್ನು ರಕ್ಷಿಸುವ ಕಾರ್ಯಾಚರಣೆ ಕೈಗೊಂಡರು. ತದನಂತರ ಕ್ರೇನ್ ಮೂಲಕ ಬಸ್ ಅನ್ನು ರಸ್ತೆಯ ಪಕ್ಕಕ್ಕೆ ಸರಿಸಿ, ಸುಗಮ ವಾಹನ ಸಂಚಾರಕ್ಕೆ ಅನುವು ಮಾಡಿಕೊಟ್ಟಿದ್ದಾರೆ. ಈ ಕುರಿತು ಅಂಕೋಲಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸರ್ವರ್‌ಸಮಸ್ಯೆ:ಪಡಿತರದಾರರಪರದಾಟ

• ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ

ಮೇ.31:ಸಮಯ ವ್ಯತ್ಯಾಸ ಬಾಗಿಲು ಬಂದ್ಗೆ ಕಾರಣವಾದ ಸರ್ವರ್ ಸಮಸ್ಯೆ ಯಿಂದ ಪಡಿತದಾರರು ಮತ್ತು ವಿತರಕರು ಗೊಂದಲಕ್ಕೆ ಒಳಗಾಗಿ ತಿಂಗಳ ಕಡೆಯ ದಿನವೂ ಪೂರ್ಣ ಕೊಡಲು ಹಾಗೂ ಪಡೆದುಕೊಳ್ಳಲು ಹರಸಾಹಸ ಪಡುವಂತಾಯಿತು.

ತಾಲೂಕಿನ ಹಲವು ಪಡಿತರ ವಿತರಣಾ ಮಳಿಗೆಗಳಿಗೆ ಮತ್ತು ನ್ಯಾಯಬೆಲೆ ಅಂಗಡಿ ಸೇರಿದಂತೆ ಹಲವಡೆ ಮೇ ತಿಂಗಳ ಕಡೆಯ ದಿನವಾದ ಮತ್ತು ರಜ ದಿನವಾದ ಭಾನುವಾರವು ಬೆಳಿಗ್ಗೆ 7 ಗಂಟೆ ಇಂದಲೇ ವಿತರಿಸಲು ಮುಂದಾದರು.

ತಿಂಗಳಿಗೆ ತಮಗೆ ಸಿಗಬೇಕಾದ ಪಡಿತರ ಪದಾರ್ಥವಾದ ಅಕ್ಕಿ ಮತ್ತು ರಾಗಿಗಾಗಿ ನ್ಯಾಯಬೆಲೆ ಅಂಗಡಿ ಮಳಿಗೆಗಳಿಗೆ ಪಡಿತಾದಾರರು ಬಂದಾಗ ವಿತರಕರು ಸರ್ವರ್ ಸಮಸ್ಯೆಗೆ ಒಳಗಾಗಿ ಅಂದಿನ ವಿತರಣೆಯನ್ನು ರದ್ದು ಮಾಡಿ ಮಾರನೇ ದಿನದ ಸಮಯ ನಿಗದಿ ಮಾಡಿ ಚೀಟಿ ಅಂಟಿಸಿ ಹೋಗುತ್ತಿರುವುದು ಹಿಂದಿನ ದಿನಗಳಲ್ಲಿ ಮಾಮೂಲಾಗಿತ್ತು.

ಇದರಿಂದ ಎಷ್ಟೋ ಮಂದಿ ಪಡಿತರದಾರರು ಈ ಅಂಟಿಸಿದ ಚೀಟಿಯನ್ನು ಗಮನಿಸದೇ ಬಾಗಿಲು ಮುಚ್ಚಿರುವುದನ್ನು ಗಮನಿಸಿ ವಾಪಸ್ ಆಗಿದ್ದು ಬಹಳಷ್ಟು ಮಂದಿ ತಿಂಗಳ ಕಡೆ ದಿನವಾದ



ಭಾನುವಾರವೂ ಸಹ ಅಕ್ಕಿ ಮತ್ತು ರಾಗಿಯನ್ನು ಪಡೆದುಕೊಂಡರು.

ಇನ್ನೂ ಬಹಳಷ್ಟು ಮಂದಿ ಸರಿಯಾದ ಪಡಿತರ ವಿತರಣೆಯ ಸಮಯ ನಿಗದಿ ಮಾಡಿರುವುದು ಅರಿಯದೆ ಗೊಂದಲ ಹಾಗೂ ಅವ್ಯವಸ್ಥೆಗೆ ಕಾರಣವಾದ ಸರ್ವರ್ ಸಮಸ್ಯೆಯಿಂದ ಇನ್ನು ಬಹಳಷ್ಟು ಮಂದಿ ಪಡಿತದಾರರು ಪಡೆಯದೆ ಹಾಗೆ ಉಳಿದಿದ್ದಾರೆ.

ಕಳೆದ 15 ದಿನಗಳಿಂದ ಈ ಸಮಸ್ಯೆಯಿಂದಾಗಿ ಜನರು ಪಡಿತರ ಪಡೆಯಲು ಪರದಾಟ ನಡೆಸುವ ಪರಿಸ್ಥಿತಿ ಎದುರಾಗಿತ್ತು.

ಜನಸಾಮಾನ್ಯರು ಎಂದಿನಂತೆ ಪ್ರತಿ ತಿಂಗಳ ಪಡಿತರ ಪಡೆಯಲು ಪಡಿತರ ವಿತರಣಾ ಮಳಿಗೆಗಳಿಗೆ ಮತ್ತು ನ್ಯಾಯಬೆಲೆ ಅಂಗಡಿಗಳಿಗೆ ತೆರಳಿದ ಸಂದರ್ಭದಲ್ಲಿ ಸರ್ವರ್ ಸಮಸ್ಯೆ ಇದ್ದು ಗಂಟೆಗಟ್ಟಲೆ ಸರತಿ ಸಾಲಿನಲ್ಲಿ ನಿಂತರು ಪಡಿತರ ಸಿಗದೆ ವಾಪಸ್ ಆಗುವ ಪರಿಸ್ಥಿತಿ ಎಲ್ಲೆಡೆ ಇತ್ತು.

ಈ ಬಾರಿ ಪಡಿತರ ವಿತರಣೆಯಲ್ಲಿ ಎರಡೆರಡು ಬಾರಿ ಓಟಿಪಿ ನೀಡುವ ಮತ್ತು ಎರಡು ಬಾರಿ ಬೆರಳಚ್ಚು ನೀಡುವ ಕೆಲಸ ಮಾಡಲಾಗುತ್ತಿದ್ದು ಕೇಂದ್ರ ಪಡಿತರ ರಾಜ್ಯ ಪಡಿತರಕ್ಕೆ ಬೇರೆಬೇರೆ ಒಟಿಪಿ ಪಡೆದರು ಪ್ರಯೋಜನವಾಗುತ್ತಿರಲಿಲ್ಲ. ಇದರಿಂಲೂ ಪಡಿತರ ವಿತರಣೆ ತಡವಾಗುತ್ತಿರುವುದು ಒಂದು ಕಡೆಯಾದರೆ ಮತ್ತೊಂದು ಕಡೆ ಸರ್ವರ್ ಸಮಸ್ಯೆಯಿಂದಾಗಿ ಪಡಿತರ ಕೊಡಲು ನ್ಯಾಯಬೆಲೆ ಅಂಗಡಿಗಳು ಸಾಧ್ಯವಾಗದೆ ಜನರಿಗೆ ತೀವ್ರ ತೆ-ಊಂದರೆ ಉಂಟಾಗುತ್ತು.

ಪಡಿತರ ವಿತರಣೆಗೆ ಇನ್ನು ಕೇವಲ ಎರಡು ದಿನಗಳು ಮಾತ್ರ ಬಾಕಿ ಇದ್ದು ಮೇ ತಿಂಗಳ ಪಡಿತರ ವಿತರಣೆಯನ್ನು ಒಂದೆರಡು ದಿನಗಳ ಕಾಲ ವಿಸ್ತರಣೆ ಮಾಡಬೇಕು ಎಂದು ಬಡವರು ಮತ್ತು ಕೂಲಿ ಕಾರ್ಮಿಕರು ಆಗ್ರಹ ಮಾಡಿದ್ದಾರೆ.

ಸಮಸ್ಯೆ ಬಗೆಹರಿದಿದೆ :

ಸರ್ವರ್ ಸಮಸ್ಯೆ ರಾಜ್ಯಾದ್ಯಂತ ಕಾಡುತ್ತಿದ್ದು ಈ ಬಗ್ಗೆ ಹಿರಿಯ ಅಧಿಕಾರಿಗಳ ಗಮನಕ್ಕೆ ತರಲಾಗಿದೆ ಮೇಲ್ಮಟ್ಟದ ಅಧಿಕಾರಿಗಳು ಈ ಬಗ್ಗೆ ಕ್ರಮ ವಹಿಸಿ ಸರಿಪಡಿಸುವ ಭರವಸೆ ನೀಡಿದ ಪ್ರಕಾರ ಸಮಸ್ಯೆ ಸಂಪೂರ್ಣವಾಗಿ ಬಗೆಹರಿದಿದ್ದು ಪಡಿತರ ದಾರರಿಗೆ ಅಕ್ಕಿ ಮತ್ತು ರಾಗಿ ದೊರಕಿಸುವಂತೆ ಎಚ್ಚರ ವಹಿಸಲಾಗಿದ್ದು ಈ ಬಗ್ಗೆ ವಿತರಕರಿಗೆ ಸೂಚನೆ ನೀಡಲಾಗಿದೆ ಎಂದು ಆಹಾರ ಇಲಾಖೆಯ ಪಿರಿಯಾಪಟ್ಟಣ ತಾಲೂಕು ಶಿರಸ್ತಾರ್ ಸಣ್ಣ ಸ್ವಾಮಿ ಸ್ಪಷ್ಟಪಡಿಸಿದ್ದಾರೆ.

# ವಿಕಲಚೇತನರ ಸಹಕಾರಕ್ಕೆ ಸದಾ ಸಿದ್ಧ: ಶಾಸಕ ಪ್ರಭು ಚವ್ಹಾಣ

• ಮಲ್ಲಮ್ಮ ನುಡಿ ವಾರ್ತೆ ಔರಾದ

ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಮೇ.31 ರಂದು ಶಾಸಕರ ಕಛೇರಿಯಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ (ಎಂಎಲ್‌ಎ ಲ್ಯಾಡ್) ಯೋಜನೆಯಡಿ ವಿಕಲಚೇತನ ಫಲಾನುಭವಿಗಳಿಗೆ ತ್ರಿಚಕ್ರವಾಹನಗಳನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ವಿಕಲಚೇತನರು ಸ್ವಾವಲಂಬಿಯಾಗಿ ಬದುಕಬೇಕು ಎಂಬ ಉದ್ದೇಶದಿಂದ ನಿರಂತರ ಶ್ರಮಿಸುತ್ತಿದ್ದೇನೆ. ಅವರಿಗೆ ಮಾಶಾಸನ, ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ, ಲ್ಯಾಪ್‌ಟಾಪ್ ವಿತರಣೆ ಸೇರಿದಂತೆ ಎಲ್ಲ ಯೋಜನೆಗಳನ್ನು ತಲುಪಿಸಲು ಪ್ರಯತ್ನಿಸಲಾಗುತ್ತಿದೆ. ಕಾಲುಗಳಲ್ಲಿ ಶಕ್ತಿಯಿಲ್ಲದವರು ಸುಲಭವಾಗಿ ಓಡಾಡಬೇಕು. ಅವರು ಕೂಡ ದುಡಿಮೆಯಲ್ಲಿ ತೊಡಗಬೇಕು. ತಾವು ಬದುಕುವುದಲ್ಲದೇ ತಮ್ಮ ಕುಟುಂಬಕ್ಕೆ ಆಧಾರವಾಗಬೇಕು ಎಂಬ ಉದ್ದೇಶದಿಂದ ಕೆಲಸ ಮಾಡುತ್ತಿದ್ದು, ತೀವ್ರ ಅವಶ್ಯಕತೆ ಇರುವವರನ್ನು ಆದ್ಯತೆಯಾಗಿ ಪರಿಗಣಿಸಿ 19 ಜನರಿಗೆ ವಾಹನಗಳನ್ನು ವಿತರಿಸಲಾಗಿದೆ.

ನಡೆಯಲು ಸಾಧ್ಯವಾಗದ ವಿಕಲಚೇತನರು ವೈದ್ಯಾಧಿಕಾರಿಗಳಿಂದ ಪಡೆದ ಪ್ರಮಾಣಪತ್ರ ಹಾಗೂ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಿದಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ವಾಹನಗಳನ್ನು ಒದಗಿಸುತ್ತೇನೆ.




ವಿಕಲಚೇತನರು ಇದರ ಲಾಭ ಪಡೆಯಬೇಕು ಎಂದು ಹೇಳಿದರು.

ತ್ರಿಚಕ್ರವಾಹನಗಳನ್ನು ಪಡೆದ ಫಲಾನುಭವಿಗಳು ರಸ್ತೆಗಳಲ್ಲಿ ಸಂಚರಿಸುವಾಗ ಹೆಚ್ಚಿನ ಎಚ್ಚರಿಕೆ ವಹಿಸಬೇಕು. ವಾಹನಗಳನ್ನು ಅತಿ ವೇಗವಾಗಿ ಚಲಾಯಿಸಬಾರದು. ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು ಹಾಗೂ ಸಂಚಾರಿ ನಿಯಮಗಳನ್ನು ಪಾಲಿಸಬೇಕು. ತಮ್ಮ ಸುರಕ್ಷತೆಯ ಕಡೆಗೆ ಹೆಚ್ಚಿನ ಗಮನ ಹರಿಸಿ ಸುರಕ್ಷಿತವಾಗಿ ವಾಹನ ಚಲಾಯಿಸಬೇಕೆಂದು ಸಲಹೆ ನೀಡಿದರು.

ತ್ರಿಚಕ್ರವಾಹನಗಳ ವಿತರಣೆಯಿಂದ ವಿಕಲಚೇತನರಿಗೆ ನಿತ್ಯ ಸಂಚಾರಕ್ಕೆ ಮತ್ತು ಉದ್ಯೋಗದ ಸ್ಥಳಕ್ಕೆ ತೆರಳಲು ಅನುಕೂಲವಾಗಲಿದೆ. ವಿಕಲಚೇತನರು ಮುಖ್ಯವಾಹಿನಿಗೆ ಬರಬೇಕು. ಅವರ ಮೇಲೆ ಕನಿಕರ ಪಡುವುದಕ್ಕಿಂತ ಅವರು ಆತ್ಮವಿಶ್ವಾಸದಿಂದ ಬದುಕಲು ಅನುಕೂಲ ಮಾಡಿಕೊಡಬೇಕು. ಈ ದಿಶೆಯಲ್ಲಿ ನಾನು ನಿರಂತರ ಪರಿಶ್ರಮ ವಹಿಸುತ್ತಿದ್ದೇನೆ. ವಿಕಲಚೇತನರ ಸೇವೆ ಮಾಡುವ ಅವಕಾಶ ಸಿಕ್ಕಿರುವುದೇ ನನ್ನ ಸೌಭಾಗ್ಯವೆಂದು ಭಾವಿಸಿದ್ದು, ಅವರ ಸೇವೆಗೆ ಸದಾ ಸಿದ್ಧ ಎಂದು ಹೇಳಿದರು. ಈ ಸಂದರ್ಭದಲ್ಲಿ ಔರಾದ ಎಂಆರ್‌ಡಬ್ಲ್ಯೂ ಬಸವರಾಜ, ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

*ಅಹಿಲ್ಯಾಬಾಯಿ ಹೋಳ್ಕರ್ ಜಯಂತಿ:*ಶಾಸಕರಾದ ಪ್ರಭು ಬಿ. ಚವ್ಹಾಣ ಅವರು ಮೇ.31ರಂದು ಔರಾದ(ಬಿ) ಪಟ್ಟಣದ ತಮ್ಮ ಕಚೇರಿಯಲ್ಲಿ ಪುಣ್ಯಶ್ಲೋಕ ಮಾತೋಶ್ರೀ ಅಹಿಲ್ಯಾಬಾಯಿ ಹೋಳ್ಕರ್ ಅವರ ಜಯಂತಿಯನ್ನು ಭಕ್ತಿಭಾವದಿಂದ ಆಚರಿಸಿದರು.

ಈ ಸಂದರ್ಭದಲ್ಲಿ ಅಹಿಲ್ಯಾಬಾಯಿ ಹೋಳ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ನಮನ ಸಲ್ಲಿಸಲಾಯಿತು. ಬಳಿಕ ಮಾತನಾಡಿದ ಶಾಸಕರು, ಅಹಿಲ್ಯಾಬಾಯಿ ಹೋಳ್ಕರ್ ಅವರು ತಮ್ಮ ದೂರದೃಷ್ಟಿಯ ಆಡಳಿತ, ಧರ್ಮನಿಷ್ಠೆ, ಜನಪರ ಕಾಳಜಿ ಹಾಗೂ ಮಹಿಳಾ ಸಬಲೀಕರಣದ ಮೂಲಕ ಭಾರತೀಯ ಇತಿಹಾಸದಲ್ಲಿ ಅಜರಾಮರ ಸ್ಥಾನ ಪಡೆದಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರಾದ ಧೊಂಡಿಬಾ ನರೋಟೆ, ಶಿವಾಜಿರಾವ ಪಾಟೀಲ ಮುಂಗನಾಳ, ರಾಮಶೆಟ್ಟಿ ಪನ್ನಾಳೆ, ಶರತ ಧನಗೆ, ಬಾಲಾಜಿ ವಾಗ್ಮಾರೆ, ಸುನೀಲ ಸುಸಲಾದೆ, ದಯಾನಂದ ಖರಾಟ್, ನರಸಿಂಗ ಸುಸಲಾದೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಒಲಿಂಪಿಯಾಡ್ ಪ್ರಮಾಣ ಪತ್ರ ವಿತರಣೆ: ಅರುಣ ಕುಮಾರ್

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಒಲಿಂಪಿಯಾಡ್ ಕಾರ್ಯಕ್ರಮದ ಮೂಲಕ ವಿದ್ಯಾರ್ಥಿಗಳಿಗೆ ವಿವಿಧ ವಿಷಯಗಳಲ್ಲಿ ಪ್ರತಿಭೆಯನ್ನು ಗುರುತಿಸಿ ಸ್ಪರ್ಧಾತ್ಮಕ ಪರೀಕ್ಷೆಗಳ ವ್ಯವಸ್ಥೆಯನ್ನು ಅಖಅ ಕೇಂದ್ರಗಳ ಮೂಲಕ ನಡೆಸಲಾಗುತ್ತಿದೆ ಎಂದು ಕಾರ್ಯಕ್ರಮವನ್ನು ಉದ್ಘಾಟಿಸಿ ಕುಷ್ಟಗಿ ವಲಯ ಮೇಲ್ವಿಚಾರಕರ ಅರುಣ ಅವರು ಮಾತನಾಡಿದರು ಕುಷ್ಟಗಿ ತಾಲೂಕಿನ ಗಾಂಧಿನಗರ ಕಾರ್ಯಕ್ಷೇತ್ರದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಅಖಅ ಸೇವಾ ಕೇಂದ್ರದಲ್ಲಿ 2025–26 ನೇ ಸಾಲಿನ ಒಲಂಪಿಯಾಡ್ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಕುಷ್ಟಗಿ ತಾಲೂಕಿನಿಂದ 570 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ ಗೋವಿಂದ ಹಾಗೂ ಪವನ ಕುಮಾರ್ ಒಲಂಪಿಯಾಡ್ ಸ್ಪರ್ಧೆಯಲ್ಲಿ ಪ್ರಥಮ ಮತ್ತು ತೃತೀಯ ಸ್ಥಾನ



ಪಡೆದ ವಿದ್ಯಾರ್ಥಿಗಳಿಗೆ ವಲಯದ ಮೇಲ್ವಿಚಾರಕರು ಅರುಣ ಕುಮಾರ್ ರವರು ಪ್ರಮಾಣ ಪತ್ರವನ್ನು ವಿತರಣೆ ಮಾಡಿದರು.ಪ್ರಸ್ತುತ ವಿದ್ಯಮಾನದಲ್ಲಿ ವಿದ್ಯಾರ್ಥಿಗಳು ಶಾಲಾ ಪಠ್ಯಕ್ರಮದ ಜೊತೆಗೆ ತಾರ್ಕಿಕ ಚಿಂತನೆ, ಸಮಸ್ಯೆಗಳಿಗೆ ಪರಿಹಾರ ಕೌಶಲ್ಯ ಮತ್ತು ವಿಷಯಗಳ ಬಗ್ಗೆ ಒಲಿಂಪಿಯಾಡ್ ಪರೀಕ್ಷೆಗಳ ಪ್ರಮುಖವಾಗಿದೆ ಗಣಿತ (Mathematics) ವಿಜ್ಞಾನ (Science) ಇಂಗ್ಲಿಷ್ (English) ಸಾಮಾನ್ಯ ಜ್ಞಾನ (General Knowledge) ಕಂಪ್ಯೂಟರ್ / ಇನ್ಫರ್ಮ್ಯಾಟಿಕ್ಸ್ ಖಗೋಳಶಾಸ್ತ್ರ, ಭೌತಶಾಸ್ತ್ರ, ರಸಾಯನಶಾಸ್ತ್ರ, ಜೀವಶಾಸ್ತ್ರ (ಉನ್ನತ ಮಟ್ಟದ ಒಲಿಂಪಿಯಾಡ್‌ಗಳಲ್ಲಿ) ಪ್ರಯೋಜನಗಳ ವಿಷಯದ ಮೇಲೆ ಗಾಢವಾದ ಜ್ಞಾನ ಬೆಳೆಯುತ್ತದೆ.ತಾರ್ಕಿಕ ಮತ್ತು ವಿಶ್ಲೇಷಣಾತ್ಮಕ ಚಿಂತನೆ ಹೆಚ್ಚುತ್ತದೆ.ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸುವ ಅವಕಾಶ ಸಿಗುತ್ತದೆ ಎಂದು ಪ್ರಮಾಣ ಪತ್ರ ವಿತರಣೆ ಕಾರ್ಯಕ್ರಮವನ್ನು ರಾಘವೇಂದ್ರ ಅಖಅ ನೋಡಲ್ ಅಧಿಕಾರಿಗಳು ಮಾತನಾಡಿದರು ಈ ಕಾರ್ಯಕ್ಷೇತ್ರದಲ್ಲಿ ಮಹೇಶ್ ಕೃಷಿ ಮೇಲ್ವಿಚಾರಕರು, ಪಲ್ಲವಿ,ಅಧ್ಯಕ್ಷರು ಗಾಂಧಿನಗರ ಒಕ್ಕೂಟ ವಾಸವಿ,ಸುಧಾರಾಣಿ, ರೋಹಿಣಿ, ಒಕ್ಕೂಟದ ಪದಾಧಿಕಾರಿಗಳು,ಶರಣಮ್ಮ,ಜಯಶ್ರೀ, ತಲೆಖಾನ್ ಜಯಶ್ರೀ, ಶಾಂತಮ್ಮ, ಶಿಲ್ಪಾಕುಷ್ಟಗಿ ರೂರಲ್ ವಲಯದ ಸೇವಾ ಪ್ರತಿನಿಧಿಗಳು ಸ್ವ ಸಹಾಯ ಸಂಘದ ಸದಸ್ಯರು ವಿದ್ಯಾರ್ಥಿಗಳು ಭಾಗವಹಿಸಿದ್ದರು

# ಸಚಿವ ಶಿವಾನಂದ ಎಸ್. ಪಾಟೀಲರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕೆಂದು ಒತ್ತಾಯಿಸಿ ಸಾರ್ವಜನಿಕ ಹಕ್ಕೊತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಬಸವನಬಾಗೇವಾಡಿ

ಮತಕ್ಷೇತ್ರದ ಶಾಸಕರು ಹಾಗೂ ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಎಸ್. ಪಾಟೀಲ್ ಅವರಿಗೆ ಬರುವ ಸಂಪುಟ ಸಭೆಯಲ್ಲಿ ಉಪಮುಖ್ಯಮಂತ್ರಿ ಸ್ಥಾನವನ್ನು ನೀಡಬೇಕೆಂದು ಒತ್ತಾಯಿಸಿ ಪಟ್ಟಣದ ಶ್ರೀ ಬಸವೇಶ್ವರ ವೃತ್ತದಲ್ಲಿ ಶನಿವಾರ ಸಂಜೆ ಬೃಹತ್ ಸಾರ್ವಜನಿಕ ಹಕ್ಕೊತ್ತಾಯ ಸಭೆಯನ್ನು ಆಯೋಜಿಸಲಾಗಿತ್ತು.

ಸಭೆಯ ನೇತೃತ್ವವನ್ನು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಈರಣ್ಣ ಪಟ್ಟಣಶೆಟ್ಟಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುರೇಶ ಹಾರಿವಾಳ,ಮಹಿಳಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷೆ ರುಕ್ಮಿಣಿ ರಾಠೋಡ, ಪ್ರಚಾರ ಸಮಿತಿ ಬ್ಲಾಕ್ ಅಧ್ಯಕ್ಷ ಶಂಕರಗೌಡ ಬಿರಾದಾರ, ಗ್ಯಾರಂಟಿ ಸಮಿತಿ ಅಧ್ಯಕ್ಷ ಮೈಬೂಬ್ ನಾಯ್ಕೋಡಿ ಜಗದೇವಿ ಗುಂಡಳ್ಳಿ,ಎಂ. ಜಿ. ಆದಿಗೊಂಡ, ಸಂಗಯ್ಯ



ಕಾಳಹಸ್ತೇಶ್ವರಮಠ, ನಿಸಾರ್ ಚೌದರಿ, ಪ್ರವೀಣ ಪೂಜಾರಿ, ರವಿ ಎಮ್ ರಾಠೋಡ,ಸಂತೋಷ್ ಗಣಾಚಾರಿ, ಚಂದ್ರಶೇಖರಗೌಡ ಎಸ್ ಪಾಟೀಲ, ಸುರೇಶಗೌಡ ಪಾಟೀಲ, ಮಹಾಂತೇಶ ಸಾಸಾಬಾಳ, ಯಲ್ಲಪ್ಪ ಮನಗೂಳಿ ಸೇರಿದಂತೆ ಅನೇಕರು ಬಸವನಬಾಗೇವಾಡಿ ಕ್ಷೇತ್ರದ ಹಿತದೃಷ್ಟಿಯಿಂದ ಹಾಗೂ ಉತ್ತರ ಕರ್ನಾಟಕದ ಪ್ರಬಲ ನಾಯಕತ್ವಕ್ಕಾಗಿ ಸಚಿವರು ಆರು ಬಾರಿ ಶಾಸಕ ಹಾಗೂ ಎರಡು ಬಾರಿ ಹಲವು ಖಾತೆಗಳನ್ನು ನಿರ್ವಹಿಸುವ ಮೂಲಕ ಉತ್ತರ ಕರ್ನಾಟಕ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಬರುವ ಸಂಪುಟ ಸಭೆಯಲ್ಲಿ ಡಿಸಿಎಂ ಸ್ಥಾನ ನೀಡಬೇಕೆಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರವಿ ಎಮ್ ರಾಠೋಡ, ಕೆಪಿಸಿಸಿ ಸದಸ್ಯ ಶೇಖರ್ ಗೊಳಸಂಗಿ,

ಮುಖಂಡರುಗಳಾದ ಬಸವರಾಜ ಕೋಟಿ, ಅನಿಲ ಅಗರವಾಲ, ಬಸವರಾಜ್ ಗೊಳಸಂಗಿ, ರಮೇಶ ಯಳಮೇಲಿ, ಚಂದ್ರಶೇಖರಗೌಡ ಎಸ್ ಪಾಟೀಲ, ಬಸವರಾಜ್ ಹಾರಿವಾಳ, ಪ್ರೇಮಕುಮಾರ್ ಮ್ಯಾಗೇರಿ, ವಿಶ್ವನಾಥಗೌಡ ಪಾಟೀಲ, ಬಸವರಾಜ್ ಸೋಮಪುರ, ರವಿಗೌಡ ಚಿಕ್ಕೊಂಡ, ಜಟ್ಟಿಂಗರಾಯ ಮಾಲಗಾರ, ಸಂಗಯ್ಯ ಕಾಳಹಸ್ತೇಶ್ವರಮಠ, ನಿಸಾರ್ ಚೌದರಿ, ಪ್ರವೀಣ ಪೂಜಾರಿ, ಮೆಹತಾಬ್ ಬಮ್ಮನಹಳ್ಳಿ, ಬಸವರಾಜ್ ರಾಯಗೊಂಡ, ಜೀವನ್ ಮ್ಯಾಗೇರಿ, ಸೇರಿದಂತೆ ಅಪಾರ ಸಂಖ್ಯೆಯಲ್ಲಿ ಕ್ಷೇತ್ರದ ಅನೇಕ ಹಿರಿಯ ನಾಯಕರು ಭಾಗವಹಿಸಿದ್ದರು.

ಸಚಿವರ ಭಾವಚಿತ್ರ ಹಾಗೂ ಪಕ್ಷದ ಬಾವುಟ ಹಿಡಿದುಕೊಂಡು ಕೈ ಎತ್ತುವುದರ ಮೂಲಕ ಹೈಕಮಾಂಡ್ ಗೆ ಹಕ್ಕೊತ್ತಾಯಪಡಿಸಿದರು.




## ಜನಾರ್ಧನರಾವ ಬಿರಾದಾರಗೆ ಗೌರವ ಡಾಕ್ಟರೇಟ್ ಪ್ರದಾನ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಸಮಾಜ ಸೇವಕ ಜನಾರ್ಧನರಾವಬಿರಾದಾರ ಅವರಿಗೆ 'ಗೌರವ ಡಾಕ್ಟರೇಟ್' ಪ್ರಶಸ್ತಿ ಪ್ರದಾನ ಮಾಡಲಾಯಿತು.ಅಮೇರಿಕಾ ಪೋಷಿತ ಮಹಾರಾಷ್ಟ್ರದ ಪುಣೆಯ ಲೌಸೀನಾ ಸಂಶೋಧನಾ ಕೇಂದ್ರದವರು ಪುಣೆಯಲ್ಲಿ ಆಯೋಜಿಸಿದ ಘಟಿಕೋತ್ಸವ ಸಮಾರಂಭದಲ್ಲಿ ಸಮಾಜ ಸೇವಕ ಜನಾರ್ಧನರಾವ ಬಿರಾದಾರ ಅವರಿಗೆ ಸಂಶೋಧನಾ ಕೇಂದ್ರದ ಕುಲಪತಿಗಳು,ಕುಲಸಚಿವರು 'ಗೌರವ ಡಾಕ್ಟ-ರೇಟ್' ಪ್ರಶಸ್ತಿ ಪ್ರದಾನ ಮಾಡಿದರು.ಜನಾರ್ಧನರಾವ ಬಿರಾದಾರ ಅವರ ಸಾಮಾಜಿಕ,ಶೈಕ್ಷಣಿಕ ,ಸಾಂಸ್ಕೃತಿಕ ಸೇವೆ ಗುರುತಿಸಿ ಈ ಪ್ರಶಸ್ತಿ ಪ್ರದಾನ ಮಾಡಲಾಗಿದೆ. ಯಾವುದೇ ಪ್ರತಿಫಲಾಪೇಕ್ಷೆಯಿಲ್ಲದೆ ಸುಮಾರು ವರ್ಷಗಳಿಂದ ನಿಸ್ವಾರ್ಥವಾಗಿ ಸಾಮಾಜಿಕ,ಶೈಕ್ಷಣಿಕ,ಸಾಂಸ್ಕೃತಿಕ ಕ್ಷೇತ್ರದಲ್ಲಿ ಅವಿರತವಾಗಿ ದುಡಿಯುತ್ತಿದ್ದಾರೆ.ಅಲ್ಲದೆ ಸಮುದಾಯದ ಜನರನ್ನು ಮೇಲೆತ್ತುವ ಕಾರ್ಯ ಮಾಡುತ್ತಿದ್ದಾರೆ.ಬಿರಾದಾರ ಅವರಿಗೆ ಗೌರವ ಡಾಕ್ಟರೇಟ್ ನೀಡಿ ಗೌರವಿಸಿದ್ದು ಅತ್ಯಂತ ಸಂತಸದ ಸಂಗತಿಯಾಗಿದೆ ಎಂದು ಭಾಜಪ ತಾಲೂಕು ಮಾಜಿ ಅಧ್ಯಕ್ಷ ರಾವಸಾಹೇಬ ಬಿರಾದಾರ ಹೇಳುತ್ತಾರೆ.

**ಖುಷಿ ತಂದಿದೆ...**

'ನನ್ನ ನಿಸ್ವಾರ್ಥ ಸೇವೆ ಗುರುತಿಸಿ ನನ್ನನ್ನು ಪುಣೆಯ ಲೌಸೀನಾ ಸಂಶೋಧನಾ ಕೇಂದ್ರದವರು ಗೌರವ ಡಾಕ್ಟರೇಟ್ ನೀಡಿದ್ದು ಖುಷಿಯಾಗಿದೆ.ಇನ್ನೂ ಹೆಚ್ಚಿನ ಸಮಾಜ ಸೇವೆ ಮಾಡುವ ಹೊಣೆಗಾರಿಕೆ ನನ್ನ ಮೇಲಿದೆ.'–ಡಾ.ಜನಾರ್ಧನರಾವ ಬಿರಾದಾರ ಗೌರವ ಡಾಕ್ಟರೇಟ್ ಪುರಸ್ಕೃತ ಭಾಲ್ಕಿ.

# ವಿಜ್ಞಾನದ ಅರಿವು ಮೂಡಿಸುತ್ತಿರುವ ಬಿಎಎಸ್ ಕಾರ್ಯಕ್ಕೆ ಪ್ರಧಾನಿ ಮೋದಿ ಶ್ಲಾಘನೆ: ಡಾ. ಶರಣಭೂಪಾಲರೆಡ್ಡಿ ಅಭಿನಂದನೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ದೇಶದ ಅತ್ಯಂತ ಜನಪ್ರಿಯ ಹಾಗೂ ಸ್ಫೂರ್ತಿದಾಯಕ ರೇಡಿಯೋ ಕಾರ್ಯಕ್ರಮವಾದ 'ಮನ್ ಕೀ ಬಾತ್'ನ 134ನೇ ಆವೃತ್ತಿಯಲ್ಲಿ, ನಮ್ಮ ಕರ್ನಾಟಕದ ಹೆಮ್ಮೆಯ ಸಂಸ್ಥೆಯಾದ 'ಬೆಂಗಳೂರು ಆಸ್ಟ್ರೋನಾಮಿಕಲ್ ಸೊಸೈಟಿ' (BAS) ಕುರಿತು ಗೌರವಾನ್ವಿತ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ನೀಡಿರುವ ಮೆಚ್ಚುಗೆಯ ಮಾತುಗಳು ರಾಜ್ಯದ ಪ್ರತಿಯೊಬ್ಬರಿಗೂ ಹೆಮ್ಮೆಯ ವಿಷಯವಾಗಿದೆ ಎಂದು ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಡಾ. ಶರಣಭೂಪಾಲರೆಡ್ಡಿ ಅವರು ಹರ್ಷ ವ್ಯಕ್ತಪಡಿಸಿದ್ದಾರೆ. ಇಂದು ಪ್ರಸಾರವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಪ್ರಧಾನಮಂತ್ರಿಯವರು, ವಿಜ್ಞಾನದ ಅರಿವನ್ನು ಮೂಡಿಸುವಲ್ಲಿ ಮತ್ತು ಗ್ರಾಮೀಣ ಭಾಗದ ವಿದ್ಯಾರ್ಥಿಗಳಲ್ಲಿ ಹಾಗೂ ಜನಸಾಮಾನ್ಯರಲ್ಲಿ ಖಗೋಳವಿಜ್ಞಾನದ ಬಗ್ಗೆ ಕುತೂಹಲ ಮೂಡಿಸುವಲ್ಲಿ ಬೆಂಗಳೂರು ಆಸ್ಟ್ರೋನಾಮಿಕಲ್ ಸೊಸೈಟಿ ಮಾಡುತ್ತಿರುವ ಸೇವೆಯನ್ನು ಮುಕ್ತಕಂಠದಿಂದ ಶ್ಲಾಘಿಸಿದ್ದಾರೆ. ಹಳ್ಳಿ-ಹಳ್ಳಿಗಳಿಗೆ ತೆರಳಿ ಟೆಲಿಸ್ಕೋಪ್‌ಗಳ ಮೂಲಕ ಆಕಾಶದ ವಿಸ್ಮಯಗಳನ್ನು ಪರಿಚಯಿಸುತ್ತಿರುವ ಇವರ ಕಾರ್ಯವು ನಿಜಕ್ಕೂ ಶ್ಲಾಘನೀಯ.



ಈ ಕುರಿತು ಪ್ರತಿಕ್ರಿಯಿಸಿರುವ ಡಾ. ಶರಣಭೂಪಾಲರೆಡ್ಡಿ ಅವರು, "ಪ್ರಧಾನಮಂತ್ರಿಯವರ ಈ ಮಾತುಗಳು ಯುವ ವಿಜ್ಞಾನಿಗಳಿಗೆ ಮತ್ತು ವಿಜ್ಞಾನಾಸಕ್ತರಿಗೆ ದೊಡ್ಡ ಮಟ್ಟದ ಉತ್ತೇಜನ ನೀಡಿದೆ. ಕರ್ನಾಟಕದ ಒಂದು ಸಂಸ್ಥೆಯ ಕಾರ್ಯವನ್ನು ರಾಷ್ಟ್ರದ ಅತ್ಯುನ್ನತ ವೇದಿಕೆಯಲ್ಲಿ ಗುರುತಿಸಿರುವುದು, ನಮ್ಮ ರಾಜ್ಯದಲ್ಲಿ ನಡೆಯುತ್ತಿರುವ ಸೃಜನಶೀಲ ಚಟುವಟಿಕೆಗಳಿಗೆ ದೊರೆತ ಗೌರವವಾಗಿದೆ. ವಿಜ್ಞಾನ ಮತ್ತು ತಂತ್ರಜ್ಞಾನದ ಕ್ಷೇತ್ರದಲ್ಲಿ ಕರ್ನಾಟಕವು ದೇಶಕ್ಕೆ ಮಾದರಿಯಾಗಿ ಮುನ್ನಡೆಯುತ್ತಿದೆ ಎಂಬುದಕ್ಕೆ ಇದು ಸಾಕ್ಷಿಯಾಗಿದೆ," ಎಂದು ತಿಳಿಸಿದ್ದಾರೆ.

ಗ್ರಾಮೀಣ ಭಾಗದ ಪ್ರತಿಭೆಗಳನ್ನು ಗುರುತಿಸಿ, ಅವರಿಗೆ ವಿಜ್ಞಾನದ ಮುಖ್ಯವಾಹಿನಿಯಲ್ಲಿ ತೊಡಗಿಸಿಕೊಳ್ಳಲು ಪ್ರೇರಣೆ ನೀಡುತ್ತಿರುವ ಇಂತಹ ಸಂಸ್ಥೆಗಳು ಸಮಾಜಕ್ಕೆ ಅಗತ್ಯವಾಗಿವೆ. ಇಂತಹ ಕಾರ್ಯಕ್ರಮಗಳ ಮೂಲಕ ಪ್ರಧಾನಮಂತ್ರಿಯವರು ಜನಸಾಮಾನ್ಯರ ಅಪ್ರತಿಮ ಸೇವೆಯನ್ನು ಗುರುತಿಸುತ್ತಿರುವುದು ನಮ್ಮೆಲ್ಲರಿಗೂ ಸ್ಫೂರ್ತಿಯಾಗಿದ್ದು, ಅವರ ಈ ದೂರದೃಷ್ಟಿಯ ಚಿಂತನೆಗೆ ನಾನು ಅಭಿನಂದನೆಗಳನ್ನು ಸಲ್ಲಿಸುತ್ತೇನೆ ಎಂದು ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಡಾ. ಶರಣಭೂಪಾಲರೆಡ್ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚೆನ್ನಾರಡ್ಡಿ ಪಾಟೀಲ್‌ಗೆ ಸಚಿವ ಸ್ಥಾನ ಸಾಬಣ್ಣ ಕ್ಯಾತನಾಳ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ರಾಜ್ಯದಲ್ಲಿ ಶೀಘ್ರದಲ್ಲೇ ರಚನೆಯಾಗಲಿರುವ ಹೊಸ ಸಚಿವ ಸಂಪುಟದಲ್ಲಿ ಯಾದಗಿರಿ ಜಿಲ್ಲೆಯ ಜನಪ್ರಿಯ ಶಾಸಕರಾದ ಚನ್ನಾರಡ್ಡಿ ಪಾಟೀಲ್ ತುನ್ನೂರು ಅವರಿಗೆ ಸಚಿವ ಸ್ಥಾನಮಾನ ನೀಡಬೇಕೆಂದು ಕಾಂಗ್ರೆಸ್ ಯುವ ಮುಖಂಡ ಸಾಬಣ್ಣ ಕ್ಯಾತನಾಳ ಅವರು ಬಲವಾಗಿ ಆಗ್ರಹಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿದ ಅವರು, ಚನ್ನಾರಡ್ಡಿ ಪಾಟೀಲ್ ತುನ್ನೂರು ಅವರು ತಮ್ಮ ಕ್ಷೇತ್ರದಲ್ಲಿ ಜನಪರ ಕೆಲಸಗಳು, ಅಭಿವೃದ್ಧಿ ಕಾರ್ಯಕ್ರಮಗಳು ಹಾಗೂ ಜನರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸುವ ಮೂಲಕ ಜನಮನ ಗೆದ್ದಿರುವ ನಾಯಕರು ಎಂದು ತಿಳಿಸಿದ್ದಾರೆ. ಅವರ ರಾಜಕೀಯ ಅನುಭವ, ಆಡಳಿತ ಸಾಮರ್ಥ್ಯ ಮತ್ತು ಸಮಾಜ ಸೇವೆಯ ಬದ್ಧತೆಯನ್ನು ಗಮನದಲ್ಲಿಟ್ಟುಕೊಂಡು ಸಚಿವ ಸಂಪುಟದಲ್ಲಿ ಅವರಿಗೆ ಅವಕಾಶ ನೀಡುವುದು ನ್ಯಾಯಸಮ್ಮತವಾಗಿದೆ ಎಂದು ಅಭಿಪ್ರಾಯಪಟ್ಟರು.

ಯಾದಗಿರಿ ಜಿಲ್ಲೆ ಸ್ಥಾಪನೆಯಾಗಿ ಸುಮಾರು 15 ವರ್ಷಗಳಾದರೂ, ಜಿಲ್ಲೆಯ ಅಭಿವೃದ್ಧಿ ನಿರೀಕ್ಷಿತ ಮಟ್ಟದಲ್ಲಿ ನಡೆಯದಿರುವುದು ವಿಷಾದನೀಯವಾಗಿದೆ. ಈ ಹಿನ್ನೆಲೆಯಲ್ಲಿ, ಜಿಲ್ಲೆಯ ಸಮಗ್ರ ಅಭಿವೃದ್ಧಿಗಾಗಿ ಸ್ಥಳೀಯ ನಾಯಕರಿಗೆ ಸಚಿವ ಸ್ಥಾನ ನೀಡುವುದು ಅತ್ಯಾವಶ್ಯಕವಾಗಿದೆ ಎಂದು ಅವರು ಹೇಳಿದರು.

ರಾಜ್ಯ ಸರ್ಕಾರ ಹಾಗೂ ಪಕ್ಷದ ಹೈಕಮಾಂಡ್ ಈ ಬೇಡಿಕೆಯನ್ನು ಗಂಭೀರವಾಗಿ ಪರಿಗಣಿಸಿ, ಚನ್ನಾರಡ್ಡಿ ಪಾಟೀಲ್ ತುನ್ನೂರು ಅವರಿಗೆ ಸಚಿವ ಸ್ಥಾನ ನೀಡಿ ಜಿಲ್ಲೆಯ ಜನರ ಆಶಯವನ್ನು ಈಡೇರಿಸಬೇಕು ಎಂದು ಸಾಬಣ್ಣ ಕ್ಯಾತನಾಳ ಅವರು ಒತ್ತಾಯಿಸಿದ್ದಾರೆ.

# ಚೆನ್ನಾರೆಡ್ಡಿ ಪಾಟೀಲ್ ತುನ್ನೂರುಗೆ ಸಚಿವ ಸ್ಥಾನ, ಪ್ರಿಯಾಂಕಾ ಖರ್ಗೆಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಿ: ನಿಂಗಪ್ಪ ಎಮ್ ಜಾಲಗಾರ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ರಾಜ್ಯದಲ್ಲಿ ಶೀಘ್ರದಲ್ಲೇ ರಚನೆಯಾಗಲಿರುವ ಹೊಸ ಸಚಿವ ಸಂಪುಟದಲ್ಲಿ ಯಾದಗಿರಿ ಜಿಲ್ಲೆಯ ಜನಪ್ರಿಯ ಶಾಸಕರಾದ ಚನ್ನಾರಡ್ಡಿ ಪಾಟೀಲ್ ತುನ್ನೂರು ಅವರಿಗೆ ಸಚಿವ ಸ್ಥಾನಮಾನ ನೀಡಬೇಕು ಮತ್ತು ಪ್ರಿಯಾಂಕಾ ಖರ್ಗೆ ರವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಕೂಲಿ ಕಬ್ಬಲಿಗ ಸಮಾಜದ ತಾಲ್ಲೂಕು ಅಧ್ಯಕ್ಷ ಹಾಗೂ ಮಾಜಿ ನಗರಸಭೆ ಸದಸ್ಯ ನಿಂಗಪ್ಪ ಎಮ್ ಜಾಲಗಾರ ಆಗ್ರಹಿಸಿದ್ದಾರೆ. ಈ ಕುರಿತು ಪ್ರಕಟಣೆ ನೀಡಿದ ಅವರು, ಚನ್ನಾರಡ್ಡಿ ಪಾಟೀಲ್ ತುನ್ನೂರು ಅವರು 40 ವರ್ಷದ ಹಿರಿಯ ರಾಜಕಾರಣಿಯಾಗಿದ್ದು, ಎಂ.ಎಲ್.ಸಿ ಯಾಗಿ ಸೇವೆಯನ್ನು ಸಲ್ಲಿಸಿ, ತಮ್ಮ ಕ್ಷೇತ್ರದಲ್ಲಿ ಜನಪರ ಕೆಲಸಗಳು, ಅಭಿವೃದ್ಧಿ






ಕಾರ್ಯಕ್ರಮಗಳು ಹಾಗೂ ಜನರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸುವ ಮೂಲಕ ಜನಮನ ಗೆದ್ದಿರುವ ನಾಯಕರು ಎಂದು ತಿಳಿಸಿದ್ದಾರೆ. ಅವರ ರಾಜಕೀಯ ಅನುಭವ, ಆಡಳಿತ ಸಾಮರ್ಥ್ಯ ಮತ್ತು ಸಮಾಜ ಸೇವೆಯ ಬದ್ಧತೆಯನ್ನು ಗಮನದಲ್ಲಿಟ್ಟುಕೊಂಡು ಸಚಿವ ಸಂಪುಟದಲ್ಲಿ ಅವರಿಗೆ ಅವಕಾಶ ನೀಡುವುದು ನ್ಯಾಯಸಮ್ಮತವಾಗಿದೆ ಎಂದು ಅಭಿಪ್ರಾಯಪಟ್ಟರು. ಯಾದಗಿರಿ ಜಿಲ್ಲೆ ಸ್ಥಾಪನೆಯಾಗಿ ಸುಮಾರು 15 ವರ್ಷಗಳಾದರೂ, ಜಿಲ್ಲೆಯ ಅಭಿವೃದ್ಧಿ ನಿರೀಕ್ಷಿತ ಮಟ್ಟದಲ್ಲಿ ನಡೆಯದಿರುವುದು ವಿಷಾದನೀಯವಾಗಿದೆ. ಈ ಹಿನ್ನೆಲೆಯಲ್ಲಿ, ಜಿಲ್ಲೆಯ ಸಮಗ್ರ ಅಭಿವೃದ್ಧಿಗಾಗಿ ಸ್ಥಳೀಯ ನಾಯಕರಿಗೆ ಸಚಿವ ಸ್ಥಾನ ನೀಡುವುದು ಅತ್ಯಾವಶ್ಯಕವಾಗಿದೆ ಎಂದು ಅವರು ಹೇಳಿದರು. ರಾಜ್ಯ ಸರ್ಕಾರ ಹಾಗೂ ಪಕ್ಷದ ಹೈಕಮಾಂಡ್ ಈ ಬೇಡಿಕೆಯನ್ನು ಗಂಭೀರವಾಗಿ ಪರಿಗಣಿಸಿ, ಚನ್ನಾರಡ್ಡಿ ಪಾಟೀಲ್ ತುನ್ನೂರು ಅವರಿಗೆ ಸಚಿವ ಸ್ಥಾನ ನೀಡಿ ಮತ್ತು ಪ್ರಿಯಾಂಕಾ ಖರ್ಗೆ ರವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಕೂಲಿ ಕಬ್ಬಲಿಗ ಸಮಾಜದ ತಾಲ್ಲೂಕು ಅಧ್ಯಕ್ಷ ಹಾಗೂ ಮಾಜಿ ನಗರಸಭೆ ಸದಸ್ಯ ನಿಂಗಪ್ಪ ಎಮ್ ಜಾಲಗಾರ ಅವರು ಒತ್ತಾಯಿಸಿದ್ದಾರೆ.

# ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿಗೆ ದರ್ಶನಾಪುರ ನಾಯಕತ್ವ ಅಗತ್ಯವಿದೆ: ಸ್ಯಾಮ್ಸನ್ ಮಾಳಿಕೇರಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಹಿಂದುಳಿದ ಜಿಲ್ಲೆಗಳ ಪಟ್ಟಿಯಿಂದ ಅಭಿವೃದ್ಧಿಯತ್ತ ವೇಗವಾಗಿ ಹೆಜ್ಜೆ ಇಡುತ್ತಿರುವ ಯಾದಗಿರಿ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿ ಪ್ರಗತಿ, ಆಡಳಿತಾತ್ಮಕ ನಿರಂತರತೆ ಹಾಗೂ ಜನಪರ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪಗೌಡ ದರ್ಶನಾಪುರ ಅವರ ನಾಯಕತ್ವ ಅತ್ಯಗತ್ಯವಾಗಿದ್ದು, ಅವರನ್ನು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರನ್ನಾಗಿ ಮುಂದುವರಿಸಬೇಕು ಎಂದು ಯಾದಗಿರಿ ಜಿಲ್ಲಾ ಕಾಂಗ್ರೆಸ್ ಸಮಿತಿಯ ವಕ್ತಾರ ಸ್ಯಾಮ್ಸನ್ ಮಾಳಿಕೇರಿ ರಾಜ್ಯ ಸರ್ಕಾರ ಹಾಗೂ ಪಕ್ಷದ ಹೈಕಮಾಂಡ್‌ಗೆ ಆಗ್ರಹಿಸಿದ್ದಾರೆ. ಈ ಕುರಿತು ಪ್ರಕಟಣೆಯಲ್ಲಿ ತಿಳಿಸಿದ

ಅವರು, ಶರಣಬಸಪ್ಪಗೌಡ ದರ್ಶನಾಪುರ ಅವರು ಕೇವಲ ಹಿರಿಯ ಶಾಸಕರಲ್ಲ, ಜಿಲ್ಲೆಯ ಸಾಮಾಜಿಕ, ಆರ್ಥಿಕ ಮತ್ತು ಆಡಳಿತಾತ್ಮಕ ವ್ಯವಸ್ಥೆಯ ಕುರಿತು ಆಳವಾದ ಅರಿವು ಹೊಂದಿರುವ ದೂರದೃಷ್ಟಿಯ ಜನನಾಯಕರು ಎಂದು ಬಣ್ಣಿಸಿದರು. ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸುವ ಅಪರೂಪದ ರಾಜಕಾರಣಿಯಾಗಿ ಗುರುತಿಸಿಕೊಂಡಿರುವ ಅವರು,





ಅಭಿವೃದ್ಧಿ ಹಾಗೂ ಜನಸೇವೆಯ ವಿಚಾರದಲ್ಲಿ ಸದಾ ಮುಂಚೂಣಿಯಲ್ಲಿದ್ದಾರೆ ಎಂದು ಹೇಳಿದರು. ಯಾದಗಿರಿ ಜಿಲ್ಲೆಯು ಶಿಕ್ಷಣ, ಆರೋಗ್ಯ, ಕೃಷಿ, ನೀರಾವರಿ, ಕುಡಿಯುವ ನೀರು, ಕೈಗಾರಿಕೆ, ರಸ್ತೆ ಮತ್ತು ಮೂಲಸೌಕರ್ಯ ಕ್ಷೇತ್ರಗಳಲ್ಲಿ ಇನ್ನಷ್ಟು ಅಭಿವೃದ್ಧಿ ಹೊಂದಬೇಕಾದ ಅವಶ್ಯಕತೆ ಇದೆ. ಇಂತಹ ಸಂದರ್ಭದಲ್ಲಿ ಜಿಲ್ಲೆಯ ಅವಶ್ಯಕತೆಗಳು ಮತ್ತು ಸವಾಲುಗಳ ಬಗ್ಗೆ ಸಂಪೂರ್ಣ ತಿಳುವಳಿಕೆ ಹೊಂದಿರುವ ದರ್ಶನಾಪುರ ಅವರಂತಹ ಅನುಭವಿ ನಾಯಕರು ಉಸ್ತುವಾರಿ ಸಚಿವರಾಗಿ ಮುಂದುವರಿಯುವುದು ಅತ್ಯಂತ ಮಹತ್ವದ್ದಾಗಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ

# ರಾಸಾಯನಿಕಗಳ ದುರ್ಬಳಕೆಯಿಂದ ಆರೋಗ್ಯ ಸಮಸ್ಯೆಗಳು ಹೆಚ್ಚಳ: ಶಾಸಕ ಶರಣಗೌಡ ಕಂದಕೂರು.

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಮೇ 31: 2026-27ನೇ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಗುರುಮಠಕಲ್ ಕ್ಷೇತ್ರದ ಶಾಸಕ ಶರಣಗೌಡ ಕಂದಕೂರ, ಕಲ್ಯಾಣ ಕರ್ನಾಟಕ ಭಾಗದ ಯಾದಗಿರಿ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಕ್ಯಾನ್ಸರ್, ಹೃದಯಾಘಾತ ಸೇರಿದಂತೆ ವಿವಿಧ ಆರೋಗ್ಯ ಸಮಸ್ಯೆಗಳು ಹೆಚ್ಚುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ ಎಂದು ಹೇಳಿದರು.

ಪಟ್ಟಣದ ನೂತನ ರೈತ ಸಂಪರ್ಕ ಕೇಂದ್ರದಲ್ಲಿ ಮುಂಗಾರು ಹಂಗಾಮಿಗೆ ರೈತರಿಗೆ ಬೀಜ ವಿತರಣೆ ಮತ್ತು ಕೃಷಿಯಲ್ಲಿ ರಾಸಾಯನಿಕಗಳ ಸಮರ್ಪಕ ಬಳಕೆ ಕುರಿತು ಕೃಷಿ ಪರಿಕರ ಮಾರಾಟಗಾರರಿಗೆ ತರಬೇತಿ ಕಾರ್ಯಕ್ರಮವನ್ನು ಭಾನುವಾರ ಹಮ್ಮಿಕೊಳ್ಳಲಾಗಿತ್ತು.

ಶಾಸಕರು ಮುಂದುವರೆಸಿ ಆರೋಗ್ಯ ಇಲಾಖೆಯ ವರದಿಗಳ ಪ್ರಕಾರ ಜನರಲ್ಲಿ ಪೌಷ್ಟಿಕಾಂಶದ ಕೊರತೆ, ಕಲುಷಿತ ನೀರಿನ ಬಳಕೆ ಹಾಗೂ ಕೃಷಿಯಲ್ಲಿ ಅತಿಯಾದ ರಾಸಾಯನಿಕಗಳ ಬಳಕೆಯಿಂದ ಆರೋಗ್ಯ ಸಮಸ್ಯೆಗಳು ಹೆಚ್ಚಾಗುತ್ತಿವೆ. ಕೃಷಿ ಇಲಾಖೆ ಹಾಗೂ ಸರ್ಕಾರದ ಮಾನದಂಡಗಳನ್ನು ಉಲ್ಲಂಘಿಸಿ ರಾಸಾಯನಿಕ ಗೊಬ್ಬರ ಮತ್ತು ಕೀಟನಾಶಕಗಳ ಮಾರಾಟ ನಡೆಸುವ ವರ್ತಕರು ಕ್ಷೇತ್ರದ ಜನರ ಆರೋಗ್ಯದ ಬಗ್ಗೆ ಕಾಳಜಿ ವಹಿಸಿ ಜವಾಬ್ದಾರಿಯುತವಾಗಿ ವ್ಯಾಪಾರ ನಡೆಸಬೇಕು ಎಂದು



ಅವರು ಸೂಚಿಸಿದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದ ಡಾ. ಎ.ಜಿ. ಶ್ರೀನಿವಾಸ ಅವರು ಸುಸ್ಥಿರ ಕೃಷಿ ಹಾಗೂ ಸಾವಯವ ಕೃಷಿಯ ಮಹತ್ವವನ್ನು ಪ್ರೊಜೆಕ್ಟರ್ ಮುಖಾಂತರ ಚಿತ್ರ ಸಹಿತ್ ವಿವರಿಸಿದರು. ರಾಸಾಯನಿಕಗಳ ಅತಿಯಾದ ಬಳಕೆಯಿಂದ ಮಣ್ಣು, ನೀರು, ಪಶುಸಂಪತ್ತು ಹಾಗೂ ಮಾನವರ ಆರೋಗ್ಯದ ಮೇಲೆ ಉಂಟಾಗುವ ದುಷ್ಪರಿಣಾಮಗಳ ಕುರಿತು ಮಾಹಿತಿ ನೀಡಿದರು.

ಅಲ್ಲದೆ, ಅನವಶ್ಯಕವಾಗಿ ಕೀಟನಾಶಕಗಳ ಬಳಕೆಯನ್ನು ತಪ್ಪಿಸಿ, ಸುರಕ್ಷಿತ ಕೃಷಿ ಪದ್ಧತಿಗಳನ್ನು ಅನುಸರಿಸುವಂತೆ ರೈತರು ಹಾಗೂ ಕೃಷಿ ಪರಿಕರಗಳ ವರ್ತಕರಿಗೆ ಸಲಹೆ ನೀಡಿದರು. ಕೃಷಿ ಉತ್ಪಾದನೆ ಹೆಚ್ಚಳದ ಜೊತೆಗೆ ಸಾರ್ವಜನಿಕ ಆರೋಗ್ಯ ಮತ್ತು ಪರಿಸರ ಸಂರಕ್ಷಣೆಯೂ ಅಷ್ಟೇ ಮುಖ್ಯವಾಗಿದೆ ಎಂದು ಅವರು ಹೇಳಿದರು.

ಕೃಷಿ ಇಲಾಖೆಯ ಅಧಿಕಾರಿಗಳಾದ ಸುರೇಶ್ ಬಿ. ರೈತರಿಗೆ ಮುಂಗಾರು ಬಿತ್ತನೆ ಇನ್ನೂ ಹತ್ತರಿಂದ ಹದಿನೈದು ದಿನಗಳು ಬಿಟ್ಟು ಬಿತ್ತನೆ ಮಾಡಲು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ವಾರದ , ಗುರುಮಠಕಲ್ ಸೆ?ದಾಪುರ ಕೃಷಿಕ ಸಮಾಜದ ಅಧ್ಯಕ್ಷರಾದ ಶ್ರೀ ಆಯುಬ್ ಅಹ್ಮದ್, ಬೈರೆಡ್ಡಿ, ಕೃಷಿಕ ಪರಿಕರ ಸಂಘ ಅಧ್ಯಕ್ಷ ಶಿವರೆಡ್ಡಿ, ರೈತ ಸಂಪರ್ಕ ಕೇಂದ್ರದ ಸಿಬ್ಬಂದಿ, ರಾಸಾಯನಿಕ ಗೊಬ್ಬರ ಹಾಗೂ ಕೃಷಿ ಪರಿಕರಗಳ ವರ್ತಕರು ಮತ್ತು ರೈತರು ಭಾಗವಹಿಸಿದ್ದರು.

# ಗುರುಮಠಕಲ್ ಕ್ಷೇತ್ರದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕರಿಂದ ಚಾಲನೆ



• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಮೇ 31: ಗುರುಮಠಕಲ್ ವಿಧಾನಸಭಾ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಸುಮಾರು ?90 ಲಕ್ಷಕ್ಕೂ ಅಧಿಕ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಶರಣಗೌಡ ಕಂದಕೂರ ಅವರು ಶನಿವಾರ ಅಡಿಗಲ್ಲು ನೆರವೇರಿಸಿ ಚಾಲನೆ ನೀಡಿದರು. ಇದೇ ವೇಳೆ ಕ್ಷೇತ್ರದ ಅಭಿವೃದ್ಧಿಗೆ ಅಗತ್ಯವಿರುವ ಅನುದಾನ ಸೇರಿದಂತೆ ಬೋರ್‌ವೆಲ್ ಕಾಮಗಾರಿಗಳ ಹಣ ಬಿಡುಗಡೆ ಮಾಡದೆ ರಾಜ್ಯ ಸರ್ಕಾರ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಲಗಾಮು ಹಾಕುವ ಪ್ರಯತ್ನ ಮಾಡುತ್ತಿದೆ ಎಂದು ಆರೋಪಿಸಿದರು.

ಅರಕೇರಾ (ಬಿ) ಗ್ರಾಮದಲ್ಲಿ ?20 ಲಕ್ಷ ವೆಚ್ಚದ ಕೊರಮ ಅಲೆಮಾರಿ (ಭಜಂತ್ರಿ) ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಅಡಿಗಲ್ಲು ನೆರವೇರಿಸಿದ ಅವರು, ಬಳಿಕ ವೆಂಕಟೇಶ್ ನಗರ ತಾಂಡಾದ ಶ್ರೀ ದಾಮಾಸಾಬ್ ದೇವಸ್ಥಾನದ ಶಿಖರ ನಿರ್ಮಾಣಕ್ಕೆ ?10 ಲಕ್ಷ, ಬಂದಳ್ಳಿ ಗ್ರಾಮದ ಶ್ರೀ ಗುಂಜಲಮ್ಮ ದೇವಿ ದೇವಸ್ಥಾನ ಅಭಿವೃದ್ಧಿಗೆ ?10 ಲಕ್ಷ, ಬೂದೂರು ಗ್ರಾಮದಲ್ಲಿ ?10 ಲಕ್ಷ ವೆಚ್ಚದ ಸಿಸಿ ರಸ್ತೆ ಹಾಗೂ ಚರಂಡಿ ನಿರ್ಮಾಣ ಕಾಮಗಾರಿ, ಕಾಕಲವಾರ ಗ್ರಾಮದಲ್ಲಿ ಶ್ರೀ ಹನುಮಾನ ದೇವಸ್ಥಾನ ಅಭಿವೃದ್ಧಿ ಕಾಮಗಾರಿ ಹಾಗೂ ಗುರುಮಠಕಲ್ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ದುರಸ್ತಿ ಮತ್ತು ಸುಣ್ಣಬಣ್ಣ ಕಾಮಗಾರಿಗೆ ?30 ಲಕ್ಷ ವೆಚ್ಚದ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡಿದರು.

ಕಾರ್ಯಕ್ರಮಗಳಲ್ಲಿ ಮಾತನಾಡಿದ ಶಾಸಕ ಶರಣಗೌಡ ಕಂದಕೂರ, ಕ್ಷೇತ್ರದ ಜನರಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಉದ್ದೇಶದಿಂದ ನಿರಂತರವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ. "ಗುರುಮಠಕಲ್ ಕ್ಷೇತ್ರವನ್ನು ಹಲವು ದಶಕಗಳ ಕಾಲ ಪ್ರತಿನಿಧಿಸಿದವರು ಜನರಿಗೆ ಅಗತ್ಯವಾದ ಮೂಲಭೂತ ಸೌಕರ್ಯಗಳನ್ನು ಒದಗಿಸುವಲ್ಲಿ ವಿಫಲರಾಗಿದ್ದಾರೆ. ರಸ್ತೆ, ಕುಡಿಯುವ ನೀರು, ಚರಂಡಿ, ವಿದ್ಯುತ್ ಸೇರಿದಂತೆ ಅನೇಕ ಸಮಸ್ಯೆಗಳು ಇನ್ನೂ ಕ್ಷೇತ್ರದಲ್ಲಿ ಉಳಿದಿವೆ. ಜನರ ನಿರೀಕ್ಷೆಯಂತೆ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಂಡಿರುವ ಸಂದರ್ಭದಲ್ಲಿ ಅನುದಾನ ಬಿಡುಗಡೆ ಮಾಡದೆ ಕ್ಷೇತ್ರದ ಅಭಿವೃದ್ಧಿಗೆ ಅಡ್ಡಗಾಲು ಹಾಕಿದ್ದಾರೆ ಆದರೂ ಯಾವುದೇ ಒತ್ತಡಗಳಿಗೆ ಮಣಿಯದೆ ಕ್ಷೇತ್ರದ ಅಭಿವೃದ್ಧಿಗಾಗಿ ಹೋರಾಟ ಮುಂದುವರಿಸುತ್ತೇನೆ. ಕ್ಷೇತ್ರದ ಅಭಿವೃದ್ಧಿಗೆ ನಾನು ಸದಾ ಸಿದ್ಧನಿದ್ದೇನೆ" ಎಂದು ಹೇಳಿದರು.

ಬೂದೂರು, ಕಾಕಲವಾರ ಗ್ರಾಮದ ಮೂಲಭೂತ ಸೌಕರ್ಯ ಸೇರಿದಂತೆ, ವಿದ್ಯುತ್, ಶಾಲೆ, ಕೆರೆಯ ಪೈಪ್ ಲೈನ್ ಸಮಸ್ಯೆಗಳನ್ನು ಸಂಬಂಧಿಸಿದ ಆಯಾ ಅಧಿಕಾರಿಗಳೊಂದಿಗೆ ಮಾತನಾಡಿ ಜನರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುವಂತೆ ಸೂಚಿಸಿದರು.

ಚಪೆಟ್ಲಾ ಮತ್ತು ಕಾಕಲವಾರ ಭಾಗಗಳಲ್ಲಿ ನಿರಂತರವಾಗಿ ಎದುರಾಗುತ್ತಿರುವ ವಿದ್ಯುತ್ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ಉದ್ದೇಶದಿಂದ ಹೊಸ ಜೆಸ್ಕಾಂ ಉಪಕೇಂದ್ರ (ಸಬ್‌ಸ್ಟೇಷನ್) ನಿರ್ಮಾಣಕ್ಕೆ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಈ ಕುರಿತು ಅಧಿಕಾರಿಗಳು ಹಾಗೂ ಗ್ರಾಮಸ್ಥರೊಂದಿಗೆ ಸಮಾಲೋಚನೆ ನಡೆಸಿ ಅಗತ್ಯ ಪ್ರಸ್ತಾವನೆ ಸಲ್ಲಿಸುವಂತೆ ಸೂಚಿಸಿದರು.

ಅಭಿವೃದ್ಧಿ ಕಾಮಗಾರಿಗಳನ್ನು ಗುಣಮಟ್ಟದಿಂದ ಹಾಗೂ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಸಾರ್ವಜನಿಕರ ಬಳಕೆಗೆ ಒದಗಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಶಾಸಕರು, ಕ್ಷೇತ್ರದ ಜನರ ಸಮಸ್ಯೆಗಳ ಪರಿಹಾರವೇ ತಮ್ಮ ಮೊದಲ ಆದ್ಯತೆಯಾಗಿದ್ದು, ಅಭಿವೃದ್ಧಿ ಕಾರ್ಯಗಳಿಗೆ ಯಾವುದೇ ರೀತಿಯ ಹಿನ್ನಡೆ ಆಗದಂತೆ ನಿರಂತರ ಪ್ರಯತ್ನ ನಡೆಸುವುದಾಗಿ ಹೇಳಿದರು.

ಕಾರ್ಯಕ್ರಮಗಳಲ್ಲಿ ತಹಸೀಲ್ದಾರ್ ಚನ್ನಮಲ್ಲಪ್ಪ ಘಂಟಿ, ಗ್ರೇಡ್ 2 ತಹಸೀಲ್ದಾರ್ ನರಸಿಂಹ ಸ್ವಾಮಿ, ಸುಭಾಷ್ ಕಟಕಟಿ, ಡಾ.ಪುರುಷೋತ್ತಮ್ ಜೋಷಿ, ಜನಪ್ರತಿನಿಧಿಗಳು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು

# ಕಾಯಿಲೆ ಕುರಿತು ಭಯ ಬೇಡ, ಮುಕ್ತವಾಗಿ ಚಿಕಿತ್ಸೆ ಪಡೆದು ಗುಣಮುಖರಾಗಿ: ಶರಣಗೌಡ ಕಂದಕೂರು



• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ರಾಷ್ಟ್ರೀಯ ಆರೋಗ್ಯ ಅಭಿಯಾನಗಳ ಸಂಯುಕ್ತ ಆಶ್ರಯದಲ್ಲಿ "ಪ್ರಧಾನ ಮಂತ್ರಿ ಕ್ಷಯಮುಕ್ತ ಭಾರತ ಅಭಿಯಾನ" ಅಂಗವಾಗಿ ಕ್ಷಯರೋಗ ಜಾಗೃತಿ ಕಾರ್ಯಕ್ರಮವನ್ನು ಶನಿವಾರ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಗುರುಮಠಕಲ್ ಶಾಸಕ ಶರಣಗೌಡ ಕಂದಕೂರು, ಕ್ಷಯರೋಗವು ಸಂಪೂರ್ಣವಾಗಿ ಗುಣಪಡಿಸಬಹುದಾದ ಕಾಯಿಲೆಯಾಗಿದ್ದು, ಇದರ ಬಗ್ಗೆ ಭಯಪಡದೆ ಮುಕ್ತವಾಗಿ ಚಿಕಿತ್ಸೆ ಪಡೆಯಬೇಕು ಎಂದು ತಿಳಿಸಿದರು. ಕ್ಷಯರೋಗದ ಲಕ್ಷಣಗಳು ಕಂಡುಬಂದ ತಕ್ಷಣ ಸಮೀಪದ ಆರೋಗ್ಯ ಕೇಂದ್ರದಲ್ಲಿ ಪರೀಕ್ಷೆ ಮಾಡಿಸಿಕೊಂಡು ವೈದ್ಯರ ಸಲಹೆಯಂತೆ ಚಿಕಿತ್ಸೆ ಪಡೆದರೆ ಸಂಪೂರ್ಣ ಗುಣಮುಖರಾಗಬಹುದು ಎಂದು ಹೇಳಿದರು.

ಆರೋಗ್ಯ ಇಲಾಖೆಯ ಜಿಲ್ಲಾ ವೈದ್ಯಾಧಿಕಾರಿ ಡಾ. ಮಹೇಶ್ ಬಿರಾದಾರ್ ಮಾತನಾಡಿ ಕ್ಷಯರೋಗದ ಲಕ್ಷಣಗಳು, ಹರಡುವಿಕೆ, ಮುನ್ನೆಚ್ಚರಿಕಾ ಕ್ರಮಗಳು ಹಾಗೂ ಸರ್ಕಾರದಿಂದ ಲಭ್ಯವಿರುವ ಉಚಿತ ಪರೀಕ್ಷೆ ಮತ್ತು ಚಿಕಿತ್ಸಾ ಸೌಲಭ್ಯಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿದರು. ಎರಡು ವಾರಗಳಿಗಿಂತ ಹೆಚ್ಚು ಕಾಲ ಕೆಮ್ಮು, ಜ್ವರ, ತೂಕ ಇಳಿಕೆ ಹಾಗೂ ರಾತ್ರಿ ವೇಳೆ ಅಧಿಕ ಬೆವರು ಕಾಣಿಸಿಕೊಂಡಲ್ಲಿ ನಿರ್ಲಕ್ಷ್ಯ ಮಾಡದೆ ತಕ್ಷಣ ಆರೋಗ್ಯ ಕೇಂದ್ರವನ್ನು ಸಂಪರ್ಕಿಸುವಂತೆ ಸಲಹೆ ನೀಡಿದರು.

ಕ್ಷಯರೋಗಿಗಳಿಗೆ ಸರ್ಕಾರದಿಂದ ಉಚಿತ ಔಷಧೋಪಚಾರದ ಜೊತೆಗೆ ಪೌಷ್ಟಿಕ ಆಹಾರ ನೆರವು ಸಹ ನೀಡಲಾಗುತ್ತಿದ್ದು, ಸಾರ್ವಜನಿಕರು ಈ ಸೌಲಭ್ಯಗಳ ಸದುಪಯೋಗ ಪಡೆದುಕೊಳ್ಳುವಂತೆ ಅಧಿಕಾರಿಗಳು ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಚನ್ನಮಲ್ಲಪ್ಪ ಘಂಟಿ, ಮುಖ್ಯಾಧಿಕಾರಿ ಶರಣಪ್ಪ ಎಮ್, ಆರೋಗ್ಯ ಇಲಾಖೆಯ ತಾಲೂಕ ವೈದ್ಯಾಧಿಕಾರಿ ಡಾ.ಹಣಮಂತರೆಡ್ಡಿ, ಡಾ. ಮಹೇಶ್ ಸಜ್ಜನ್, ಡಾ. ನೀಲಂಬಿಕಾ, ಸೇರಿದಂತೆ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು, ಆರೋಗ್ಯ ಸ್ವಯಂಸೇವಕರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು. ಕ್ಷಯರೋಗ ಮುಕ್ತ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕೆಂದು ಈ ಸಂದರ್ಭದಲ್ಲಿ ಕರೆ ನೀಡಲಾಯಿತು.

# ನಾಟಕ ಸಾಹಿತ್ಯಕ್ಕೆ ಬಸಣ್ಣ ಕಂಚಗಾರರ ಕೊಡುಗೆ ಅಪಾರ: ಗುರುರಾಜ ಜೋಷಿ

• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ

ಮೇ.31: ನಾಟಕ ಸಾಹಿತ್ಯ, ಶಿಲ್ಪಕಲೆ ಹಾಗೂ ಸ್ಥಳೀಯ ಸಂಸ್ಕೃತಿಯ ಬೆಳವಣಿಗೆಯಲ್ಲಿ ದಿವಂಗತ ಬಸಣ್ಣ ಕಂಚಗಾರರ ಕೊಡುಗೆ ಅಪಾರವಾಗಿದೆ ಎಂದು ಉಪನ್ಯಾಸಕ ಗುರುರಾಜ ಜೋಷಿ ಅಭಿಪ್ರಾಯಪಟ್ಟರು. ತಾಲೂಕಿನ ವಿಕ್ರಮಪುರ ಓದುಗರ ಬಳಗದ ವತಿಯಿಂದ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿ ಆಯೋಜಿಸಿದ್ದ ದಿ. ಬಸಣ್ಣ ಕಂಚಗಾರರ ಕೃತಿ, ನಾಟಕ ಮತ್ತು ಕಲಾ ಅವಲೋಕನ ಕಾರ್ಯಕ್ರಮದಲ್ಲಿ ಅವರು ಮುಖ್ಯ ಉಪನ್ಯಾಸ ನೀಡಿದರು. ಬಸಣ್ಣ ಕಂಚಗಾರರು ರಚಿಸಿದ "ಕಾಲಜ್ಞಾನಿ ಕೊಡೇಕಲ್ ಬಸವಣ್ಣ" ನಾಟಕವನ್ನು ಸ್ಥಳೀಯ ಕಲಾವಿದರಿಂದ ಪ್ರದರ್ಶಿಸುವ ಮೂಲಕ ಸಾಹಿತ್ಯ ಮತ್ತು ರಂಗಭೂಮಿಗೆ ವಿಶಿಷ್ಟ ಕೊಡುಗೆ ನೀಡಿದ್ದಾರೆ. ಕೇವಲ ಪ್ರಾಥಮಿಕ ಶಿಕ್ಷಣ ಪಡೆದಿದ್ದರೂ ಕಲೆ ಮತ್ತು ಸಾಹಿತ್ಯ ಕ್ಷೇತ್ರಗಳಲ್ಲಿ ತಮ್ಮದೇ ಆದ ಛಾಪು ಮೂಡಿಸಿ ಜನಮನದಲ್ಲಿ ಉಳಿದಿದ್ದಾರೆ ಎಂದು ಹೇಳಿದರು. ಅವರು ರಚಿಸಿರುವ "ಕಾಲಜ್ಞಾನ ಕಿರಣ ಕೊಡೇಕಲ್ ಬಸವಣ್ಣ", "ಪವಾಡ ಪುರುಷ ಬಸವರಾಜ ಅಪ್ಪನವರು", "ಪರಾತ್ಪರ ಲಿಂಗದ ಘನತೆ" ಹಾಗೂ "ಆಮಲಿಂಗೇಶ್ವರ ಚರಿತ್ರೆ" ಕೃತಿಗಳು ಸಾಹಿತ್ಯ ಲೋಕದಲ್ಲಿ ಮಹತ್ವದ ಸ್ಥಾನ ಪಡೆದಿವೆ. ವಾಸ್ತುತಜ್ಞ, ಪಂಚಾಂಗಕರ್ತ ಹಾಗೂ ಕಾಯಕಯೋಗಿಯಾಗಿ ಬದುಕಿದ ಅವರ ವ್ಯಕ್ತಿತ್ವ ಇಂದಿನ ಪೀಳಿಗೆಗೆ ಮಾದರಿಯಾಗಿದೆ ಎಂದು ತಿಳಿಸಿದರು. ಪ್ರಾಸ್ತಾವಿಕವಾಗಿ ಮಾತನಾಡಿದ ಸಂಶೋಧನಾ ಸಾಹಿತಿ ಪಾಟೀಲ ಬಸನಗೌಡ ಅವರು, ಸ್ಥಳೀಯ ಲೇಖಕರ




ಕೃತಿಗಳ ಪರಿಚಯ ಸರಣಿಯ ಎರಡನೇ ಕಾರ್ಯಕ್ರಮ ಇದಾಗಿದ್ದು, ಇನ್ನಷ್ಟು ಲೇಖಕರು ಹಾಗೂ ಸಾಹಿತಿಗಳನ್ನು ಪರಿಚಯಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ ಓದುಗರ ಬಳಗ ಕಾರ್ಯನಿರ್ವಹಿಸುತ್ತಿದೆ ಎಂದರು.

ಈ ಸಂದರ್ಭದಲ್ಲಿ ಶಿಕ್ಷಕಿ ಸವಿತಾ ಬೆಳ್ಳಿ ಅವರು ಶ್ರೀನಿವಾಸ ಮೂರ್ತಿ ರಚಿಸಿರುವ "ವಿಧಿಯ ಬೆನ್ನೇರಿ" ಕೃತಿಯನ್ನು ಪರಿಚಯಿಸಿದರು. ಅಂಗವೈಕಲ್ಯವನ್ನು ಮೀರಿ ಸಾಧನೆ ಮಾಡಿದ ಅನೇಕ ವ್ಯಕ್ತಿಗಳ ಜೀವನಗಾಥೆಗಳನ್ನು ಒಳಗೊಂಡಿರುವ ಈ ಕೃತಿ ಯುವಜನತೆಗೆ ಪ್ರೇರಣಾದಾಯಕವಾಗಿದೆ ಎಂದು ಹೇಳಿದರು. ಮಕ್ಕಳಲ್ಲಿ ಓದುವ ಹವ್ಯಾಸ ಬೆಳೆಸುವ ಮಾರ್ಗೋಪಾಯಗಳ ಕುರಿತೂ ಅವರು ಮಾಹಿತಿ ನೀಡಿದರು.

ವಿಕ್ರಮಪುರ ಓದುಗರ ಬಳಗದ ಸಂಚಾಲಕ ಮಹೇಶ್ ಸ್ಥಾವರಮಠ ಅವರು ಡಾ. ಶಿವರಾಮ ಕಾರಂತ ಅವರ "ಬೆಟ್ಟದ ಜೀವ" ಕಾದಂಬರಿಯ ಸಾರಾಂಶವನ್ನು ವಿವರಿಸಿದರು. ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವೆಂಕಟಗಿರಿ ದೇಶಪಾಂಡೆ, ಶಿವಕುಮಾರ್ ಬಂಡೋಳಿ, ನಾಗನಗೌಡ ಪಾಟೀಲ್, ನಂದುಲಾಲ್ ಠವಾಣಿ, ಗುರಣ್ಣಗೌಡ, ಯಂಕನಗೌಡ, ಶರಣಗೌಡ ಗೆಣ್ಣೂರು, ಅಕ್ಕಮಹಾದೇವಿ, ಚಂದ್ರಕಾಂತ್, ಸಣಕೆಪ್ಪ, ನೀಲಕಂಠ ಹೊನಕಲ್, ಬಸಲಿಂಗಯ್ಯ ಗಣಾಚಾರಿ, ಆನಂದ ಬಾರಿಗಿಡದ, ವೀರೇಶ ಹಡಪದ, ವಿದ್ಯಾಕುಮಾರ ಬಡಿಗೇರ ಸೇರಿದಂತೆ ಅನೇಕ ಸಾಹಿತ್ಯಾಸಕ್ತರು ಭಾಗವಹಿಸಿದ್ದರು. ಬಸವರಾಜ ಕೋಳಕೂರು ಪ್ರಾರ್ಥನೆ ನೆರವೇರಿಸಿದರು. ಮಹೇಶ್ ಸ್ಥಾವರಮಠ ಸ್ವಾಗತಿಸಿದರು. ದೇವರಾಜ ಕುಲಕರ್ಣಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ಇಂದು ಶಾಲಾ ಪ್ರಾರಂಭೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು



ತಾಲೂಕಿನ 2026 27ನೆಯ ಸಾಲಿನ ಶೈಕ್ಷಣಿಕ ವರ್ಷದ 1.6.2026 ಸೋಮವಾರ ಬೆಳಿಗ್ಗೆ 11 ಗಂಟೆಗೆ ಸರ್ಕಾರಿ ಹಿರಿಯ ಪ್ರಾಥಮಿಕ ಬಾಲಕರ ಶಾಲಾ ಪ್ರಾರಂಭೋತ್ಸವ ಉದ್ಘಾಟನೆ ಸಮಾರಂಭ ಕಾರ್ಯಕ್ರಮವನ್ನು ಶಾಸಕ ಜಿಟಿ ಹರೀಶ್ ಗೌಡ ನೆರವೇರಿಸಲಿದ್ದಾರೆ ಎಂದು ಶಿಕ್ಷಣಾಧಿಕಾರಿ ಕಾಳನಾಯಕ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ

## ಆರ್‌ವಿಎನ್‌ಗೆ ಸಚಿವ ಸ್ಥಾನ ನೀಡಲು ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ



ಹೊಸದಾಗಿ ರಚನೆಯಾಗುತ್ತಿರುವ ಸಚಿವ ಸಂಪುಟದಲ್ಲಿ ಸುರಪುರ ಕ್ಷೇತ್ರದ ಶಾಸಕ ರಾಜಾ ವೆಂಕಟಪ್ಪ ನಾಯಕ (ಆರ್‌ವಿಎನ್) ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚಂದ್ರಶೇಖರ ದಂಡಿನ್ ಒತ್ತಾಯಿಸಿದರು.

ಸುದ್ದಿಗಾರರೊಂದಿಗೆಮಾತನಾಡಿದಅವರು, ಆರ್‌ವಿಎನ್ ಅವರು ಪಕ್ಷದ ನಿಷ್ಠಾವಂತಹಾಗೂ ರಾಜಕೀಯದಲ್ಲಿ ತಮನ್ನು ತೊಡಗಿಸಿಕೊಂಡಿದ್ದಾರೆ. ಅವರ ಅನುಭವ ಮತ್ತು ಸೇವೆಯನ್ನು ಪರಿಗಣಿಸಿ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿದರು.

ಕಲ್ಯಾಣ ಕರ್ನಾಟಕ ಭಾಗಕ್ಕೆ ಪ್ರಾತಿನಿಧ್ಯ ನೀಡುವ ಉದ್ದೇಶದಿಂದ ಆರ್‌ವಿಎನ್ ಅವರಿಗೆ ಸಚಿವ ಸ್ಥಾನ ಕಲ್ಪಿಸುವಂತೆ ಪಕ್ಷದ ವರಿಷ್ಠರಲ್ಲಿ ಮನವಿ ಮಾಡಿದರು.

## ಈಶ್ವರ ಖಂಡ್ರೆ ಉಪಮುಖ್ಯಮಂತ್ರಿಯಾಗಲಿ ಡಾ. ಭೀಮಸೇನರಾವ ಶಿಂಧೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬೀದರ



ಭಾಲ್ಕಿ ಕ್ಷೇತ್ರದ ಶಾಸಕ ಹಾಗೂ ಸಚಿವರಾದ ಈಶ್ವರ ಖಂಡ್ರೆಅವರನ್ನು ರಾಜ್ಯದನೂತನಉಪಮುಖ್ಯಮಂತ್ರಿಯಾಗಿ (ಡಿಸಿಎಂ) ನೇಮಕ ಮಾಡಬೇಕೆಂದು ಕಾಂಗ್ರೆಸ್ ಮುಖಂಡ ಹಾಗೂ ನಿವೃತ್ತ ಸಿಎಂ ಅವರ ಕಾರ್ಯದರ್ಶಿ ಡಾ. ಭೀಮಸೇನರಾವ್ ಶಿಂಧೆ ಒತ್ತಾಯಿಸಿದ್ದಾರೆ. ಬೀದರ್ ಜಿಲ್ಲೆಗೆ ಉಪಮುಖ್ಯಮಂತ್ರಿ ಸ್ಥಾನ ನೀಡುವುದರಿಂದ ಈ ಭಾಗದ ಸಮಗ್ರ ಅಭಿವೃದ್ಧಿಗೆ ಹೊಸ ವೇಗ ಸಿಗಲಿದೆ.

ರಾಜ್ಯಾದ್ಯಂತ ಪ್ರಭಾವ ಹೊಂದಿರುವ ಖಂಡ್ರೆಅವರು ಎಲ್ಲಾ ವರ್ಗಗಳ ಜನರಲ್ಲಿ ಅಪಾರ ಬೆಂಬಲ ಮತ್ತು ವಿಶ್ವಾಸ ಗಳಿಸಿಕೊಂಡಿದ್ದಾರೆ ಅವರಿಗೆ ಎಲ್ಲ ವರ್ಗಗಳ ಬೆಂಬಲ ಇದೆ. ಅವರು ಡಿಸಿಎಂ ಆದರೆ ಜನಪರ ಆಡಳಿತ ನೀಡಲು ಸಾಧ್ಯವಾಗುತ್ತದೆ.

ಜನ ಸಮುದಾಯದ ನಾಯಕ: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರಾಗಿರುವ ಅವರು, ಸಾಮಾಜಿಕ ಮತ್ತು ಧಾರ್ಮಿಕ ಚಟುವಟಿಕೆಗಳ ಮೂಲಕ ಸಮಾಜವನ್ನು ಸಂಘಟಿಸುವಲ್ಲಿ ಮುಂಚೂಣಿಯಲ್ಲಿದ್ದಾರೆ.

ಹೈಕಮಾಂಡ್‌ಗೆ ಮನವಿ: ಈ ಕುರಿತು ಕಾಂಗ್ರೆಸ್ ಪಕ್ಷದ ವರಿಷ್ಠರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರಿಗೆ ಮನವಿ ಸಲ್ಲಿಸಲಾಗಿದೆ ಎಂದು ಶಿಂಧೆ ತಿಳಿಸಿದ್ದಾರೆ.

## ಇಪಿಹೆಚ್ ವಸ್ತು ಪ್ರದರ್ಶನದಲ್ಲಿ ವಿದ್ಯಾರ್ಥಿಗಳಿಗೆ ನೋಟ್ ಬುಕ್ ಉಚಿತ ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಕುಕನೂರ



ಪಟ್ಟಣದ ಯಲಬುರ್ಗಾ ರಸ್ತೆಯ ಹಳೆ ಪಟ್ಟಣ ಪಂಚಾಯಿತಿ ಪಕ್ಕದ ಆವರಣದಲ್ಲಿ ಒಂದು ದಿನದ ಇಪಿಹೆಚ್ ಪ್ರದರ್ಶನದಲ್ಲಿ ವಿದ್ಯಾರ್ಥಿಗಳಿಗೆ ಉಚಿತ ನೋಟ್ ಪುಸ್ತಕ ಪೆನ್ ಹಾಗೂ ಪೆನ್ ವಿತರಣಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಸಂಸ್ಥೆಯ ಸಂಸ್ಥಾಪಕ ಹೆಚ್ ಎಸ್ ಹಿರೇಮಠ ಹೇಳಿದರು.

ಪಟ್ಟಣದಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಸಂಸ್ಥೆಯ ಸಂಸ್ಥಾಪಕ ಹೆಚ್ ಎಸ್ ಹಿರೇಮಠ ಮಾತನಾಡುತ್ತಾ ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಇಪಿಹೆಚ್ ಉತ್ಪನ್ನವನ್ನು ತಯಾರಿಸಿದ್ದು ಇದರ ಬಳಕೆಯಿಂದ ತಡೆರಹಿತ ಅಧ್ಯಯನಕ್ಕೆ ಪೂರಕವಾಗಲಿದ್ದು ಇದನ್ನು ಬಳಕೆ ಮಾಡಿ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ರೂ.95 ಹೆಚ್ಚು ಫಲಿತಾಂಶ ತೆಗೆದುಕೊಂಡು ವಿದ್ಯಾರ್ಥಿಗಳಿಗೆ ಒಂದು ಲಕ್ಷ ರುಪಾಯಿ ವಿದ್ಯಾರ್ಥಿ ವೇತನ ನೀಡಲಾಗುವುದು ಹಾಗೂ ಪ್ರದರ್ಶನದಲ್ಲಿ ಪಾಲ್ಗೊಳ್ಳುವ ಪ್ರತಿಯೊಬ್ಬ ವಿದ್ಯಾರ್ಥಿಗಳಿಗೂ ಉಚಿತ ಪುಸ್ತಕ, ಟೆನ್ ಹಾಗೂ ಮ್ಯಾಪ್ ಗಳನ್ನು ವಿತರಣೆ ಮಾಡಲಾಗುವುದೆಂದು ತಿಳಿಸಿದರು.

ಈ ವೇಳೆಯಲ್ಲಿ ಇಪಿಹೆಚ್ ಸಂಸ್ಥೆಯ ಸಿಬ್ಬಂದಿಗಳು ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

CHANGE OF NAME

HerinI, Mohammed Mohiuddin Shah Quadri Aejazi S/o Khaja Moinuddin Babu Miyan R/o H.no.15 Nana Hazrat Darga, Chitguppa Tq:Chitguppa Dist:Bidar That, my names is Mohammed Mohiuddin Shah Quadri Aejazi S/o Khaja Moinuddin Babu Miyan but by mistake the name has been written as MD Moinuddin Sha Qadree S/o Babu Miya in the PassPort bearing No. W4624615 1.That, in other documents such as Ration Card, Voter Card and other relevant documents the name is written as S/o Khaja Moinuddin Babu Miyan. Hence in future I Should be callded as Mohammed Mohiuddin Shah Quadri Aejazi S/o Khaja Moinuddin Babu Miyan Hence this proclamation.
Dated : 21-01-2026
SD/-
Mohammed Mohiuddin Shah Quadri Aejazi S/o Khaja Moinuddin Chitguppa Tq : Chitguppa Dist . Bidar

# ಯುವಜನತೆ ನಶಾಮುಕ್ತ ಸಮಾಜ ನಿರ್ಮಾಣಕ್ಕೆ ಮುಂದಾಗಲಿ : ನಾ.ಮಾ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ



ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಭಾಲ್ಕಿ ವತಿಯಿಂದ ಮಾದಕ ವಸ್ತು ವಿರೋಧಿ ದಿನಾಚರಣೆಯನ್ನು ಪಟ್ಟಣದ ಹಳೆ ಉರಲ್ಲಿನ ಧರ್ಮೇಶ್ವರ ದೇವಸ್ಥಾನದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು. ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ವಿಷಯ ಮಂಡಿಸಿದ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಗಭೂಷಣ ಮಾಮಡಿ ಇತ್ತೀಚಿನ ದಿನಗಳಲ್ಲಿ ಯುವಜನತೆ ಹಾಗೂ ವಿದ್ಯಾರ್ಥಿಗಳಲ್ಲಿ ಮಾದಕ ವಸ್ತುಗಳ ಬಳಕೆ ಹೆಚ್ಚುತ್ತಿರುವುದು ಸಮಾಜಕ್ಕೆ ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು. ಮಾದಕ ವಸ್ತುಗಳ ಸೇವನೆಯಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯದ ಮೇಲೆ ಗಂಭೀರ ದುಷ್ಪರಿಣಾಮಗಳು ಉಂಟಾಗುತ್ತವೆ. ಅಲ್ಲದೆ ಕುಟುಂಬ, ಸಮಾಜ ಹಾಗೂ ದೇಶದ ಅಭಿವೃದ್ಧಿಗೂ ಇದು ಮಾರಕವಾಗಿದ್ದು, ಯುವಕರು ದುಶ್ಚಟಗಳಿಂದ ದೂರವಿದ್ದು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಜನಜಾಗೃತಿ ವೇದಿಕೆಯ ಮಾಧ್ಯಮ ಸಲಹೆಗಾರ ಸಂತೋಷ್ ಬಿ.ಜಿ. ಪಾಟೀಲ್ ಮಾತನಾಡಿ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ನಗರ, ಗ್ರಾಮೀಣ ಭಾಗದ ಜನರ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಅಭಿವೃದ್ಧಿಗೆ ಮಹತ್ತರ ಕೊಡುಗೆ ನೀಡುತ್ತಿದೆ ಎಂದು ತಿಳಿಸಿದರು. ಸ್ವ–ಸಹಾಯ ಸಂಘಗಳ ಮೂಲಕ ಮಹಿಳಾ ಸಬಲೀಕರಣ, ಸ್ವಉದ್ಯೋಗ, ಆರೋಗ್ಯ ಹಾಗೂ ಸಾಮಾಜಿಕ ಜಾಗೃತಿ ಕಾರ್ಯಕ್ರಮಗಳಂತಹ ಸಮಾಜದ ಅಭಿವೃದ್ಧಿಗೆ ಯೋಜನೆ ನಿರಂತರವಾಗಿ ಶ್ರಮಿಸುತ್ತಿದೆ ಎಂದು ವಿವರಿಸಿದರು.

ವೇದಿಕೆಯ ಸದಸ್ಯರಾದ ದೀಪಕ್ ಠಮಕೆ ಅವರು ಮಾತನಾಡಿ, "ದೇಹವೇ ದೇಗುಲ" ಅಣ್ಣ ಬಸವಣ್ಣನವರು ಹೇಳಿದ ಈ ವಾಕ್ಯವನ್ನು ಸದಾ ಜಪಿಸಿ ಅವರ ತತ್ವಸಿದ್ಧಾಂತಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು. ದೇಹವನ್ನು ಸ್ವಚ್ಛ ಹಾಗೂ ಆರೋಗ್ಯಯುತವಾಗಿ ಕಾಪಾಡಿಕೊಳ್ಳುವ ಮೂಲಕ ದುಶ್ಚಟಗಳಿಂದ ದೂರವಿರಬೇಕು ಎಂದು ಹೇಳಿದರು.

ವೇದಿಕೆಯ ಇನ್ನೂರ್ವ ಸದಸ್ಯರಾದ ಶಿವರಾಜ್ ಮಲ್ಲೇಶಿ ಅವರು ಮಾತನಾಡಿ, ಮಾದಕ ವಸ್ತುಗಳು ವ್ಯಕ್ತಿಯ ಭವಿಷ್ಯವನ್ನೇ ಹಾಳು ಮಾಡುವ ಶಕ್ತಿಯನ್ನು ಹೊಂದಿವೆ. ಆದ್ದರಿಂದ ಯುವಕರು ಮತ್ತು ವಿದ್ಯಾರ್ಥಿಗಳು ಅವುಗಳಿಂದ ಸಂಪೂರ್ಣ ದೂರವಿದ್ದು ಉತ್ತಮ ಜೀವನದತ್ತ ಸಾಗಬೇಕು ಎಂದು ಕರೆ ನೀಡಿದರು.

ಯೋಜನೆಯ ತಾಲೂಕು ಯೋಜನಾಧಿಕಾರಿ ಸಂತೋಷ್ ನಾಯ್ಕ್ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಸಾಮಾನ್ಯ ಜನರ ಬದುಕಿಗೆ ಹೊಸ ಆಯಾಮ ನೀಡಿದೆ. ಸಮಾಜದ ಎಲ್ಲ ವರ್ಗಗಳ ಅಭಿವೃದ್ಧಿಗಾಗಿ ಜಾರಿಯಲ್ಲಿರುವ ವಿವಿಧ ಯೋಜನೆಗಳನ್ನು

ಸಮುದಾಯದ ಬಡ ಹಾಗೂ ಮಧ್ಯಮ ವರ್ಗದವರು ಇದರ ಸೌಲಭ್ಯಗಳ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸುವ ಮೂಲಕ ಯುವ ಸಮುದಾಯದಲ್ಲಿ ಆರೋಗ್ಯಕರ ಹಾಗೂ ಜವಾಬ್ದಾರಿಯುತ ಜೀವನ ಮೌಲ್ಯಗಳನ್ನು ಬೆಳೆಸುವ ಅಗತ್ಯತೆಯನ್ನು ವಕ್ತಾರರು ಒತ್ತಿ ಹೇಳಿದರು. ಕಾರ್ಯಕ್ರಮವು ಸಾರ್ವಜನಿಕರಲ್ಲಿ ಉತ್ತಮ ಜಾಗೃತಿ ಮೂಡಿಸುವಲ್ಲಿ ಯಶಸ್ವಿಯಾಯಿತು.

ಕಮಲಾಬಾಯಿ ಪ್ರಾರ್ಥನೆ ಗೀತೆ ಹಾಡಿದರು, ವಲಯ ಮೇಲ್ವಿಚಾರಕ ಶಿವಾನಂದ ಲಕಾಟೆ ನಿರೂಪಿಸಿದರು, ಸೇವಾ ಪ್ರತಿನಿಧಿ ಸುರೇಖಾ ಕಲಶೆಟ್ಟಿ ವಂದನಾರ್ಪಣೆ ಸಲ್ಲಿಸಿದರು

ಈ ಸಂದರ್ಭದಲ್ಲಿ ರೇಣುಕಾ, ಶಿಲ್ಪಾ, ಶಿವಲೀಲಾ, ಪ್ರತಿಕಾ, ಮಂಜುಳಾ, ಸೇರಿದಂತೆ ಹಲವಾರು ಕಾರ್ಯಕರ್ತರು, ಸ್ವ–ಸಹಾಯ ಸಂಘದ ಅಧ್ಯಕ್ಷರು ಪದಾಧಿಕಾರಿಗಳು, ಒಕ್ಕೂಟದ ಸದಸ್ಯರು ನೂರಾರು ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾದಕ ವಸ್ತು ಮುಕ್ತ ಸಮಾಜ ನಿರ್ಮಾಣದ ಸಂಕಲ್ಪ ಕೈಗೊಂಡರು.

# ಕ್ರೀಡೆಯಿಂದ ಸ್ಪರ್ಧಾ ಮನೋಭಾವ ಬೆಳೆಯಲು ಸಾಧ್ಯ

• ಮಲ್ಲಮ್ಮ ನುಡಿ ವಾರ್ತೆಕುರುಗೋಡು



ಕ್ರಿಕೆಟ್ ಸ್ಪರ್ಧೆಯಲ್ಲಿ ಭಾಗವಹಿಸುವುದರಿಂದ ವಿದ್ಯಾರ್ಥಿಗಳಲ್ಲಿ ಕ್ರೀಡಾ ಮನೋಭಾವ, ನಾಯಕತ್ವದ ಗುಣ, ಒಗ್ಗಟ್ಟನ್ನು ಬೆಳೆಸುವ ಜೊತೆಗೆ ಮಾನಸಿಕ ನೆಮ್ಮದಿ ಮತ್ತು ಉತ್ತಮ ಆರೋಗ್ಯ ಕಾಪಾಡಿಕೊಳ್ಳಬಹುದು ಎಂದು ಸಂಸ್ಥೆಯ ಸಂಸ್ಥಾಪಕಿ ಡಾ.ಭವ್ಯ ಶೇಖರ್ ಕರೆ ನೀಡಿದರು. ಅವರು ಪಟ್ಟಣ ಸಮೀಪದ ದಮ್ಮೂರು ಗ್ರಾಮದ ಸಿಂಗದೇವನಹಳ್ಳಿಯ ಬೃಂದಾ ಕಾಲೇಜು ಆವರಣದಲ್ಲಿ ಎಸ್.ಬಿ. ಸಮೂಹ ಶಿಕ್ಷಣ ಸಂಸ್ಥೆ ವತಿಯಿಂದ ಆಯೋಜಿಸಲಾಗಿದ್ದ ಬೃಂದಾ ಪ್ರೀಮಿಯಾರ್ ಲೀಗ್ ಕ್ರಿಕೆಟ್ ಪಂದ್ಯಾವಳಿಗೆ ಶುಕ್ರವಾರ ಚಾಲನೆ ನೀಡಿ ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಕ್ರೀಡೆಗಳು ಮಾಯವಾಗುತ್ತಿದ್ದು, ಯುವಕರು ಕೇವಲ ಮನರಂಜನೆಗಾಗಿ ಟಿ.ವಿ. ಕಂಪ್ಯೂಟರ್, ಮೊಬೈಲಗಳಿಗೆ ದುಂಬಾಲು ಬಿದ್ದು ತಮ್ಮ ದೈಹಿಕ ದೃಡತೆಯನ್ನು ಕಳೆದುಕೊಳ್ಳುತ್ತಿದ್ದಾರೆ. ಆದ್ದರಿಂದ ಕ್ರೀಡೆಗಳಲ್ಲಿ ಹೆಚ್ಚಿನ ಆಸಕ್ತಿ ತೋರಿ ಭಾಗವಹಿಸುವದರಿಂದ ಉತ್ತಮ ಆರೋಗ್ಯ, ವ್ಯಾಯಾಮದ ಜೊತೆಗೆ ಮಾನಸಿಕ ನೆಮ್ಮದಿ ಸಿಗುತ್ತದೆ. ಇನ್ನೂ ಪಂದ್ಯಾವಳಿಯಲ್ಲಿ ಸೋಲು ಗೆಲುವು ಮುಖ್ಯವಲ್ಲ, ಭಾಗವಹಿಸುವುದು ಮುಖ್ಯ ಎಂದರು. ಸಂಸ್ಥೆಯ ನಿರ್ದೇಶಕ ಭವನ್ ಮಾತನಾಡಿ, ಮನೋರಂಜನೆಗಾಗಿ ಕ್ರಿಕೆಟ್ ಆಯೋಜನೆ ಮಾಡಿದ್ದೇವೆ, ಪ್ರತಿಯೊಬ್ಬ ಆಟಗಾರರು ಸೋಲು ಗೆಲುವು ನೋಡದೆ, ಸ್ಪರ್ಧೆಯಲ್ಲಿ ಭಾಗವಹಿಸಿ ಉತ್ತಮ ಪ್ರದರ್ಶನ ನೀಡಲು ಉತ್ಸಾಹದಿಂದ ಮುಂದಾಗಬೇಕು. ಇನ್ನೂ ಯಾವುದೇ ತಂಡದ ನಾಯಕ ಹಾಗೂ ಆಟಗಾರರು ಸ್ಪರ್ಧೆಯಲ್ಲಿ ತೀರ್ಪುಗಾರರು ನೀಡಿದ ತೀರ್ಪನ್ನು ಅಂತಿಮ ತೀರ್ಪುಆಗಿರುತ್ತದೆ. ಇದನ್ನು ಮನಸ್ಸಿನಿಂದ ಸ್ವೀಕರಿಸಬೇಕು. ಆಗ ಮಾತ್ರ ಉತ್ತಮ ಆಟಗಾರನಾಗಲು ಸಾಧ್ಯ ಎಂದರು. ಕ್ರಿಕೆಟ್ ಪಂದ್ಯಾವಳಿಯಲ್ಲಿ ಒಟ್ಟು 7 ತಂಡಗಳಿದ್ದು, 6 ಪಂದ್ಯಾಗಳು ಜರುಗುತ್ತವೆ. ಇದರಲ್ಲಿ ಪ್ರಥಮ, ದ್ವೀತಿಯ ಸ್ಥಾನ ಪಡೆದ ತಂಡಗಳಿಗೆ ಬಹುಮಾನ ಇರುತ್ತವೇ. ಇನ್ನೂ ಮುಂದಿನ ದಿನಗಳಲ್ಲಿ ಇಂತಹ ಪಂದ್ಯಾಗಳನ್ನು ಜರುಗಿಸುವ ಉತ್ಸಾಹದಲ್ಲಿದ್ದೇವೆ ಎಂದರು.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲರು, ಉಪನ್ಯಾಸಕರು, ಶಿಕ್ಷಕರು, ವಿದ್ಯಾರ್ಥಿಗಳು, ಕ್ರಿಕೆಟ್ ಆಟಗಾರರು, ಕ್ರಿಕೆಟ್ ಅಭಿಮಾನಿಗಳು ಹಾಗೂ ಇತರರು ಇದ್ದರು.

## ಸ್ವಚ್ಛ ಹಾಗು ಸುಂದರ ಕುರುಗೋಡು ಪಟ್ಟಣ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಿರಿ: ದತ್ತಾತ್ರೇಯಹೆಗೆಡೆ

• ಮಲ್ಲಮ್ಮ ನುಡಿ ವಾರ್ತೆಕುರುಗೋಡು



ಮೇ.31: ಕುರುಗೋಡು ಪಟ್ಟಣವನ್ನು ಸುಂದರ ಹಾಗು ಸ್ವಚ್ಛತೆಗೆ ಪುರಸಭೆಯ ಎಲ್ಲಾ 23 ವಾರ್ಡುಗಳ ಸದಸ್ಯರು, ಹಾಗು ವಾರ್ಡುಗಳ ಜನತೆಯು ಪುರಸಭೆಯೊಂದಿಗೆ ಕೈಜೋಡಿಸಿರಿ ಎಂದು ಕುರುಗೋಡು ಪುರಸಭೆ ಮುಖ್ಯಾಧಿಕಾರಿ ದತ್ತಾತ್ರೇಯಹೆಗೆಡೆ ಅವರು ಮನವಿಮಾಡಿದರು.

ಅವರು ಪಟ್ಟಣದ ಪುರಸಭೆ ಕಾರ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಪುರಸಭೆ ಸಾಮಾನ್ಯಸಭೆಯಲ್ಲಿ ಮಾತನಾಡಿದ ಅವರು, ಹಲವು ತಿಂಗಳುನಿಂದ ನೆನೆಗುದಿಗೆ ಬಿದ್ದಿರುವ ಮನೆ–ಮನೆ ನಲ್ಲಿ ಜೋಡಣೆ ಯೋಜನೆಯು ತ್ವರಿತಗತಿಯಿಂದ ಕಾಮಗಾರಿ ಪೂರ್ಣಗೊಳಿಸಿ ವಾರ್ಡುಗಳ ಜನತೆಗೆ ಅನುಕೂಲಮಾಡಿಕೊಡಬೇಕೆಂದು ಸೂಚಿಸಿದರು. ಪುರಸಭೆ ವ್ಯಾಪ್ತಿಯಲ್ಲಿ ಸ್ವಚ್ಛತೆಗಾಗಿ ಹಸಿಡಬ್ಬಿ, ಒಣಡಬ್ಬಿ, ಸ್ಯಾನಿಟರಿಡಬ್ಬಿ, ವಿಶೇಷಡಬ್ಬಿ ಎಂಬಂತೆ ಮೂಲದಲ್ಲಿಯೇ 4 ವಿಭಾಗ ಕಸದ ವಿಂಗಡನೆಯನ್ನು ಕಡ್ಡಾಯವಾಗಿ ಜಾರಿಗೊಳಿಸಲಾಗಿದೆ. ಆದ್ದರಿಂದ ಜನರು ತಮ್ಮ ಕಸವನ್ನು ಹೊರಗೆಚೆಲ್ಲದೆ ಪುರಸಭೆ ವಾಹನದಲ್ಲಿ ಹಾಕಿ ಸ್ವಚ್ಛತೆಯನ್ನು ಕಾಪಾಡಲು ವಿನಂತಿಸಿದರು. ಒಂದುವೇಳೆ ತಪ್ಪಿದ್ದಲ್ಲಿ ಜನತೆಗೆ ದಂಡವಿಧಿಸಲಾಗುವುದು ಎಂದು ಎಚ್ಚರಿಸಿದರು.

ಪುರಸಭೆ ಅಧ್ಯಕ್ಷ ಜಿ.ಮಂಜುನಾಥ ಅವರು ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಪುರಸಭೆಯ 23 ವಾರ್ಡುಗಳಲ್ಲಿ ಕುಡಿಯುವನೀರಿನ ಸಮಸ್ಯೆ ಬಾರದಂತೆ ಪಿಲ್ಲರ್‌ಮಾಡಿ ಶುದ್ಧಕುಡಿಯುವನೀರನ್ನು ಸರಬರಾಜುಮಾಡಲು ಮತ್ತು ಎಲ್ಲಾ ಆರ್‌ಓ. ಪ್ಲಾಂಟುಗಳ ಮುಖಾಂತರ ಶುದ್ಧಕುಡಿಯುವನೀರನ್ನು ಜನತೆಗೆ ಪೂರೈಸಲಾಗುವುದು ಎಂದು ಭರವಸೆ ನೀಡಿದರು. ಜೊತೆಗೆ 23 ವಾರ್ಡುಗಳಲ್ಲಿ ಮಹಿಳೆಯರಿಗೆ ಅನುಕೂಲವಾಗುವಂತೆ ಐಟೆಕ್ ಶೌಚಾಲಯ ನಿರ್ಮಾಣ, ಹಳೆಬಸ್‌ನಿಲ್ದಾಣದ ಹತ್ತಿರ ಪ್ರಯಾಣಿಕರಿಗೆ ಅನುಕೂಲವಾಗುವಂತೆ ಮಿನಿಬಸ್‌ನಿಲ್ದಾಣದ ಕಾಮಾಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಸಭೆಯಲ್ಲಿ ಸಮಸ್ಯೆಗಳ ಸುರಿಮಳೆಜನತೆಗೆ ಶುದ್ಧಕುಡಿಯುವನೀರು ಪೂರೈಸಿರಿ, ಬೀದಿಗಳಲ್ಲಿ ಬಿಡಾಡಿದನಗಳ ಹಾವಳಿ, ಮತ್ತು ಕೋತಿಗಳ ಹಾವಳಿ ಹೆಚ್ಚಾಗಿದೆ. ಗೆಣಿಕೆಹಾಳುರಸ್ತೆಯಲ್ಲಿ ಸಾರ್ವಜನಿಕರ ಸಂಚಾರಕ್ಕೆ ಅಡ್ಡಲಾಗಿ ನಿರ್ಮಾಣವಾಗಿರುವ ಕಟ್ಟಡದಲ್ಲಿ ವೈನ್ಷಾಪ್ ತಲೆಎತ್ತಿದೆ. ಇದರ ಬಗ್ಗೆ ಕ್ರಮಕೈಗೊಳ್ಳಿರಿ ಎಂಬಂತೆ ಇತರೆ ಸಮಸ್ಯೆಗಳ ಕುರಿತು ಸದಸ್ಯರದಾದ ನರಸಪ್ಪ, ಟಿ.ಶೇಖಣ್ಣ, ರಾಜ, ಹನುಮಂತಮ್ಮ, ಮಂಚಾಲಮ್ಮ, ಚಾನಾಳುಲಲಿತಮ್ಮ, ವಿ.ವೀರೇಶ, ಸೇರಿದಂತೆ ಇತರೆ ಸದಸ್ಯರು ತಮ್ಮ ಸಮಸ್ಯೆಗಳ ಕಡೆಗೆ ಗಮನಹರಿಸಬೇಕೆಂದು ಅಧಿಕಾರಿಗಳಿಗೆ ಒತ್ತಾಯಿಸಿದರು. ಸ್ಥಾಯಿಸಮಿತಿ ರಚನೆಗೆ ನಾಮಪತ್ರಸಲ್ಲಿಕೆ

ಸಭೆಯ ಪ್ರಾರಂಭದಲ್ಲಿ ಪುರಸಭೆ ಸ್ಥಾಯಿಸಮಿತಿ ರಚನೆಗೆ ಅಗತ್ಯವಿರುವ ಸ್ಥಾನಗಳಿಗೆ ಪುರಸಭೆ ಸದಸ್ಯ ವಿ.ನಟರಾಜ, ಮಂಚಾಲಮ್ಮ, ಲಲಿತಮ್ಮ, ಗುರುಮೂರ್ತಿ, ಅಂಡಿಜೋಗಿಸಂಗೀತ ಒಟ್ಟು 5 ಜನ ಸದಸ್ಯರು ಸ್ಥಾಯಿಸಮಿತಿಗೆ ನಾಮಪತ್ರಸಲ್ಲಿಸಿದರು. ಪುರಸಭೆಅಧ್ಯಕ್ಷ ಜಿ.ಮಂಜುನಾಥ ಅವರು ನಾಮಪತ್ರಗಳನ್ನು ಸ್ವೀಕರಿಸಿದರು. ಪುರಸಭೆ ಉಪಾಧ್ಯಕ್ಷೆ ನಾಗವೇಣಿಅಂಜಿನಪ್ಪ, ಪುರಸಭೆ ಅಧಿಕಾರಿಗಳು, ಸದಸ್ಯರು ಸಾಮಾನ್ಯಸಭೆಯಲ್ಲಿ ಭಾಗವಹಿಸಿದ್ದರು.

# ಮಹಿಳೆಯರ ಮುಟ್ಟು ಶಾಪವಲ್ಲ ಪ್ರಕೃತಿ ನೀಡಿದ ವರದಾನ: ಶರಣಮ್ಮ ಕಾರನೂರು

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಮೇ31: ಇಲ್ಲಿನ ಜಿಲ್ಲಾಡಳಿತ,

ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಹಿಳಾ ಸಬಲೀಕರಣ ಘಟಕ ಹಾಗೂ ನವೋದಯ ಶಿಕ್ಷಣ ಮಹಾವಿದ್ಯಾಲಯ ರಾಯಚೂರು ಇವರ ಸಹಯೋಗದಲ್ಲಿ

ದಿನಾಂಕ 29.05.2026 ರಂದು ನವೋದಯ ಶಿಕ್ಷಣ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ "ಮೇ–28 ಮುಟ್ಟಿನ ನೈರ್ಮಲ್ಯ ದಿನ" ಜಾಗೃತಿ ಕಾರ್ಯಕ್ರಮ ಕುರಿತು ಮುಟ್ಟು ಮಹಿಳೆಯರಿಗೆ ಪ್ರಕೃತಿ ನೀಡಿದ ವರದಾನ ವೈಜ್ಞಾನಿಕ ಮನೋಭಾವದಿಂದ ಎಲ್ಲರೂ ಈ ವಿಷಯವನ್ನು ಅರ್ಥಮಾಡಿಕೊಳ್ಳಬೇಕು ಎಂದರು ಮಕ್ಕಳಿಗೆ ಈ ಕುರಿತು ಮಾರ್ಗದರ್ಶನವನ್ನು ನೀಡಬೇಕು ಯಾವುದೇ ರೀತಿಯ ಮೂಢನಂಬಿಕೆಗೆ ಒಳಗಾಗಬಾರದೆಂದು ಕಾರ್ಯಕ್ರಮ ಉದ್ಘಾಟಿಸಿ ಶರಣಮ್ಮ ಕಾರನೂರು ಉಪನಿರ್ದೇಶಕರು ಮಹಿಳಾ ಮತು ??ಮಕ್ಕಳ ಅಭಿವೃದ್ಧಿ ಇಲಾಖೆ ರಾಯಚೂರು ಇವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವಿಶ್ವಮುಟ್ಟಿನ ನೈರ್ಮಲ್ಯ ದಿನಾಚರಣೆಯನ್ನು ಪ್ರತಿ ವರ್ಷ ಮೇ 28 ರಂದು ಆಚರಿಸಲಾಗುತ್ತಿದ್ದು, ಈ ಕುರಿತು ಎಲ್ಲರಲ್ಲೂ ಜಾಗೃತಿ ಅತ್ಯವಶ್ಯ. ಮುಟ್ಟಿನ ಸಮಯದಲ್ಲಿ ಪ್ರಕೃತಿಗೆ ಹಾನಿಯಾಗುವಂತಹ ಹಾಗೂ ನಮ್ಮ ದೇಹಕ್ಕೆ ಹಾನಿಕಾರಕವಾಗುವಂತಹ ಪ್ಯಾಡಗಳನ್ನು ಬಳಸಬಾರದು ಯಾವುದೇ ಸಮಸ್ಯೆ ಕಂಡುಬಂದಲ್ಲಿ ವೈದ್ಯರನ್ನು ಸಂಪರ್ಕಿಸಿ Menstrual Cupನ್ನು ಬಳಸಬೇಕೆಂದು. ಡಾ.ನಂದಿತಾ ಎಂ.ಎನ್ಜಿಲ್ಲಾಆರ್.ಸಿ.ಹೆಚ್.ಅಧಿಕಾರಿಗಳು "ಮೇ–28 ಮುಟ್ಟಿನ ನೈರ್ಮಲ್ಯ ದಿನ" ಜಾಗೃತಿ ಕಾರ್ಯಕ್ರಮ ಕುರಿತು ಉಪನ್ಯಾಸ ಭಾಷಣ ಮಾಡಿದರು.

ಮುಟ್ಟಿನ ಶುಭ್ರ ದಿನವನ್ನಾಗಿ ಆಚರಿಸಲಾಗುತ್ತಿದೆ ಪ್ರಕೃತಿ ನೀಡಿದ ಈ ದೈಹಿಕ ಬದಲಾವಣೆಯನ್ನು ನಾವೆಲ್ಲರೂ ಗೌರದಿಂದ ಕಾಣಬೇಕಾಗಿದೆ ಎಂದರು. ಹದಿಹರೆಯದ ಮಕ್ಕಳಲ್ಲಿ ಈ ಕುರಿತು ಜಾಗೃತಿ ಅತ್ಯವಶ್ಯಕ ಆದ್ದರಿಂದ ಪ್ರಶಿಕ್ಷಣಾರ್ಥಿಗಳಾದ ತಾವುಗಳು ಈ ಕುರಿತುಅಧ್ಯನಯ ಮಾಡಿ ಮಕ್ಕಳಿಗೆ ಈ ವಿಷಯದ ಕುರಿತು ಪಾಠಮಾಡಿ ಎಂದು ತಿಳಿಸಿದರು. ನಿಯಮಿತವಾದ ಪೌಷ್ಟಿಕ ಆಹಾರ ಸೇವನೆ, ವ್ಯಾಯಾಮ ಶುಚಿತ್ವವಾದ ಶೌಚಾಲಯಗಳ ಬಳಕೆ ಅತ್ಯವಶ್ಯಕ ಎಂದರು. ಮಹಿಳೆಯರು ಮುಟ್ಟಿನಿಂದಾಗುವ ತೊಂದರೆಗಳ ಕುರಿತು ಮುಕ್ತವಾಗಿ ಮಾತನಾಡುವುದನ್ನು ಕಲಿಯಬೇಕು ಅವಶ್ಯವಿದ್ದಲ್ಲಿ ವೈದ್ಯರನ್ನು ಸಂಪರ್ಕ ಮಾಡಬೇಕು ಎಂದು ಡಾ: ಶ್ರೀ ಮತಿ ಗಿರಿಜಾ ಜಂಡರ್ ತಜ್ಞರು ಸಲಹೆ ನೀಡಿದರು.

ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹಾಗೂ ಪುರುಷ ಉಪನ್ಯಾಸಕರು ಭಾಗವಹಿಸಿ ಈ ಕುರಿತು ಚರ್ಚಿಸಿದ್ದು ವಿಶೇಷವಾಗಿತ್ತು.

ಈ ಸಂದರ್ಭದಲ್ಲಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲರಾದ ಡಾ.ಉಮಾಕಾಂತಜಿ. ದೇವರಮನಿ, ವಹಿಸಿದ್ದರು. ಡಾ.ರಾಜಾಶಂಕರಎನ್. ಆಡಳಿತ ಸಂಯೋಜಕರು, ಡಾ.ರತನ್ ಚವ್ಹಾನ್ ಶೈಕ್ಷಣಿಕ ಸಂಯೋಜಕರು, ಡಾ.ವಿಜಯಕುಮಾರಿ ಅಧ್ಯಕ್ಷರು, ಆಂತರಿಕ ದೂರು ಸಮಿತಿ, ಹಾಗೂ ನವೋದಯಶಿಕ್ಷಣ ಮಹಾವಿದ್ಯಾಲಯದ ಉಪನ್ಯಾಸಕರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬಕಲ್ಯಾಣ ಇಲಾಖೆ ಆರ್..ಕೆ.ಎಸ್.ಕೆ ಜಿಲ್ಲಾ ಸಂಯೋಜಕರು, ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ಶ್ರೀಮತಿವಿಜಯಲಕ್ಷ್ಮಿ ನವೂದಯ ಶಿಕ್ಷಣ ಮಹಾವಿದ್ಯಾಲಯದ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಿಂದ ಬಸ್ ಪಾಸ್‌ಗಾಗಿ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ31: ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ರಾಯಚೂರು ವಿಭಾಗದಿಂದ 2026–27 ನೇ ಸಾಲಿನ ವಿದ್ಯಾರ್ಥಿಗಳ ಪಾಸ್ ಪಡೆಯಲು ಆನ್ ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದೆ.

ದಿನಾಂಕ 01.06.2026 ರಿಂದ ಆನ್ ಲೈನ್‌ನಲ್ಲಿ ವಿದ್ಯಾರ್ಥಿಗಳ ಸೇವಾ

ಸಿಂಧು ಪೋರ್ಟಲ್ ಮುಖಾಂತರ ಅಥವಾ ಕರ್ನಾಟಕ ಒನ್ ಗ್ರಾಮ–ಒನ್ ಕೇಂದ್ರಗಳಲ್ಲಿ 35 ರೂ, ಸೇವಾ ಶುಲ್ಕ ಪಾವತಿಸಿ ಅರ್ಜಿ ಸಲ್ಲಿಸಬಹುದಾಗಿದೆ,

URL:https://sevasindhuservices.karnataka.gov.in/buspassservices/

ಅರ್ಜಿ ಸಲ್ಲಿಸಿದ ನಂತರ ವಿದ್ಯಾರ್ಥಿಗಳು ಆಯ್ಕೆ ಮಾಡಿದ ಕೌಂಟರ್‌ಗೆ ನಿಗದಿತ ಪಾಸಿನ ಶುಲ್ಕವನ್ನು ನಗದು ಅಥವಾ ಕ್ರೆಡಿಟ್ ಕಾರ್ಡ ಡೆಬಿಟ್ ಕಾರ್ಡ್ ಅಥವಾ ಯುಪಿಐ ಮೂಲಕ ಪಾವತಿಸಿ ಪಾಸ್ ಪಡೆಯಬಹುದು.

ರಾಯಚೂರು, ಲಿಂಗಸೂಗೂರು, ಸಿಂಧನೂರು, ದೇವದುರ್ಗ, ಮಾನವಿ, ಮಸ್ಕಿ, ಸೇರಿದಂತೆ ತಲಾ ಒಂದು ವಿತರಣೆ

ಕೇಂದ್ರಗಳಿವೆ, ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9620369539, 6364600850 ಸಂಪರ್ಕಿಸಬಹುದಾಗಿದೆಂದು

ವಿಭಾಗೀಯ ನಿಯಂತ್ರಣಾಧಿಕಾರಿ ಕ.ಕ.ರ.ಸಾ.ನಿಗಮ ರಾಯಚೂರು ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಬಿಜೆಪಿ ಪಕ್ಷ ಸಂಘಟನೆ ಬಲಪಡಿಸಲು ಮುಂದಾಗಬೇಕು : ಹಾಲಪ್ಪ ಆಚಾರ



• **ಮಲ್ಲಮ್ಮ ನುಡಿ ವಾರ್ತೆಯಲಬುರ್ಗಾ**

ಬಿಜೆಪಿ ಸಂಘಟನೆ ಬಲಪಡಿಸುವಲ್ಲಿ ಮುಂದಾಗಬೇಕು ಎಂದು ಮಾಜಿ ಸಚಿವ ಹಾಲಪ್ಪ ಆಚಾರ ಅವರು ಮತದರಾರ ಪರಿಷ್ಕರಣೆ ವಿಷಯವಾಗಿ ಮೇ.30 ರಂದು ಪಟ್ಟಣದ ಭಾರತೀಯ ಜನತಾ ಪಕ್ಷದ ಕಾರ್ಯಾಲಯದಲ್ಲಿ ಯಲಬುರ್ಗಾ ಮಹಾ ಶಕ್ತಿ ಕೇಂದ್ರದ ಬಿಎ ಲ್.ಎ 2 ಹಾಗು ಬೂತ ಅಧ್ಯಕ್ಷರ ಕಾರ್ಯಗಾರದಲ್ಲಿ ಎಸ್.ಆರ್.ಐ ಮತದಾರ ಪಟ್ಟಿಪರಿಸ್ಕಾರಣೆ ವಿಚಾರವಾಗಿ ಕಾರ್ಯಗಾರದಲ್ಲಿ ಮಾತನಾಡಿ ಬಿಜೆಪಿ ಪಕ್ಷದಲ್ಲಿ ಕಾರ್ಯಕರ್ತರೆ ಜೀವಾಳ ಅವರಿಂದ ಪಕ್ಷ ಬಲವರ್ದನೆಯಾಗಲು ಸಾದ್ಯ ಎಂದರು. ಮುಖಂಡರಾದ ಬಸಲಿಂಗಪ್ಪ ಭೂತೆ, ಶಿವಶಂಕರರಾವ್ ದೇಸಾಯಿ, ಹಾಗೂ ಆಡಿಸಿಸಿ ಬ್ಯಾಂಕ್ ನಿರ್ದೇಶಕ ಗೌರಾ ಬಸವರಾಜ್ ರಾಜೂರು, ಮುಖಂಡರಾದ ವೀರಣ್ಣ ಹುಬ್ಬಳ್ಳಿ, ಶಕುಂತಲಾ ದೇವಿ ಮಾಲಿ ಪಾಟೀಲ್, ಶಿವಕುಮಾರ್ ನಾಗಲಪುರ,ರತನ್ ದೇಸಾಯಿ, ಶರಣಪ್ಪ ಬಣ್ಣದಬಾವಿ, ಶರಣಪ್ಪ ಈಳಗೇರ,ಶಿವಪ್ಪ ವಾದಿ, ಮಾರುತಿ ಗಾವರಾಳ, ಮಂಜುನಾಥ ನಾಡಗೌಡ್ರ,ಅಯ್ಯನಗೌಡ ಕೆಂಚಮ್ಮನವರ, ಶ್ರೀಮತಿ ಸಂತೋಷಿಮಾ ಜೋಶಿ ಹಾಗೂ ಬಿ ಎಲ್ ಎ ಟು ಮತ್ತು ಬೂತ್ ಅಧ್ಯಕ್ಷರು ಮಹಾ ಶಕ್ತಿ ಕೇಂದ್ರದ ಅಧ್ಯಕ್ಷರು ಹಾಗೂ ಶಕ್ತಿ ಕೇಂದ್ರದ ಪ್ರಮುಖರು ಪಕ್ಷದ ಹಿರಿಯರು ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು.

# ಪ್ರಿಯಾಂಕ್ ಖರ್ಗೆ ಉಪಮುಖ್ಯಮಂತ್ರಿ ಸ್ಥಾನ,ರಾಜಾ ವೇಣುಗೋಪಾಲ ನಾಯಕ ರವರಿಗೆ ಸಚಿವ ಸ್ಥಾನಕ್ಕೆ ದಲಿತ ಸಂಘಟನೆಗಳಿಂದ ಒತ್ತಾಯ

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ**




ಪ್ರಿಯಾಂಕ್ ಖರ್ಗೆ ಜೀ ಸಚಿವ ಸ್ಥಾನ ಹಾಗೂ ಉಪಮುಖ್ಯಮಂತ್ರಿ ಸ್ಥಾನ ಮತ್ತು ಶೀ ರಾಜಾ ವೇಣುಗೋಪಾಲ ನಾಯಕ ರವರಿಗೆ ಸಚಿವ ಸ್ಥಾನ ನೀಡಬೇಕು ಎಂದು ದಲಿತ ಸಂಘಟನೆಗಳಿಂದ ಒತ್ತಾಯ

ಸುರಪುರ ನಗರದಲ್ಲಿ ಪತ್ರಿಕಾ ಭವನದಲ್ಲಿ ಕಾಂಗ್ರೆಸ್ ಪಕ್ಷದ ಬಲಗೈ ಸಮುದಾಯದಿಂದ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡುವಂತೆ ಪತ್ರಿಕಾ ಹೇಳಿಕೆ ಮೂಲಕ ಒತ್ತಾಯಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದ ಸರ್ಕಾರದಲ್ಲಿ ಪ್ರಿಯಾಂಕ್ ಖರ್ಗೆ ಅವರು ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು,ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ವಿಶೇಷ ಕೊಡುಗೆ ನೀಡಿದ್ದಾರೆ. ಆಡಳಿತಾತ್ಮಕ ದಕ್ಷತೆ,ಜನಪರ ಕಾಳಜಿ, ಯುವ ನಾಯಕತ್ವ ಹಾಗೂ ಪಕ್ಷ ಸಂಘಟನೆಯಲ್ಲಿ ತಮ್ಮದೇ ಆದ ಛಾಪು ಮೂಡಿಸಿರುವ ಅವರು ರಾಜ್ಯದ ಪ್ರಭಾವಿ ಸಚಿವರಲ್ಲಿ ಒಬ್ಬರಾಗಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಪ್ರಿಯಾಂಕ್ ಖರ್ಗೆ ಅವರು ಕೇವಲ ಕಲಬುರಗಿ ಜಿಲ್ಲೆಯ ನಾಯಕರಾಗಿ ಮಾತ್ರವಲ್ಲದೆ, ಇಡೀ ಕಲ್ಯಾಣ ಕರ್ನಾಟಕ ಭಾಗದ ಧ್ವನಿಯಾಗಿ ಕಾರ್ಯನಿರ್ವಹಿಸಿದ್ದಾರೆ. ಮಾಹಿತಿ ತಂತ್ರಜ್ಞಾನ, ಗ್ರಾಮೀಣಾಭಿವೃದ್ಧಿ, ಉದ್ಯೋಗ ಸೃಷ್ಟಿ ಹಾಗೂ ಜನಪರ ಯೋಜನೆಗಳ ಪರಿಣಾಮಕಾರಿ ಅನುಷ್ಠಾನದ ಮೂಲಕ ರಾಜ್ಯದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ್ದಾರೆ. ಯುವ ಸಮುದಾಯದಲ್ಲಿ ಅಪಾರ ಜನಪ್ರಿಯತೆ ಹೊಂದಿರುವ ಅವರು ಕಾಂಗ್ರೆಸ್ ಪಕ್ಷದ ಭವಿಷ್ಯದ ನಾಯಕತ್ವದ ಪ್ರತೀಕವಾಗಿದ್ದಾರೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಇತ್ತೀಚೆಗೆ ರಾಜ್ಯದ ವಿವಿಧ ಭಾಗಗಳ ಕಾಂಗ್ರೆಸ್ ಮುಖಂಡರು, ಜನಪ್ರತಿನಿಧಿಗಳು ಹಾಗೂ ವಿವಿಧ ಸಮುದಾಯಗಳ ನಾಯಕರು ಪ್ರಿಯಾಂಕ್ ಖರ್ಗೆ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡುವಂತೆ ಆಗ್ರಹಿಸುತ್ತಿರುವುದು ಸ್ವಾಗತಾರ್ಹ ಬೆಳವಣಿಗೆಯಾಗಿದೆ. ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ರಾಜಕೀಯ ಪರಂಪರೆಯನ್ನು ಯಶಸ್ವಿಯಾಗಿ ಮುಂದುವರಿಸಿಕೊಂಡು ಹೋಗುತ್ತಿರುವ ಪ್ರಿಯಾಂಕ್ ಖರ್ಗೆ ಹಾಗೂ ರಾಜಾ ವೇಣುಗೋಪಾಲ ನಾಯಕ ಅವರಿಗೆ ಉನ್ನತ ಜವಾಬ್ದಾರಿ ನೀಡುವುದು ಪಕ್ಷ ಹಾಗೂ ಸರ್ಕಾರಕ್ಕೆ ಮತ್ತಷ್ಟು ಬಲ ತುಂಬಲಿದೆ ಎಂದು ತಿಳಿಸಿದ್ದಾರೆ.

ರಾಜ್ಯ ಸಚಿವ ಸಂಪುಟದಲ್ಲಿ ಮತ್ತೊಂದು ಉಪ ಮುಖ್ಯಮಂತ್ರಿ ಸ್ಥಾನ ಸೃಷ್ಟಿಸಿ ಪ್ರಿಯಾಂಕ್ ಖರ್ಗೆ ಅವರಿಗೆ ಆ ಜವಾಬ್ದಾರಿ ನೀಡುವುದರಿಂದ ಸಾಮಾಜಿಕ ನ್ಯಾಯ, ಪ್ರಾದೇಶಿಕ ಸಮತೋಲನ ಹಾಗೂ ಯುವ ನಾಯಕತ್ವಕ್ಕೆ ಮತ್ತಷ್ಟು ಬಲ ಸಿಗಲಿದೆ. ಕಲ್ಯಾಣ ಕರ್ನಾಟಕ ಭಾಗದ ಜನರ ಬಹುಕಾಲದ ಆಶಯವೂ ಈಡೇರಲಿದ್ದು, ಈ ಭಾಗದ ರಾಜಕೀಯ ಪ್ರಾತಿನಿಧ್ಯಕ್ಕೂ ನ್ಯಾಯ ದೊರೆಯಲಿದೆ ಎಂದು ಭೀಮ್ ಶಕ್ತಿ ಮುಖಂಡರು ಅಭಿಪ್ರಾಯಪಟ್ಟಿದ್ದಾರೆ.

ಕಾಂಗ್ರೆಸ್ ಹೈಕಮಾಂಡ್ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಶೀಘ್ರವೇ ಸೂಕ್ತ ನಿರ್ಧಾರ ಕೈಗೊಂಡು ಪ್ರಿಯಾಂಕ್ ಖರ್ಗೆ ಅವರನ್ನು ಉಪ ಮುಖ್ಯಮಂತ್ರಿಯನ್ನಾಗಿ ಮತ್ತು ರಾಜಾ ವೇಣುಗೋಪಾಲ ನಾಯಕ ರವರಿಗೆ ಸಚಿವ ಸ್ಥಾನ ನೇಮಕ ಮಾಡಬೇಕು ಎಂದು ಆಗ್ರಹಿಸಿದರು ಈ ಸಂದರ್ಭದಲ್ಲಿ ಮಾನಪ್ಪ ಕರಡಕಲ್, ವೆಂಕಟೇಶ್ ಹೊಸ್ಮನಿ, ನಾಗಣ್ಣ ಕಲ್ಲದೇವನಹಳ್ಳಿ, ಆದಪ್ಪ ಹೊಸ್ಮನಿ, ಮಾಳಪ್ಪ ಕಿರದಳ್ಳಿ, ಶಿವಲಿಂಗ ಹಸನಾಪೂರ, ತಿಪ್ಪಣ್ಣ ಶೆಳ್ಳಗಿ, ರಾಜು ಕಟ್ಟಿಮನಿ, ಮುತ್ತು ದೇವತ್ಕಲ್, ಮಹಾದೇವ ಚಲುವಾದಿ, ಪಾರಪ್ಪ ದೇವತ್ಕಲ್, ಶೇಖರ್ ಮಂಗಳೂರು, ರಮೇಶ ಬಡಿಗೇರ, ಮಲ್ಲು ಮುಷ್ಠಳ್ಳಿ, ರಾಜು ಬಡಿಗೇರ್, ಮಂಜುನಾಥ್ ಹೊಸ್ಮನಿ, ಮೌನೇಶ್ ದೇವತ್ಕಲ್, ಇನ್ನಿತರರು ಉಪಸ್ಥಿತರಿದ್ದರು

# ಈಶ್ವರ್ ಖಂಡ್ರೆಗೆ ಡಿಸಿಎಂ ಮಾಡಲು ಒತ್ತಾಯ

• **ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ**



ರಾಜ್ಯ ಸರಕಾರದ ಅರಣ್ಯ ಪರಿಸರ ಜೀವಿಶಾಸ್ತ್ರ ಮತ್ತು ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾಗಿರುವ ಹಾಗೆಯೇ ಅಖಿಲ ಭಾರತ ವೀರಶೈವ ಮಹಾಸಭೆಯ ರಾಷ್ಟ್ರೀಯ ಅಧ್ಯಕ್ಷರಾಗಿರುವ ಮಾನ್ಯ ಶ್ರೀ ಈಶ್ವರ ಖಂಡ್ರೆ ಅವರಿಗೆ ಬರುವ ಸರ್ಕಾರದಲ್ಲಿ ಉಪಮುಖ್ಯಮಂತ್ರಿ ಸ್ಥಾನವನ್ನು ಕೊಡಬೇಕು. ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರ್ಕಾರದಲ್ಲಿ ಸಚಿವರಾದ ಶ್ರೀ ಈಶ್ವರ ಖಂಡ್ರೆ ಅವರು ಅತ್ಯಂತ ದಕ್ಷ ಪ್ರಾಮಾಣಿಕ ಮತ್ತು ಜನಪರವಾದ ರೀತಿಯಲ್ಲಿ ಎಲ್ಲರಿಂದಲೂ ಸೈ ಎನಿಸಿಕೊಂಡು ಯಶಸ್ವಿ ಆಡಳಿತವನ್ನು ನಡೆಸಿ ತನ್ಮೂಲಕ ರಾಜ್ಯ ಸರ್ಕಾರಕ್ಕೆ ಮತ್ತು ಕಾಂಗ್ರೆಸ್ ಪಕ್ಷಕ್ಕೆ ಘನತೆ ಗೌರವವನ್ನು ತಂದಿರುತ್ತಾರೆ ಜೊತೆಗೆ ಶ್ರೀಈಶ್ವರ್ ಖಂಡ್ರೆ ರವರು ರಾಜ್ಯದ ಬಹು ಸಂಖ್ಯಾತ ಸಮಾಜವಾದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷರಾಗಿ ಅತ್ಯಂತ ಪ್ರಾಮಾಣಿಕವಾದ ರೀತಿಯಲ್ಲಿ ಸಮಾಜದ ಸಂಘಟನೆಯನ್ನು ಯಶಸ್ವಿಯಾಗಿ ಮಾಡಿಕೊಂಡು ಬರುತ್ತಿರುವರು. ಪ್ರಯುಕ್ತ ಮಾನ್ಯ ಈಶ್ವರ್ ಖಂಡ್ರೆ ಅವರನ್ನು ಮಾನ್ಯ ಡಿ ಕೆ ಶಿವಕುಮಾರ್ ಅವರ ನಾಯಕತ್ವದಲ್ಲಿ ಬರಲಿರುವ ಹೊಸ ಸರ್ಕಾರದಲ್ಲಿ ಉಪಮುಖ್ಯಮಂತ್ರಿಗಳಾಗಿ ನೇಮಕ ಮಾಡುವ ಮೂಲಕ ರಾಜ್ಯದ ಬಹು ಸಂಖ್ಯಾತ ವೀರಶೈವ ಲಿಂಗಾಯತ ಸಮಾಜಕ್ಕೆ ಮನ್ನಣೆ ಮತ್ತು ಸಾಮಾಜಿಕ ನ್ಯಾಯವನ್ನು ಕೊಡಬೇಕೆಂದು ಕಾಂಗ್ರೆಸ್ ಪಕ್ಷದ ಹೈಕಮಾಂಡನ್ನು ಈ ಮೂಲಕ ಒತ್ತಾಯಿಸುತ್ತೇವೆ. ಮಾನ್ಯ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಪಕ್ಷ ಸರ್ಕಾರ ರಚಿಸುವಲ್ಲಿ ರಾಜ್ಯದ ಬಹುಸಂಖ್ಯಾತ ವೀರಶೈವ ಲಿಂಗಾಯತ ಸಮಾಜದ ಬೆಂಬಲವಾಗಿ ನಿಂತಿರುವುದು ಅಲ್ಲಗಳೆಯಲಾಗದು ಎಂದು

ಡಾ : ರಾಜಶೇಖರ ಶಿವಾಚಾರ್ಯರು

ಹಿರೇಮಠ ಸಂಸ್ಥಾನ ಬೇಮಳಖೇಡ ಗೋರಟಾ ಬೀದರ ರವರು ತಿಳಿಸಿದ್ದಾರೆ.

# ಜೂ.2 ರಂದು ಮುರ್ಕುಂಡಿ ದೇವರಿಗೆ ಹರಕೆ ಸೇವೆ

• **ಮಲ್ಲಮ್ಮ ನುಡಿ ವಾರ್ತೆಗೋಕರ್ಣ**



ಇಲ್ಲಿಯ ಸಮೀಪದ ಹನೇಹಳ್ಳಿ–ಬಂಕಿಕೊಡ್ಲದ ಶ್ರೀ ಮುರ್ಕುಂಡಿ ದೇವರಿಗೆ ಆಗೇರ ಸಮಾಜದವರ ಹರಕೆ ಸೇವೆ ಜೂ.2 ರಂದು ಹಮ್ಮಿಕೊಂಡಿದ್ದಾರೆ. ಉಪ್ಪಿನ ಆಗರದಲ್ಲಿ ಕೆಲಸ ಮಾಡುವ ಆಗೇರ ಸಮಾಜದವರು ಉಪ್ಪಿನ ಹಂಗಾಮು ಮುಗಿದ ನಂತರ ಜೂನ್ ಮೊದಲವಾರದ ಮಂಗಳವಾರದಂದು ಪ್ರತಿವರ್ಷ ಶ್ರೀ ಮುರ್ಕುಂಡಿ ದೇವರಿಗೆ ಬಂದು ಹರಕೆ ಸೇವೆ ಸಲ್ಲಿಸುವುದು ವಾಡಿಕೆಯಾಗಿದೆ. ಆಗೇರ ಸಮಾಜದವರು ಉಪ್ಪಿನ ಆಗರದಲ್ಲಿ ಕೆಲಸ ಮಾಡುವುದರಿಂದ ಅವರಿಗೆ ಆಗೇರರು ಹೆಸರು ಬಂದಿದೆ ಎಂದು ಹಿರಿಯ ಸಾಹಿತಿ ಡಾ. ರಾಮಕೃಷ್ಣ ಗುಂದಿ ಅವರು ತಮ್ಮ ಪಿಎಚ್‌ಡಿ ಕೃತಿಯಲ್ಲಿ ಉಲ್ಲೇಖಿಸಿದ್ದಾರೆ. ದಲಿತ ಜನಾಂಗವಾಗಿದ್ದರೂ ಕೂಡ ದೈವ ನಿಷ್ಠರು. ಹೀಗಾಗಿ ತಾವು ದುಡಿದ ಒಂದು ದಿನದ ವೇತನವನ್ನು ದೇವರ ಸೇವೆಗೆ ಬಳಸುತ್ತಾರೆ. ವಿಶೇಷ ಎನಿಸುವ ಈ ಜನಾಂಗದವರು ಉತ್ತರ ಕನ್ನಡ ಜಿಲ್ಲೆಯ ಗೋಕರ್ಣ, ಅಂಕೋಲಾದ ಬಿಳಿಹೋಯ್ಗಿ, ಗೋವಾ ಸೇರಿದಂತೆ ವಿವಿದೆಡೆ ಉಪ್ಪಿನ ಆಗರದಲ್ಲಿ ಕೆಲಸ ಮಾಡುತ್ತಾರೆ.

# ಸದೃಢ ಆರೋಗ್ಯಕ್ಕೆ ಯುವಕರ ಕ್ರೀಡೆ ಅಗತ್ಯ : ಪಿಎಸ್ಐ ವೆಂಕಟೇಶ



• **ಮಲ್ಲಮ್ಮ ನುಡಿ ವಾರ್ತೆಮುದಗಲ್**

ಯುವಕರು ಪಾಶ್ಚಾತ್ಯ ಜೀವನ ಶೈಲಿಗೆ ಮಾರುಹೋಗದೇ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಆರೋಗ್ಯ ಸದೃಡವಾಗಿಟ್ಟುಕೊಳ್ಳಬೇಕು ಎಂದು ಮುದಗಲ್ ಠಾಣೆ ಪಿಎಸ್ಐ ವೆಂಕಟೇಶ ಮಾಡಗಿರಿ ಶನಿವಾರ ಹೇಳಿದರು. ಪಟ್ಟಣದ ಸಿದ್ರಾಮಪ್ಪ ಸಾಹುಕಾರ ಸಂತೆಕೆಲ್ಲೂರು ಒಳಾಂಗಣ ಕ್ರೀಡಾಂಗಣದಲ್ಲಿ ಮುದಗಲ್ ಸ್ಪೋರ್ಟ್ಸ್ ಅಸೋಸಿಯೇಷನ್ ವತಿಯಿಂದ ಆಯೋಜಿಸಿದ್ದ ಒಪನ್ ಶಟಲ್ ಬ್ಯಾಡ್ಮಿಂಟನ್ ಟೂರ್ನಮೆಂಟ್ ಪ್ರಾರಂಭ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು ಸದೃಡ ಆರೋಗ್ಯಕ್ಕಾಗಿ ಕ್ರೀಡೆಗಳು ಅವಶ್ಯಕವಾಗಿವೆ. ದೇಹ ದಂಡನೆಯಿಂದ ದೈನಂದಿನ ಬದುಕಿನ ಒತ್ತಡ ನಿವಾರಣೆಯಾಗಿ ಜೀವನ ಉಲ್ಲಾಸದಿಂದ ಕೂಡಿರುತ್ತದೆ. ಯುವಕರು ಹೆಚ್ಚು ಕ್ರೀಡಾಕೂಟದಲ್ಲಿ ಭಾಗವಹಿಸಲು ಉತ್ಸಕರಾಗಬೇಕು. ಕ್ರೀಡೆಗಳು ಮಾನಸಿಕ, ದೈಹಿಕ ಆರೋಗ್ಯಕ್ಕಾಗಿ ಸಹಕಾರಿಯಾಗಲಿದೆ. ಅಸೋಸಿಯೇಷನ್ ನವರು ನಿರಂತರವಾಗಿ ಇಂತಹ ಕ್ರೀಡಾಕೂಟಗಳನ್ನು ಆಯೋಜನೆ ಮಾಡಬೇಕು. ಇಂತಹ ಟೂರ್ನಾಮೆಂಟಗಳನ್ನು ಕ್ರೀಡಾಪಟುಗಳು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು. ಕ್ರೀಡಾಕೂಟಕ್ಕೆ ಸಂಸ್ಥೆಯ ಗೌರವಾಧ್ಯಕ್ಷ ಸಂತೆಕೆಲ್ಲೂರು ಸಿದ್ರಾಮಪ್ಪ ಸಾಹುಕಾರ್ ರಿಬ್ಬನ್ ಕತ್ತರಿಸುವ ಮೂಲಕ ಚಾಲನೆ ನೀಡಿದರು.

ಎರಡು ದಿನ ಜರುಗುವ ಟೂರ್ನಮೆಂಟ್ ನಲ್ಲಿ ಮೊದಲನೇಯ ದಿನ 32 ಕ್ರೀಡಾ ತಂಡಗಳು ಭಾಗವಹಿಸಿವೆ. ಕ್ರೀಡಾಪಟುಗಳಿಗೆ ಆಯೋಜಕರು ರುಚಿಕಟ್ಟಾದ ಬೆಳಗಿನ ಉಪಹಾರ ಮತ್ತು ಮಧ್ಯಾಹ್ನದ ಊಟದ ವ್ಯವಸ್ಥೆ ಕಲ್ಪಿಸಿದ್ದರು. ಕಾರ್ಯಕ್ರಮದಲ್ಲಿ ಗಣ್ಯರಿಗೆ ಸನ್ಮಾನಿಸಿ ಗೌರವಿಸಿದರು.

ಕಾರ್ಯಕ್ರಮದ ನಿರೂಪಣೆ ಶಿಕ್ಷಕ ಕೃಷ್ಣ ಮುಳ್ಳೂರು ನೆರವೇರಿಸಿದರು. ಅಸೋಸಿಯೇಷನ್ ಅಧ್ಯಕ್ಷ ಮಲ್ಲಿಕಾರ್ಜುನ ಗೌಡೂರು, ಕಾರ್ಯದರ್ಶಿ ರಾಘವೇಂದ್ರ ಗುಮಾಸ್ತೆ, ಮುಖಂಡರಾದ ಸುರೇಶ ಸೇಠ್, ನಿವೃತ್ತ ಯೋಧ ವೀರನಗೌಡ ಬಯ್ಯಾಪೂರು, ಶರಣಪ್ಪ ಗುಡಿಹಾಳ, ನಾಗನಗೌಡ ಬಯ್ಯಾಪೂರು, ನಿವೃತ್ತ ದೈಶಿ ಸುಕುಮಾರ ಎನ್ ಅಕ್ಕಿ, ಉದಯಕುಮಾರ ಕಮ್ಮಾರ, ಮಹಿಬೂಬ ಬಾರಿಗಿಡ, ಅಸೋಸಿಯೇಷನ್ ಪದಾಧಿಕಾರಿಗಳು, ಸದಸ್ಯರು ಹಾಗೂ ಕ್ರೀಡಾಪಟುಗಳು ಇದ್ದರು.

# ಸ್ಟಡಿ ಪ್ಲಾಂಟ್ ಎಕ್ಸಿಬಿಷನ್‌ಗೆ ಚಾಲನೆ ಒಂದು ಕೋಟಿ ವಿದ್ಯಾರ್ಥಿಗಳಿಗೆ ಉಚಿತ ಪುಸ್ತಕ, ಪೆನ್ ವಿತರಣೆ ಗುರಿ: ಹಿರೇಮಠ

• **ಮಲ್ಲಮ್ಮ ನುಡಿ ವಾರ್ತೆ ಕುಕನೂರ**



ಇಪಿಎಫ್ ಆರ್ಗನೈಸೇಷನ್ ವತಿಯಿಂದ ತಾಲ್ಲೂಕು ಪಂಚಾಯಿತಿ ಆವರಣದಲ್ಲಿ ಆಯೋಜಿಸಿದ್ದ ಸ್ಟಡಿ ಪ್ಲಾಂಟ್ ಎಕ್ಸಿಬಿಷನ್‌ಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ರಾಜ್ಯಾಧ್ಯಕ್ಷ ಬಂಗ್ಲೆ ಮಲ್ಲಿಕಾರ್ಜುನ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಈರಪ್ಪ ಕುಡಗುಂಟಿ ಹಾಗೂ ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಮತ್ತು ಸಮಾಜಸೇವಕ ಕಳಕಪ್ಪ ಕಂಬ್ಳಿ ಶನಿವಾರ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಇಪಿಎಫ್ ಆರ್ಗನೈಸೇಷನ್ ಸಂಸ್ಥಾಪಕ ಎಚ್.ಎಸ್. ಹಿರೇಮಠ್, ರಾಜ್ಯದ ಒಂದು ಕೋಟಿ ವಿದ್ಯಾರ್ಥಿಗಳಿಗೆ ಉಚಿತ ನೋಟ್‌ಬುಕ್, ಪೆನ್ ಹಾಗೂ ಮ್ಯಾಪ್ ವಿತರಿಸುವ ಗುರಿಯನ್ನು ಸಂಸ್ಥೆ ಹೊಂದಿದೆ ಎಂದು ತಿಳಿಸಿದರು. ವಿದ್ಯಾರ್ಥಿಗಳಲ್ಲಿ ಅಧ್ಯಯನದ ಆಸಕ್ತಿ ಹೆಚ್ಚಿಸಲು ಹಾಗೂ ಉತ್ತಮ ಶೈಕ್ಷಣಿಕ ವಾತಾವರಣ ನಿರ್ಮಿಸುವ ಉದ್ದೇಶದಿಂದ 'ಇಪಿಎಫ್ ಸ್ಟಡಿ ಕಂಫರ್ಟ್ ಕಿಟ್' ಪರಿಚಯಿಸಲಾಗಿದೆ. ಈ ಕಿಟ್ ವಿದ್ಯಾರ್ಥಿಗಳಿಗೆ ಐದರಿಂದ ಆರು ಗಂಟೆಗಳ ಕಾಲ ನಿರಂತರ ಅಧ್ಯಯನಕ್ಕೆ ಪೂರಕ ವಾತಾವರಣ ಕಲ್ಪಿಸುವುದರ ಜೊತೆಗೆ ಮೊಬೈಲ್ ಹಾಗೂ ದೂರದರ್ಶನದ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು ನೆರವಾಗಲಿದೆ ಎಂದು ಹೇಳಿದರು.

ಇದುವರೆಗೆ 25 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ಕಿಟ್‌ನ ಪ್ರಯೋಜನ ಪಡೆದಿದ್ದಾರೆ. ಕಿಟ್ ಬಳಸಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಶೇ.95ಕ್ಕಿಂತ ಹೆಚ್ಚು ಅಂಕಗಳಿಸುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡುವ ಯೋಜನೆಯೂ ಇದೆ ಎಂದು ತಿಳಿಸಿದರು. ಪರಿಸರ ಸಂರಕ್ಷಣೆ ಹಾಗೂ ಸಸ್ಯಗಳ ಮಹತ್ವದ ಕುರಿತು ಜನರಲ್ಲಿ ಜಾಗೃತಿ ಮೂಡಿಸಲು ಇಂತಹ ಪ್ರದರ್ಶನಗಳು ಸಹಕಾರಿಯಾಗುತ್ತವೆ. ವಿದ್ಯಾರ್ಥಿಗಳು ಮತ್ತು ಯುವಜನರು ಸಸ್ಯ ಸಂಪತ್ತಿನ ಬಗ್ಗೆ ಹೆಚ್ಚಿನ ಅರಿವು ಬೆಳೆಸಿಕೊಳ್ಳಬೇಕು ಎಂದು ಹೇಳಿದರು. ಪ್ರದರ್ಶನದಲ್ಲಿ ವಿವಿಧ ಜಾತಿಯ ಸಸ್ಯಗಳು, ಔಷಧೀಯ ಗಿಡಗಳು ಹಾಗೂ ಅಲಂಕಾರಿಕ ಸಸ್ಯಗಳನ್ನು ಪ್ರದರ್ಶಿಸಲಾಗಿತ್ತು. ಸಾರ್ವಜನಿಕರು ಆಸಕ್ತಿಯಿಂದ ವೀಕ್ಷಿಸಿದರು.

ಈ ಸಂದರ್ಭದಲ್ಲಿ ಅರುಣ್ ನಾಗರೆಡ್ಡಿ ಸೇರಿದಂತೆ ಇಪಿಎಫ್ ಆರ್ಗನೈಸೇಷನ್‌ನ ಪದಾಧಿಕಾರಿಗಳು, ಸದಸ್ಯರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ವಾಲ್ಮೀಕಿ ಭವನ ಕಳಪೆ ಕ್ರಮಕ್ಕೆ ಗ್ರಾಮಸ್ಥರ ಒತ್ತಾಯ



**ಸುರೇಶ ಕೆ. ವಿ**

• **ಮಲ್ಲಮ್ಮ ನುಡಿ ವಾರ್ತೆಮುದಗಲ್**

ಪಟ್ಟಣ ಸಮೀಪದ ಹೂನೂರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ವಂದಾಲಿ ಗ್ರಾಮದಲ್ಲಿ ವಾಲ್ಮೀಕಿ ಭವನದ ಕಾಮಗಾರಿ ಸಂಪೂರ್ಣ ಕಳಪೆಯಾಗಿದ್ದು ಗುತ್ತಿಗೆದಾರನ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಗ್ರಾಮಸ್ಥರ ಒತ್ತಾಯಿಸಿದ್ದಾರೆ

ಕೃಷ್ಣಭಾಗ್ಯ ಜಲನಿಗಮ ನಿಯಮಿತ 2019–20 ನೇ ಸಾಲಿನ ಗಿರಿಜನ (ಟಿಎಸ್ಪಿ) ಯೋಜನೆಯಡಿ ಸುಮಾರು 25 ಲಕ್ಷ ರೂಗಳ ಮೊತ್ತದಲ್ಲಿ ವಂದಾಲಿ ಗ್ರಾಮದಲ್ಲಿ ವಾಲ್ಮೀಕಿ ಭವನ ನಿರ್ಮಾಣ ಮಾಡಲಾಗಿದೆ ಆದರೆ ಇಲಾಖೆ ಅಧಿಕಾರಿಗಳ ಹಾಗೂ ಗುತ್ತಿಗೆದಾರನ ಬೇಜವಾಬ್ದಾರಿತನದಿಂದ ಕಾಮಗಾರಿ ಸಂಪೂರ್ಣ ಕಳಪೆಯಾಗಿದೆ ಎಂದು ಸಮುದಾಯದ ಮುಖಂಡರು ದೂರಿದರು.

ವಾಲ್ಮೀಕಿ ಭವನದ ಕಳಪೆ ಕಾಮಗಾರಿ ಬಗ್ಗೆ ಲಿಂಗಸುಗೂರು ತಾಲೂಕ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯು ಅಧಿಕಾರಿಗಳಿಗೆ ವಾಲ್ಮೀಕಿ ನಾಯಕ ಸಮುದಾಯದವರು ಮನವಿ ಪತ್ರ ಸಲ್ಲಿಸಿ ಸುಮಾರು ದಿನಗಳು ತಿಂಗಳಗಳು ಕಳೆದರು ಕೂಡ ಸಂಬಂಧಪಟ್ಟ ಗುತ್ತಿಗೆದಾರನ ಹಾಗೂ ಅಧಿಕಾರಿಯ ವಿರುದ್ಧ ಕ್ರಮ ಕೈಗೊಂಡಿಲ್ಲವೆಂದು ಆರೋಪಿಸಿದರು

ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಭವನ ನಿರ್ಮಾಣ ಮಾಡಿದರು ಯಾವುದೇ ಪ್ರಯೋಜನಕ್ಕೆ ಬಾರದಂತಾಗಿದೆ ಇದರ ಬಗ್ಗೆ ಸಂಬಂಧಪಟ್ಟವರಿಗೆ ಕೂಡ ಮಾಹಿತಿ ನೀಡಿದರು ಕ್ಯಾರೆ ಮಾಡಿಲ್ಲ ಚುನಾವಣೆ ಬಂದಾಗ ಮಾತ್ರ ವಾಲ್ಮೀಕಿ ನಾಯಕ ಸಮುದಾಯದ ಮತಗಳು ನೆನಪಾಗುತ್ತವೆ ಎಂದು ಗ್ರಾಮಸ್ಥರು ಆರೋಪಿಸಿದರು

ವಾಲ್ಮೀಕಿ ಭವನದ ಸಮಸ್ಯೆ ಕುರಿತು ಚುನಾಯಿತ ಜನಪ್ರತಿನಿಧಿಗಳಿಗೆ ಹಾಗೂ ಅಧಿಕಾರಿಗಳಿಗೆ ಮಾಹಿತಿ ನೀಡಿದರು ಯಾವುದೇ ಪ್ರಯೋಜನವಾಗಿಲ್ಲ

**– ಯಮನೂರು ಯಲಬುರ್ತಿ ವಂದಾಲಿ ಗ್ರಾಮಸ್ಥ "**

*** ಲಕ್ಷಾಂತರ ರೂಗಳು ಖರ್ಚಾದರೂ ಉಪಯೋಗಕ್ಕೆ ಬಾರದ ಭವನ**

*** ಗ್ರಾಮಸ್ಥರಿಗೆ ಮನವಿಗೆ ಸ್ಪಂದಿಸದ ಇಲಾಖೆ ಅಧಿಕಾರಿಗಳು**

*** ತಾಲೂಕ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗೆ ಮನವಿ**

*** ಸೂಕ್ತ ಕ್ರಮಕ್ಕೆ ಸಮುದಾಯದ ಮುಖಂಡರ ಒತ್ತಾಯ**

*** ವಾಲ್ಮೀಕಿ ಭವನ ಕಾಮಗಾರಿ ಅಪೂರ್ಣ – ಜನರಿಗೆ ತೊಂದರೆ**

# ರುದ್ರಪ್ಪ ಲಮಾಣಿಗೆ ಸಚಿವ ಸಚಿವ ಸ್ಥಾನ ನೀಡಬೇಕೆಂದು ಸುರೇಶ ಬಳೂಟಗಿ ಆಗ್ರಹ

• **ಮಲ್ಲಮ್ಮ ನುಡಿ ವಾರ್ತೆ ಕುಕನೂರ**



ಸಾಮಾಜಿಕ ನ್ಯಾಯದ ಅಡಿಯಲ್ಲಿ ನಮ್ಮ ಬಂಜಾರ ಸಮುದಾಯದ ಶಾಸಕರಾದ ರುದ್ರಪ್ಪ ಲಮಾಣಿಯವರನ್ನು ಉಪ ಮುಖ್ಯಮಂತ್ರಿ ಇಲ್ಲವೇ ಸಮಾಜ ಕಲ್ಯಾಣ ಸಚಿವ ಸ್ಥಾನ ನೀಡಬೇಕೆಂದು ಗೋರ ಸೇನಾ ರಾಜ್ಯ ಪ್ರಧಾನ ಕಾರ್ಯದರ್ಶಿ ಸುರೇಶ ಬಳೂಟಗಿ ಕಾಂಗ್ರೆಸ್ ಪಕ್ಷದ ವರಿಷ್ಠರನ್ನು ಒತ್ತಾಯಿಸಿದ್ದಾರೆ.

ಬಿಜೆಪಿ ಪಕ್ಷ ಪ್ರತಿ ಚುನಾವಣೆಯಲ್ಲಿ ನಮ್ಮ ಬಂಜಾರ ಸಮಾಜದ 10 ರಿಂದ 12 ಅಭ್ಯರ್ಥಿಗಳಿಗೆ ಟಿಕೆಟ್ ನೀಡಿ ಒಬ್ಬರು ಇಲ್ಲವೇ ಇಬ್ಬರಿಗೆ ಸಚಿವ ಸ್ಥಾನ ನೀಡುವ ಮೂಲಕ ನಮ್ಮನ್ನು ಗೌರವದಿಂದ ನಡೆಸಿಕೊಳ್ಳುತ್ತಿದೆ. ಆದರೆ ಈ ಭ್ರಷ್ಟ ಕಾಂಗ್ರೆಸ್ ಪಕ್ಷ ನಮ್ಮ ಸಮಾಜವನ್ನು ಕೇವಲ ವೋಟ್ ಬ್ಯಾಂಕ್ ಆಗಿ ಮಾತ್ರ ಬಳಸಿಕೊಳ್ಳುತ್ತಿದ್ದು, ಚುನಾವಣೆಯಲ್ಲಿ ಕೇವಲ ಮೂರ್ನಾಲ್ಕು ಟಿಕೆಟ್ ನೀಡಿ ಅಲ್ಲೂ ಸಹ ಮೋಸ ಮಾಡುತ್ತಿದೆ. ಸರ್ಕಾರ ರಚನೆಯ ಸಂದರ್ಭದಲ್ಲಿ ಒಬ್ಬರಿಗಾದರೂ ಸಚಿವ ಸ್ಥಾನ ನೀಡುವ ಸೌಜನ್ಯ ತೋರಿಸಿಲ್ಲ, ಸಿದ್ದರಾಮಯ್ಯ ಸರ್ಕಾರ ಇದ್ದಾಗ ಮೂಗಿಗೆ ತುಪ್ಪ ಸವರುವ ಹಾಗೆ ರುದ್ರಪ್ಪ ಲಮಾಣಿಯವರನ್ನು ಉಪ ಸಭಾಪತಿ ಮಾಡಿ ನಮ್ಮ ಸಮಾಜವನ್ನು ಮರಳು ಮಾಡಿ ಅವರು ಮಾತ್ರ ಅಧಿಕಾರ ಅನುಭವಿಸಿದರು.

ಈಗಲಾದರೂ ನೂತನ ಮುಖ್ಯಮಂತ್ರಿಗಳಾದ ಡಿ. ಕೆ . ಶಿವಕುಮಾರ ಅವರು ನಮ್ಮ ಸಮ ಸಮಾಜವನ್ನು ಗಣನೆಗೆ ತೆಗೆದು–ಕೊಂಡು ಇರುವ ಏಕೈಕ ಶಾಸಕರಾದ ರುದ್ರಪ್ಪ ಲಮಾಣಿಯವರನ್ನು ಉಪ ಮುಖ್ಯಮಂತ್ರಿ ಇಲ್ಲವೇ ಸಮಾಜ ಕಲ್ಯಾಣ ಸಚಿವ ಸ್ಥಾನದಂತಹ ಉನ್ನತ ಸ್ಥಾನ ನೀಡಬೇಕೆಂದು ಈ ಮೂಲಕ ಆಗ್ರಹಿಸುತ್ತೇವೆ.

2023 ರ ಚುನಾವಣೆಯಲ್ಲಿ ನಮ್ಮನ್ನು ಯಾಮಾರಿಸಿ ಭರ್ಜರಿ ಮತ ನಮ್ಮಿಂದ ಪಡೆದು ಒಳ ಮೀಸಲಾತಿಯಲ್ಲಿ ದ್ರೋಹ ಮಾಡಿದ್ದೀರಿ, ಈಗಲಾದರೂ ನಮ್ಮ ಬಂಜಾರ ಸಮುದಾಯದ ಮೇಲೆ ಗೌರವ ಇದ್ದರೆ ಒಳ್ಳೆ ಖಾತೆ ನೀಡಿದರೆ ಸರಿ ಇಲ್ಲದಿದ್ದರೆ ಮುಂಬರುವ ಎಲ್ಲಾ ಚುನಾವಣೆಗಳಲ್ಲಿ ನಿಮ್ಮ ಪಕ್ಷವನ್ನು ಮಣ್ಣು ಮುಕ್ಕಿಸಲು ನಾವು ತಯಾರು ಎಂದು ಈ ಮೂಲಕ ನಿಮಗೆ ಎಚ್ಚರಿಕೆ ನೀಡುತ್ತೇವೆ ಎಂದು ಹೇಳಿದರು.

# ಮುಟ್ಟಿನ ಸ್ವಚ್ಛತಾ ದಿನ



• **ಮಲ್ಲಮ್ಮ ನುಡಿ ವಾರ್ತೆಮುದಗಲ್**

ಮಹಿಳಾ ಆರೋಗ್ಯದ ಮಹತ್ವವನ್ನು ಸಮಾಜಕ್ಕೆ ತಿಳಿಸುವ ನಿಟ್ಟಿನಲ್ಲಿ, ಎಸ್ಬಿಐ ಗ್ರಾಮ ಸೇವಾ ಯೋಜನೆ ಅಡಿಯಲ್ಲಿ ವಿವಿಧ ಗ್ರಾಮಗಳಲ್ಲಿ ವಿಶ್ವ ಮುಟ್ಟಿನ ಸ್ವಚ್ಛತಾ ದಿನವನ್ನು ಯಶಸ್ವಿಯಾಗಿ ಆಚರಿಸಲಾಯಿತು.

ಸಂಕಲ್ಪ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯು ಎಸ್‌ಬಿಐ ಪೌಂಡೇಶನ ಅವರ ಸಹಯೋಗದೊಂದಿಗೆ ಎಸ್‌ಬಿಐ ಗ್ರಾಮ ಸೇವಾ ಯೋಜನೆಯಡಿಯಲ್ಲಿ ಅಡವಿಭಾವಿ ತಾಂಡಾ ಗ್ರಾಮ ಪಂಚಾಯತಿ ವ್ಯಾಪ್ತಿಗೆ ಒಳಪಡುವ ತೀರ್ಥಬಾವಿ, ಅಡವಿಭಾವಿ ತಾಂಡಾ, ದಿಗನಾಯಕನಬಾವಿ, ಬೆನಕನಾಳ ಹಾಗೂ ಬೆಲದಮರಡಿ ಎಂಬ ಐದು ಗ್ರಾಮಗಳನ್ನು ದತ್ತು ಪಡೆದು ಸಮಗ್ರ ಗ್ರಾಮೀಣ ಅಭಿವೃದ್ಧಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುತ್ತಿದೆ.

ವಿಶ್ವ ಮುಟ್ಟಿನ ಸ್ವಚ್ಛತಾ ದಿನದ ಅಂಗವಾಗಿ ಮಹಿಳೆಯರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ವಿಶೇಷ ಕಾರ್ಯಕ್ರಮವನ್ನು ವೇದಿಕೆ ಇರುವ ಗಣ್ಯರು ಉದ್ಘಾಟನೆ ಮಾಡಿದರು

ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅನಿಲ್ ಚವಾನ. ಯೋಜನಾ ವ್ಯವಸ್ಥಾಪಕರು, ಗ್ರಾಮೀಣ ಹಾಗೂ ಬುಡಕಟ್ಟು ಪ್ರದೇಶಗಳ ಕೃಷಿ ಮಹಿಳೆಯರಲ್ಲಿ ಮುಟ್ಟಿನ ಸ್ವಚ್ಛತೆ ಕುರಿತು ಇನ್ನಷ್ಟು ಅರಿವು ಅಗತ್ಯವಿದೆ ಎಂದು ಹೇಳಿದರು. ಜೊತೆಗೆ, ಮನೆಯಲ್ಲಿಯೇ ಸುರಕ್ಷಿತ ಹಾಗೂ ಸುಸಂಸ್ಕೃತ ಸ್ವಚ್ಛತಾ ಅಭ್ಯಾಸಗಳನ್ನು ಬೆಳೆಸುವಲ್ಲಿ ತಾಯಿಯ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಗಿದ್ದು, ಸರಿಯಾದ ಮಾಹಿತಿ ಮತ್ತು ಮುಕ್ತ ಸಂವಾದದ ಅಗತ್ಯತೆಯ ಬಗೆ ಅವರು ಒತ್ತಿ ಹೇಳಿದರು.

ಈ ಸಂದರ್ಭದಲ್ಲಿ ಹಿರಿಯ ನರ್ಸ್ ಮಂಜುಳಾ ಎಚ್ ಅವರು ಮಹಿಳೆಯರಿಗೆ ಮುಟ್ಟಿನ ಸ್ವಚ್ಛತೆ, ಆರೋಗ್ಯದ ಕಾಳಜಿ ಹಾಗೂ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳ ಕುರಿತು ವಿವರವಾದ ಮಾಹಿತಿ ನೀಡಿ ಜಾಗೃತಿ ಮೂಡಿಸಿದರು. ಕಾರ್ಯಕ್ರಮದಲ್ಲಿ ಎಸ್‌ಬಿಐ ಗ್ರಾಮ ಸೇವಾ ಯೋಜನೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಕಳ್ಳತನವಾಗಿದ್ದ 2.62ಕೋಟಿ ರೂ ಮೌಲ್ಯದ ಸತ್ತು ಮಾಲೀಕರಿಗೆ ಹಸ್ತಾಂತರಿಸಿದ ಇಲಾಖೆ



**ಬಳ್ಳಾರಿ:** ಜಿಲ್ಲೆಯ ವಿವಿಧ ಪೊಲೀಸ್ ಠಾಣೆಗಳಲ್ಲಿ ಕಳೆದ ಆರು ತಿಂಗಳಲ್ಲಿ ದಾಖಲಾದ ಕಳ್ ಕರಣಗಳಲ್ಲಿ ಪೊಲೀಸರು ವಶಪಡಿಸಿಕೊಂಡ ರೂ.2.62 ಕೋಟಿ ಮೌಲ್ಯದ ಸ್ವತ್ತನ್ನು ನಿನ್ನೆ ಎಸ್ಪಿ ಕಚೇರಿ ಆವರಣದಲ್ಲಿ ಐಜಿಪಿ ಡಾ.ಹರ್ಷ, ಎಸ್ಪಿ ಡಾ.ಸುಮನ್ ಡಿ.ಪನ್ನೇಕರ್ ಮತ್ತವರ ಸಿಬ್ಬಂದಿ ಮಾಲೀಕರಿಗೆ ವಿತರಿಸಿದರು.

ಕಳೆದ 2025ರ ಅ.1ರಿಂದ 2026ರ ಮೇ 27ರವರೆಗೆ 294 ಕಳ್ಳತನ ಪ್ರಕರಣ ದಾಖಲಾಗಿ, 5,80,73,923 ಮೌಲ್ಯದ ಸ್ವತ್ತು ಕಳುವಾಗಿತ್ತು ಪ್ರಕರಣಗಳನ್ನು ಭೇದಿಸಲು ಎರಡು ತಿಂಗಳಿಂದ ವಿಶೇಷ ಕಾಳಜಿ ವಹಿಸಿ ತನಿಖೆಗಾಗಿ ತಂಡಗಳನ್ನು ರಚಿಸಿ ವ್ಯಾಪಕವಾಗಿ ಕಾರ್ಯಾಚರಣೆ ನಡೆಸಿ 66 ಪ್ರಕರಣಗಳನ್ನು ಪತ್ತೆ ಹಚ್ಚಿ, ನಗದು ಹಣ, ಚಿನ್ನ, ಬೆಳ್ಳಿ, ಬೈಕ್ ರ್ಮದಲಾದವು ಸೇರಿ 2.62,45,351 ರೂ ಮಾಲು ವಶಪಡಿಸಿಕೊಂಡು ಶೇ.45 ರಷ್ಟು ಪ್ರಕರಣಗಳನ್ನು ಬೇಧಿಸಲಾಗಿದೆ.

ಇದರಲ್ಲಿ ಚೀಟಿಂಗ್ ಪ್ರಕರಣಕ್ಕೆ ಸಂಬಂಧಿಸಿದಂತೆ ಒಂದೇ ಪ್ರಕರಣದಲ್ಲಿ 1.45ಕೋಟಿ ಸ್ವತ್ತು ವಶಕ್ಕೆ ಪಡೆದಿರುವುದು ವಿಶೇಷವಾಗಿದೆ. ಹಗಲು ಕಳ್ಳತನಕ್ಕೆ ಸಂಬಂಧಿಸಿದಂತೆ 13 ಪ್ರಕರಣ ದಾಖಲಾಗಿದ್ದು, 4 ಪ್ರಕರಣ ಪತ್ತೆಯಾಗಿದೆ. 28,54,600 ರೂ ಸತ್ತು ಕಳುವಾಗಿದೆ. ಇದರಲ್ಲಿ 4,68,301 ರೂ ವಶಪಡಿಸಿಕೊಂಡಿದೆ. ರಾತ್ರಿ ಕಳ್ಳತನಕ್ಕೆ ಸಂಬಂಧಿಸಿದಂತೆ 57 ಪ್ರಕರಣದಲ್ಲಿ 1,31,17,400 ಕಳುವಾಗಿದ್ದು, ಇದರಲ್ಲಿ ಪತ್ತೆಯಾಗಿದ್ದು 13,43,600. ಮನೆ ಕಳ್ಳತನ 16 ಪ್ರಕರಣ ದಾಖಲಾಗಿದ್ದು, 3 ಪ್ರಕರಣದಲ್ಲಿ ಪತ್ತೆ ಹಚ್ಚಲಾಗಿದೆ. 13.97,500 ರೂ ವಶಪಡಿಸಿಕೊಂಡಿದೆ. ಸಾಮಾನ್ಯ ಕಳ್ಳತನ 189 ದಾಖಲಾಗಿದ್ದು, 3,31,39,523 ಕಳುವಾಗಿದೆ. 51 ಪ್ರಕರಣ ಪತ್ತೆ ಹಚ್ಚಿ 2,30,35,950 ವಶಪಡಿಸಿ ಕೊಂಡಿದೆ. ಎಎಸ್ಪಿ ನವೀನ್ ಕುಮಾರ್, ಡಿವೈಎಸ್ಪಿಗಳು, ಸಿಪಿಐ ಇದ್ದರು.

## ಮುಂಬರುವ ತಾಲೂಕು ಹಾಗೂ ಜಿ.ಪಂ.ಚುನಾವಣೆಗೆ ಸನ್ನದ್ಧರಾಗಿ



**ಬಳ್ಳಾರಿ:** ಮುಂಬರುವ ತಾಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಚುನಾವಣೆಗೆ ಕಾರ್ಯಕರ್ತರು ಸನ್ನದ್ಧರಾಗಬೇಕು, ಪಕ್ಷವನ್ನು ಮತ್ತಷ್ಟು ತಳಮಟ್ಟದಿಂದ ಸಂಘಟಿಸಿ ಎಲ್ಲರೂ ಸೇರಿ ಜೆಡಿಎಸ್ ಪಕ್ಷವನ್ನು ಅಧಿಕಾರಕ್ಕೆ ತರೋಣ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ ಅವರು ಕಾರ್ಯಕರ್ತರಿಗೆ ಕರೆ ನೀಡಿದರು. ನಗರದ ಜೆಡಿಎಸ್ ಜಿಲ್ಲಾ ಕಚೇರಿಯಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಬಳ್ಳಾರಿ ಗ್ರಾಮಾಂತರ ಹಾಗೂ ನಗರ ಅಧ್ಯಕ್ಷರ ಆಯ್ಕೆ ಹಾಗೂ ಜಿಲ್ಲಾ ವಿದ್ಯಾರ್ಥಿ ಘಟಕದ ಅಧ್ಯಕ್ಷರ ಆಯ್ಕೆ, ನೇಮಕಾತಿ ಆದೇಶ ಪತ್ರ ವಿತರಣೆ ಸಮಾರಂಭದಲ್ಲಿ ಮಾತನಾಡಿದರು. ವಿಸಿಟಿಂಗ್ ಕಾರ್ಡ್ ಅಧ್ಯಕ್ಷರು ಬೇಡ, ಪಕ್ಷದ ತತ್ವ ಸಿದ್ಧಾಂತಗಳನ್ನು ಪಾಲಿಸುವ, ಪಕ್ಷದ ಬಲವರ್ಧನೆಗೆ ಪ್ರಾಮಾಣಿಕವಾಗಿ ಶ್ರಮಿಸಲು ಮುಂದಾಗಬೇಕು, ಬರುವ ದಿನಗಳಲ್ಲಿ ಜೆಡಿಎಸ್ ಮತ್ತೆ ಅಧಿಕಾರಕ್ಕೆ ಬರುವುದು ಶತ ಸಿದ್ಧ, ಮತ್ತೆ ನಮ್ಮ ಕುಮಾರಣ್ಣನವರೇ ರಾಜ್ಯದ ಮುಖ್ಯಮಂತ್ರಿಯಾಗಲಿದ್ದಾರೆ ಇದರಲ್ಲಿ ಅನುಮಾನವೇ ಬೇಡ, ಕಾರ್ಯಕರ್ತರು, ಪದಾಧಿಕಾರಿಗಳು ಪಕ್ಷದ ಸಂಘಟನೆಗೆ ಸನ್ನದ್ಧರಾಗಬೇಕು, ನಮ್ಮ ಪಕ್ಷ ಅಧಿಕಾರಕ್ಕೆ ಬರುವರೆಗೂ ಎಲ್ಲರೂ ಶ್ರಮಿಸೋಣ ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಬಳ್ಳಾರಿ ನಗರ ಜೆಡಿಎಸ್ ಅಧ್ಯಕ್ಷರಾಗಿ ಹೊನ್ನೂರು ಸ್ವಾಮಿ, ಬಳ್ಳಾರಿ ಗ್ರಾಮಾಂತರ ಕ್ಷೇತ್ರದ ಅಧ್ಯಕ್ಷರಾಗಿ ರಾಜಶೇಖರ್ ಗೌಡ, ಬಳ್ಳಾರಿ ಜಿಲ್ಲಾ ವಿದ್ಯಾರ್ಥಿ ಘಟಕದ ಜಿಲ್ಲಾಧ್ಯಕ್ಷರಾಗಿ ಆರ್.ರಾಕೇಶ್ ಅವರಿನ್ನೂ ನೇಮಕ ಮಾಡಿದ್ದು, ಎಲ್ಲರಿಗೂ ಜಿಲ್ಲಾಧ್ಯಕ್ಷರಾದ ಮೀನಳ್ಳಿ ತಾಯಣ್ಣ ಅವರು ನೇಮಕಾತಿ ಆದೇಶ ಪತ್ರವನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಯಲ್ಲನಗೌಡ, ಉಪಾಧ್ಯಕ್ಷ ವಿಜಯಕುಮಾರ್ ಮದಿರೆ, ಚಾಗನೂರು ನಾಗರಾಜ್, ಬಸಪ್ಪ, ಪರಿಶಿಷ್ಟ ಜಾತಿ ವಿಭಾಗದ ಅಧ್ಯಕ್ಷ ವಸಂತ ಕುಮಾರ್, ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ಪುಷ್ಪಾ, ಅಶೋಕ ಸಂಗನಕಲ, ಲಕ್ಷ್ಮೀ ಸೇರಿದಂತೆ ವಿವಿಧ ಕಾರ್ಯಕರ್ತರು ಭಾಗವಹಿಸಿದ್ದರು.



ಭಾಲ್ಕಿಯ ಆಂಜನೇಯ ದೇಗುಲದಲ್ಲಿ ಶಾಸಕ ಈಶ್ವರ ಖಂಡ್ರೆ ಅವರನ್ನು ಉಪ ಮುಖ್ಯಮಂತ್ರಿ ಹುದ್ದೆ ಸಿಗಲಿ ಎಂದು ಹಾರೈಸಿ ಕಾಂಗ್ರೆಸ್ ಪಕ್ಷದ ಮುಖಂಡರು, ಅಭಿಮಾನಿಗಳು ವಿಶೇಷ ಪೂಜೆ ಸಲ್ಲಿಸಿದರು.

# ಫೈರಿಂಗ್‌ನಲ್ಲಿ ವೃದ್ಧೆಗೆ ಗುಂಡೇಟು, ಓರ್ವ ಖದೀಮ ವಶ





• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**

ಜಿಲ್ಲೆಯ ಬಾದಾಮಿ ತಾಲೂಕಿನ ಕರಡಿಗುಡ್ಡ ಎಸ್.ಎನ್. ಗ್ರಾಮದಲ್ಲಿ ಕಳ್ಳತನಕ್ಕೆ ಬಂದಿದ್ದ ಖದೀಮರ ತಂಡದ ಫೈರಿಂಗ್‌ನಲ್ಲಿ ವೃದ್ಧೆಯೊಬ್ಬರು ಗಾಯಗೊಂಡ ಘಟನೆ ನಡೆದಿದೆ.

ಮೂರು ಮಂದಿ ಖದೀಮರು ಮೊದಲಿಗೆ ಖಾಲಿ ಮನೆಯೊಂದಕ್ಕೆ ನುಗ್ಗಿ ಕಳ್ಳತನಕ್ಕೆ ಯತ್ನಿಸಿದ್ದರು. ಆದರೆ ಅಲ್ಲಿ ಏನೂ ಸಿಗದ ಹಿನ್ನೆಲೆಯಲ್ಲಿ ಹೊರಬಂದು ಬಸವ್ವ ಹಾಗೂ ಹೊಳೆಪ್ಪ ದಂಪತಿ ಮಲಗಿದ್ದ ಸ್ಥಳಕ್ಕೆ ತೆರಳಿದ್ದಾರೆ. ಈ ವೇಳೆ ಮಲಗಿದ್ದ ಹೊಳೆಪ್ಪ ಅವರನ್ನು ಮುಟ್ಟಿ ಪರಿಶೀಲಿಸಿದಾಗ ಅವರು ಎಚ್ಚರಗೊಂಡಿದ್ದಾರೆ.

ಅದಾದ ಬಳಿಕ ಕಳ್ಳರು ತಮ್ಮ ಬಳಿಯಿದ್ದ ಕಂಟ್ರಿ ಪಿಸ್ತೂಲ್ ಹಾಗೂ ಮಾರಕಾಸ್ತ್ರಗಳನ್ನು ತೋರಿಸಿ ಬೆದರಿಕೆ ಹಾಕಿದ್ದು, ಫೈರಿಂಗ್ ಮಾಡಲು ಯತ್ನಿಸಿದ್ದಾರೆ. ಮೊದಲ ಪ್ರಯತ್ನ ವಿಫಲವಾದರೂ, ಎರಡನೇ ಬಾರಿ ಗುಂಡು ಹಾರಿಸಿದಾಗ ಹೊಳೆಪ್ಪ ಅವರ ಹಿಂದೆ ನಿಂತಿದ್ದ ಬಸವ್ವ ಅವರ ಕಾಲಿಗೆ ಗುಂಡು ತಗುಲಿದೆ.

ಗುಂಡಿನ ಸದ್ದು ಕೇಳಿ ಸ್ಥಳಕ್ಕೆ ಧಾವಿಸಿದ ಗ್ರಾಮಸ್ಥರು ಓರ್ವ ಕಳ್ಳನನ್ನು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ. ಉಳಿದ ಇಬ್ಬರು ಆರೋಪಿಗಳು ಪರಾರಿಯಾಗಿದ್ದಾರೆ. ಹಿಡಿದ ಖದೀಮನನ್ನು ಗ್ರಾಮಸ್ಥರು ಹಗ್ಗದಿಂದ ಕಟ್ಟಿ ಥಳಿಸಿರುವುದಾಗಿ ತಿಳಿದುಬಂದಿದೆ. ಗಾಯಗೊಂಡ ಬಸವ್ವ ಅವರಿಗೆ ಬಾದಾಮಿ ತಾಲ್ಲೂಕು ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಿದ ಬಳಿಕ ಹೆಚ್ಚಿನ ಚಿಕಿತ್ಸೆಗೆ ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗೆ ರವಾನಿಸಲಾಗಿದೆ. ಬಂಧಿತ ಖದೀಮ ಪ್ರಶಾಂತ್ ನಾವಿ ಕೂಡ ಥಳಿತದಿಂದ ಗಾಯಗೊಂಡಿದ್ದು, ಬಾದಾಮಿ ತಾಲ್ಲೂಕು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ.

ಈ ಘಟನೆ ಬಾದಾಮಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದ್ದು, ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಹೆಚ್ಚಿನ ತನಿಖೆ ನಡೆಸುತ್ತಿದ್ದಾರೆ.

# ವಿಜೃಂಭಣೆಯಿಂದ ನಡೆದ ಜಾತ್ರಾ ಮಹೋತ್ಸವ ಹಾಗೂ ರಥೋತ್ಸವ

• **ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ**



ಜಿಲ್ಲೆಯ ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಬಿಕ್ಕಲಹಳ್ಳಿಯ ಶ್ರೀ ಯೋಗಮುನೀಶ್ವರ ದೇವಾಲಯದಲ್ಲಿ 22ನೇ ವರ್ಷದ ಜಾತ್ರಾ ಮಹೋತ್ಸವ ಹಾಗೂ ಶ್ರೀ ಯೋಗಮುನೀಶ್ವರ ಸ್ವಾಮಿಯ ರಥೋತ್ಸವವು ಭಕ್ತಿ, ಶ್ರದ್ಧೆ ಮತ್ತು ಸಂಭ್ರಮದಿಂದ ನೆರವೇರಿತು.

ದಿವಂಗತ ಶ್ರೀ ಸಾಕಮ್ಮ ಅವರ ಪುತ್ರರು ಹಾಗೂ ಆಶ್ರಮದ ಧರ್ಮದರ್ಶಿ ಡಾ. ಬಿ.ಕೆ. ಮಂಜುನಾಥ್ ಅವರ ಮಾರ್ಗದರ್ಶನ ಮತ್ತು ಉಪಸ್ಥಿತಿಯಲ್ಲಿ ನಡೆದ ಮಹೋತ್ಸವದಲ್ಲಿ ಸುತ್ತಮುತ್ತಲಿನ ಗ್ರಾಮಗಳು ಸೇರಿದಂತೆ ವಿವಿಧ ಪ್ರದೇಶಗಳಿಂದ ಆಗಮಿಸಿದ್ದ ನೂರಾರು ಭಕ್ತರು ಭಾಗವಹಿಸಿ ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ಕಾರ್ಯಕ್ರಮದ ಅಂಗವಾಗಿ ಗಂಗೆ ಪೂಜೆ, ಸ್ವಸ್ತಿವಾಚನ, ಗಣಪತಿ ಪೂಜೆ, ನವಗ್ರಹಾರಾಧನೆ, ಕಲಶ ಪ್ರತಿಷ್ಠಾಪನೆ, ಮಹಾಮಂಗಳಾರತಿ ಹಾಗೂ ತೀರ್ಥ–ಪ್ರಸಾದ ವಿತರಣೆ ನಡೆಯಿತು. ದೇವತೆಗಳಿಗೆ ಪಂಚಾಮೃತಾಭಿಷೇಕ, ಕಲಾಕರ್ಷಣ ಹೋಮ, ಶಕ್ತಿ ಹೋಮ, ಪೂರ್ಣಾಹುತಿ, ಕಲಶಾಭಿಷೇಕ, ಕುಂಭಾಭಿಷೇಕ ಹಾಗೂ ಗೋಪೂಜೆ ನೆರವೇರಿದ ಬಳಿಕ ಶ್ರೀ ಯೋಗಮುನೀಶ್ವರ ಸ್ವಾಮಿಯ ರಥೋತ್ಸವ ವಿಜೃಂಭಣೆಯಿಂದ ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀ ಕ್ಷೇತ್ರದ ಪ್ರಧಾನ ದತ್ತಿ ಧರ್ಮದರ್ಶಿ ಡಾ. ಬಿ.ಕೆ. ಮಂಜುನಾಥ್, "ಪ್ರತಿ ವರ್ಷದಂತೆ ಈ ವರ್ಷವೂ ಜಾತ್ರಾ ಮಹೋತ್ಸವ ಮತ್ತು ರಥೋತ್ಸವವನ್ನು ಭಕ್ತಿಭಾವದಿಂದ ಆಚರಿಸಲಾಗುತ್ತಿದೆ. ವಿಶೇಷವೆಂದರೆ ದೇವರನ್ನು ಗ್ರಾಮಗಳಿಗೆ ಬರಮಾಡಿಕೊಳ್ಳುವ ಸಂದರ್ಭದಲ್ಲಿ ಮಳೆಯಾಗುವುದು ಸ್ವಾಮಿಯ ಮಹಿಮೆಯಾಗಿದೆ. ಈ ಪುಣ್ಯ ಕ್ಷೇತ್ರಕ್ಕೆ ಭಕ್ತಿಯಿಂದ ಬರುವವರ ಕಷ್ಟಗಳು ದೂರವಾಗಿ, ಅವರ ಇಷ್ಟಾರ್ಥಗಳು ನೆರವೇರುತ್ತಿವೆ. ಶ್ರೀ ಯೋಗಮುನೀಶ್ವರ ಸ್ವಾಮಿಯ ಕೃಪೆಯಿಂದ ಭಕ್ತರ ಬೇಡಿಕೆಗಳು ಈಡೇರುತ್ತಿದ್ದು, ದೇವಾಲಯಕ್ಕೆ ಭೇಟಿ ನೀಡುವ ಭಕ್ತರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ" ಎಂದು ತಿಳಿಸಿದರು.

ಇದೇ ವೇಳೆ ಧರ್ಮದರ್ಶಿ ಡಾ. ಬಿ.ಕೆ. ಮಂಜುನಾಥ್ ಹಾಗೂ ಗೀತಾ ಮಂಜುನಾಥ್ ದಂಪತಿ ಧಾರ್ಮಿಕ ಕಾರ್ಯಕ್ರಮಕ್ಕೆ ಸಹಕರಿಸಿದ ಸೇವಾಕರ್ತರನ್ನು ಸನ್ಮಾನಿಸಿ ಗೌರವಿಸಿದರು.

ಜಾತ್ರಾ ಮಹೋತ್ಸವ ಹಾಗೂ ರಥೋತ್ಸವದಲ್ಲಿ ಚಿಕ್ಕಬಳ್ಳಾಪುರ, ದೇವನಹಳ್ಳಿ, ಬೆಂಗಳೂರು ಸೇರಿದಂತೆ ವಿವಿಧ ಭಾಗಗಳಿಂದ ನೂರಾರು ಭಕ್ತರು ಭಾಗವಹಿಸಿದ್ದರು. ಕಾರ್ಯಕ್ರಮದ ಅಂಗವಾಗಿ ಭರತನಾಟ್ಯ ಸೇರಿದಂತೆ ವಿವಿಧ ಸಾಂಸ್ಕೃತಿಕ ಹಾಗೂ ಜಾನಪದ ಕಾರ್ಯಕ್ರಮಗಳು ಗಮನ ಸೆಳೆದವು.

# ಶೇ.100 ಫಲಿತಾಂಶ ಸಾಧಿಸಿದ 100ಕ್ಕೂ ಅಧಿಕ ಶಿಕ್ಷಕರಿಗೆ ಸನ್ಮಾನ

• **ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ**





ಇಲ್ಲಿನ ಆಲ್ ಇಂಡಿಯಾ ಐಡಿಯಲ್ ಟೀಚರ್ಸ್ ಅಸೋಸಿಯೇಷನ್ (ಐಟಾ) ಇಲ್ಲಿನ ಘಟಕದ ವತಿಯಿಂದ 2025–26ನೇ ಶೈಕ್ಷಣಿಕ ವರ್ಷದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಶೇ.100 ಫಲಿತಾಂಶ ದಾಖಲಿಸಿದ ವಿವಿಧ ವಿಷಯಗಳ 100ಕ್ಕೂ ಅಧಿಕ ಶಿಕ್ಷಕರನ್ನು ಲಿಟಲ್ ಫ್ಲವರ್ ಪಬ್ಲಿಕ್ ಸ್ಕೂಲ್‌ನಲ್ಲಿ ಸನ್ಮಾನಿಸಲಾಯಿತು.

ಶಿಕ್ಷಕರಾದ ಮೊಹಮ್ಮದ್ ಯೂಸುಫುದ್ದೀನ್ ಉದ್ಘಾಟಿಸಿ ಅವರು ಮಾತನಾಡಿದರು. ಖೈರುಲ್ ಮುಬೀನ್ ಅವರು ಯಶಸ್ವಿ ಶಿಕ್ಷಕರ ಸೇವೆಯನ್ನು ಶ್ಲಾಘಿಸಿ, ವಿದ್ಯಾರ್ಥಿಗಳ ಸಾಧನೆಯ ಹಿಂದೆ ಅವರ ಪರಿಶ್ರಮ ಮತ್ತು ಸಮರ್ಪಣೆಯೇ ಪ್ರಮುಖ ಕಾರಣವಾಗಿದೆ ಎಂದು ಹೇಳಿದರು. ಮೊಹಮ್ಮದ್ ಅಹ್ಮದ್ ಅವರು ಆಲ್ ಇಂಡಿಯಾ ಐಡಿಯಲ್ ಟೀಚರ್ಸ್ ಅಸೋಸಿಯೇಷನ್‌ನ ಪರಿಚಯವನ್ನು ನೀಡಿ ಸಂಘಟನೆಯ ಉದ್ದೇಶಗಳು ಹಾಗೂ ಶಿಕ್ಷಣ ಕ್ಷೇತ್ರದಲ್ಲಿನ ಅದರ ಪಾತ್ರದ ಕುರಿತು ವಿವರಿಸಿದರು. ಬೀದರ ಜಿಲ್ಲಾ ಅಧ್ಯಕ್ಷ ಮೊಹಮ್ಮದ್ ಖುರ್ಷೀದ್ ಅಹ್ಮದ್ ಮಾತನಾಡಿ ಶಿಕ್ಷಕರ ಜವಾಬ್ದಾರಿಗಳು, ಆಧುನಿಕ ಶಿಕ್ಷಣದ ಅಗತ್ಯತೆಗಳು ಹಾಗೂ ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಯ ಕುರಿತು ಉಪನ್ಯಾಸ ನೀಡಿದರು. ಶಿಕ್ಷಕರು ಕೇವಲ ಪಾಠ ಬೋಧನೆಗೆ ಸೀಮಿತವಾಗದೆ, ವಿದ್ಯಾರ್ಥಿಗಳ ನೈತಿಕ ಹಾಗೂ ಸಾಮಾಜಿಕ ಮೌಲ್ಯಗಳ ಬೆಳವಣಿಗೆಯಲ್ಲಿಯೂ ಪ್ರಮುಖ ಪಾತ್ರ ವಹಿಸುತ್ತಾರೆ ಎಂದರು.

ಮುಖ್ಯ ಅತಿಥಿಯಾಗಿ ಪ್ರೊ. ಅಬ್ದುಲ್ ಮಾಜಿದ್ ಮಿನ್ಯಾರ. ಅಧ್ಯಕ್ಷತೆ ಐಟಾ ಘಟಕದ ಅಧ್ಯಕ್ಷ ಹಾಗೂ ಸಿಆರ್‌ಪಿ (ಗ್ರಾಮೀಣ) ಇಮಾಮುದ್ದೀನ್ ಮಾತನಾಡಿ ಶಿಕ್ಷಕರ ಶ್ರಮ, ಬದ್ಧತೆ ಮತ್ತು ಶಿಕ್ಷಣ ಸೇವೆಯನ್ನು ಶ್ಲಾಘಿಸಿ, ಗುಣಮಟ್ಟದ ಶಿಕ್ಷಣಕ್ಕಾಗಿ ಶಿಕ್ಷಕರು ನಿರಂತರವಾಗಿ ಶ್ರಮಿಸಬೇಕಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಮೊಹಮ್ಮದಿ ಬೇಗಂ, ಮೊಹಮ್ಮದ್ ಮೊಹಿಯುದ್ದೀನ್, ವಸೀಮುದ್ದೀನ್, ಅಕ್ಬರ್ ಅಹ್ಮದ್ (ಲಿಟಲ್ ಫ್ಲವರ್ ಸ್ಕೂಲ್) ಹಾಗೂ ವಿವಿಧ ಪ್ರೌಢಶಾಲೆಗಳ ಶಿಕ್ಷಕರು, ಪಿಯು ಕಾಲೇಜುಗಳ ಉಪನ್ಯಾಸಕರು ಹಾಗೂ ಗಣ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ನುಸ್ರತ್ ಬೇಗಂ ನಿರೂಪಿಸಿದರು.

# ಕರ್ತವ್ಯನಿಷ್ಠೆಯ ಪಯಣಕ್ಕೆ ಗೌರವದ ವಿದಾಯ

• **ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ**



ತಾಲೂಕು ಮೋರಿಗೇರಿ ಗ್ರಾಮ ಪಂಚಾಯತಿಯಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾಗಿದ್ದ ಆರ್. ಶಾಂತನಗೌಡ್ರು ಅವರ ಗೌರವಾರ್ಥವಾಗಿ ಹಾಗೂ ವಯೋ ನಿವೃತ್ತಿ ಅಂಗವಾಗಿ ಇಂದು ಆತ್ಮೀಯ ಹಾಗೂ ಭಾವಪೂರ್ಣ ನಿವೃತ್ತಿ ಸಮಾರಂಭವನ್ನು ಆಯೋಜಿಸಲಾಯಿತು. ಗ್ರಾಮ ಪಂಚಾಯತಿ ಸದಸ್ಯರು, ಮಾಜಿ ಅಧ್ಯಕ್ಷರು, ಮಾಜಿ ಉಪಾಧ್ಯಕ್ಷರು, ಸಿಬ್ಬಂದಿ ವರ್ಗ, ವಿವಿಧ ಸಂಘ–ಸಂಸ್ಥೆಗಳ ಮುಖಂಡರು ಹಾಗೂ ಗ್ರಾಮಸ್ಥರು ಕಾರ್ಯಕ್ರಮದಲ್ಲಿ ಭಾಗವಹಿಸಿ ಶಾಂತನಗೌಡ್ರು ಅವರ ಸೇವೆಯನ್ನು ಸ್ಮರಿಸಿ ಗೌರವ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷರಾದ ದಿದ್ಗಿ ಜ್ಯೋತಿ ನಾಗರಾಜ್ ಅವರು, "ನಾನು ಗ್ರಾಮ ಪಂಚಾಯತಿ ಅಧ್ಯಕ್ಷನಾಗಿ ಕಾರ್ಯನಿರ್ವಹಿಸಿದ ಅವಧಿಯಲ್ಲಿ ಆರ್. ಶಾಂತನಗೌಡ್ರು ಅವರೊಂದಿಗೆ ಒಂದು ವರ್ಷ ಕೆಲಸ ಮಾಡುವ ಅವಕಾಶ ದೊರಕಿತ್ತು. ಅವರು ಅಧಿಕಾರಿಯಾಗಿದ್ದರೂ ಎಲ್ಲರೊಂದಿಗೆ ಅತ್ಯಂತ ಸರಳವಾಗಿ, ಸೌಹಾರ್ದಯುತವಾಗಿ ಹಾಗೂ ಸಮನ್ವಯತೆಯಿಂದ ಕಾರ್ಯನಿರ್ವಹಿಸುತ್ತಿದ್ದರು. ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತ ಸ್ಪಂದನೆ ನೀಡುವುದು, ಅಭಿವೃದ್ಧಿ ಕಾಮಗಾರಿಗಳನ್ನು ಪಾರದರ್ಶಕವಾಗಿ ಅನುಷ್ಠಾನಗೊಳಿಸುವುದು ಹಾಗೂ ಸಿಬ್ಬಂದಿಗಳೊಂದಿಗೆ ಉತ್ತಮ ಬಾಂಧವ್ಯ ಕಾಪಾಡಿಕೊಳ್ಳುವುದು ಅವರ ವಿಶೇಷ ಗುಣವಾಗಿತ್ತು" ಎಂದು ಶ್ಲಾಘಿಸಿದರು.

ತಮ್ಮ ಸೇವಾ ಅವಧಿಯುದ್ದಕ್ಕೂ ಆರ್. ಶಾಂತನಗೌಡ್ರು ಅವರು ಗ್ರಾಮೀಣ ಅಭಿವೃದ್ಧಿಗೆ ವಿಶೇಷ ಒತ್ತು ನೀಡಿ ಕುಡಿಯುವ ನೀರು, ಸ್ವಚ್ಛತೆ, ರಸ್ತೆ, ಬೀದಿ ದೀಪ, ವಸತಿ ಯೋಜನೆಗಳು ಸೇರಿದಂತೆ ವಿವಿಧ ಸರ್ಕಾರಿ ಯೋಜನೆಗಳನ್ನು ಜನರಿಗೆ ತಲುಪಿಸುವಲ್ಲಿ ಶ್ರಮಿಸಿದರು. ಜನಸಾಮಾನ್ಯರ ಅಹವಾಲುಗಳನ್ನು ಆಲಿಸಿ, ಸಮಸ್ಯೆಗಳ ಪರಿಹಾರಕ್ಕೆ ಸದಾ ಸಿದ್ಧರಾಗಿದ್ದ ಅವರು ಪ್ರಾಮಾಣಿಕ, ನಿಷ್ಪಕ್ಷಪಾತ ಹಾಗೂ ಜನಪರ ಅಧಿಕಾರಿಯಾಗಿ ಗುರುತಿಸಿಕೊಂಡಿದ್ದರು.

ನಂತರ ಮಾತನಾಡಿದ ಗ್ರಾಮ ಪಂಚಾಯತಿ ಮಾಜಿ ಉಪಾಧ್ಯಕ್ಷರಾದ ಉದಯ ಕುಮಾರ್ ಅವರು, "ಶಾಂತನಗೌಡ್ರು ಅವರು ಅತ್ಯಂತ ಆತ್ಮೀಯ ಹೃದಯದ ವ್ಯಕ್ತಿತ್ವ ಹೊಂದಿದವರು. ತಮ್ಮ ಸೇವಾ ಜೀವನದಲ್ಲಿ ಎಲ್ಲಿಯೂ ಒಂದು ಕಪ್ಪು ಚುಕ್ಕೆ ಬಾರದಂತೆ ಪ್ರಾಮಾಣಿಕತೆಯಿಂದ ಕೆಲಸ ಮಾಡಿದ್ದಾರೆ. ಅಭಿವೃದ್ಧಿಯೇ ತಮ್ಮ ಧ್ಯೇಯವಾಗಿಸಿಕೊಂಡು ಗ್ರಾಮ ಪಂಚಾಯತಿಯ ಸಮಗ್ರ ಪ್ರಗತಿಗೆ ಶ್ರಮಿಸಿದ ಅವರು, ಮಾದರಿ ಅಧಿಕಾರಿಯಾಗಿ ಸಂಪೂರ್ಣ ಸೇವಾವಧಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದಾರೆ" ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಕೊನೆಯಲ್ಲಿ ಮಾತನಾಡಿದ ವಯೋ ನಿವೃತ್ತ ಅಧಿಕಾರಿಯಾದ ಆರ್. ಶಾಂತನಗೌಡ್ರು ಅವರು, "ನಾನು ಸೇವೆ ಸಲ್ಲಿಸಿದ ಪ್ರತಿಯೊಂದು ಗ್ರಾಮ ಪಂಚಾಯತಿಯಲ್ಲಿಯೂ ಸಿಬ್ಬಂದಿ ವರ್ಗ, ಆಡಳಿತ ಮಂಡಳಿ ಸದಸ್ಯರು ಹಾಗೂ ಸಾರ್ವಜನಿಕರು ನನ್ನ ಮೇಲೆ ಅಪಾರ ವಿಶ್ವಾಸ ಇಟ್ಟು ಸಹಕಾರ ನೀಡಿದರು. ಅವರ ಬೆಂಬಲ ಮತ್ತು ಸಹಯೋಗವೇ ನನ್ನ ವೃತ್ತಿ ಜೀವನವನ್ನು ಯಶಸ್ವಿಯಾಗಿ ಹಾಗೂ ಗೌರವಯುತವಾಗಿ ಪೂರ್ಣಗೊಳಿಸಲು ಕಾರಣವಾಗಿದೆ. ನನ್ನ ಸೇವಾ ಪಯಣದಲ್ಲಿ ಜೊತೆಯಾದ ಎಲ್ಲರಿಗೂ ನಾನು ಹೃತ್ಪೂರ್ವಕ ಕೃತಜ್ಞತೆ ಸಲ್ಲಿಸುತ್ತೇನೆ" ಎಂದು ಭಾವುಕರಾಗಿ ನುಡಿದರು.

ಈ ಸಂದರ್ಭದಲ್ಲಿ ಸಿ. ಶೇಖರಪ್ಪ, ಎನ್. ಮಹೇಶ್ ಗೌಡ, ಕೆ. ನಾಗರಾಜ್, ಕೆ. ಕರಿಬಸಪ್ಪ, ಶ್ರೀಧರ್, ಎನ್. ಶೈಲಜಾ, ಕೆ. ಬರಮಪ್ಪ, ಕೋಟೆಪ್ಪ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು, ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗ ಹಾಗೂ ಸರ್ವ ಸಮಾಜದ ಮುಖಂಡರು ಉಪಸ್ಥಿತರಿದ್ದು, ವಯೋ ನಿವೃತ್ತ ಅಧಿಕಾರಿಗೆ ಸನ್ಮಾನಿಸಿ ಶುಭ ಹಾರೈಸಿದರು.

ಸಮಾರಂಭವು ಶಾಂತನಗೌಡ್ರು ಅವರ ದೀರ್ಘಕಾಲದ ಸೇವೆ, ಕರ್ತವ್ಯನಿಷ್ಠೆ, ಪ್ರಾಮಾಣಿಕತೆ ಹಾಗೂ ಜನಪರ ಆಡಳಿತಕ್ಕೆ ಸಲ್ಲಿಸಿದ ಗೌರವದ ಸಂಕೇತವಾಗಿ ಅರ್ಥಪೂರ್ಣವಾಗಿ ನೆರವೇರಿತು.

## ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ..!



**ವಿಜಯಪುರ:** ಕರ್ನಾಟಕ ರಾಜ್ಯ ಕಿತ್ತೂರ ರಾಣಿ ಚೆನ್ನಮ್ಮ ಉತ್ಸವ ಪಂಚಮಸಾಲಿ ಸಂಘ ಹಾಗೂ ಕಿತ್ತೂರ ರಾಣಿ ಚೆನ್ನಮ್ಮ ಸಂಸ್ಥೆ ಸಹಯೋಗದಲ್ಲಿ ನಗರದ ಕಿತ್ತೂರು ರಾಣಿ ಚೆನ್ನಮ್ಮ ಕಲ್ಯಾಣ ಮಂಟಪದಲ್ಲಿ ಜಿಲ್ಲಾ ಮಟ್ಟದ ಪಂಚಮಸಾಲಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಜ್ಯೋತಿ ಬೆಳಗಿಸಿ, ಚೆನ್ನಮ್ಮನ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ಕಾರ್ಯಕ್ರಮ ಉದ್ಘಾಟಿಸಲಾಯಿತು. ಮೂಲಕ ಕಾರ್ಯಕ್ರಮದಲ್ಲಿ 400ಕ್ಕೂ ಅಧಿಕ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ವಿ.ಎನ್.ಬಿರಾದಾರ, ನಾಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ರಾಜಶೇಖರ ಡಂಬಳ, ತಹಶೀಲ್ದಾರ ಪ್ರಶಾಂತ ಚನಗೊಂಡ, ಜಿಲ್ಲಾ ಪಂಚಾಯತಿ ಮುಖ್ಯ ಲೆಕ್ಕಾಧಿಕಾರಿ ರಾಮಣ್ಣ ಅಥಣಿ, ಸಾಹಿತಿ ಅಶೋಕ ಹಂಚಲಿ, ಬಿ.ಎಸ್.ಬಿರಾದಾರ, ಶರಣು ಆಲೂರ, ವೀರಭದ್ರ ಹಲಕವಟಗಿ, ಹೊನಮಲ್ಲ ಸಾರವಾಡ, ಉಮೇಶ ಕೋಳಕೂರ, ಭೀಮಾಶಂಕರ ಹದನೂರ, ಶೀಲಾ ಬಿರಾದಾರ, ಗೀತಾ ಅಂಗಡಿ, ರಾಜುಗೌಡ ಕಳಸಗೊಂಡ, ಸುರೇಶ ಶೇಡಶ್ಯಾಳ ಸೇರಿದಂತೆ ಅನೇಕ ಸಮಾಜದ ಗಣ್ಯರಿದ್ದರು.

## ರೈತರಿಗೆ ಬಾಕಿ ಹಣ ಪಾವತಿಗೆ ಆಗ್ರಹಿಸಿ ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ



**ಬೀದರ್:** ಜಿಲ್ಲೆಯ ಕಬ್ಬು ಬೆಳೆಗಾರ ರೈತರಿಗೆ ಬಾಕಿ ಇರುವ ಸುಮಾರು 45 ಕೋಟಿ ರೂ. ಕಬ್ಬಿನ ಹಣವನ್ನು ತಕ್ಷಣ ಪಾವತಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾ ಘಟಕವು ಜೂನ್ 2ರಂದು ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಲು ನಿರ್ಧರಿಸಿದೆ.

ಜಿಲ್ಲೆಯ ವಿವಿಧ ಸಕ್ಕರೆ ಕಾರ್ಖಾನೆಗಳಿಗೆ ಕಳೆದ ಸುಮಾರು ಆರು ತಿಂಗಳಿನಿಂದ ಕಬ್ಬು ಸರಬರಾಜು ಮಾಡಿರುವ ರೈತರಿಗೆ ಸುಮಾರು 45 ಕೋಟಿ ರೂ. ಹಣ ಇನ್ನೂ ಪಾವತಿಯಾಗಿಲ್ಲ. ಈ ಹಿನ್ನೆಲೆಯಲ್ಲಿ ಮೇ 15ರಂದು ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಲು ರೈತರು ಮುಂದಾಗಿದ್ದರು. ಆಗ ಜಿಲ್ಲಾಧಿಕಾರಿಗಳು ಸ್ವತಃ ರೈತರನ್ನು ಭೇಟಿ ಮಾಡಿ ಮೇ 30ರೊಳಗೆ ರೈತರ ಕಬ್ಬಿನ ಬಾಕಿ ಹಣವನ್ನು ಸಂಪೂರ್ಣ ಪಾವತಿಸುವುದಾಗಿ ಭರವಸೆ ನೀಡಿದ್ದರು. ಜಿಲ್ಲಾಧಿಕಾರಿಗಳ ಭರವಸೆಯನ್ನು ನಂಬಿ ಅಂದು ರೈತರು ಪ್ರತಿಭಟನೆಯನ್ನು ಹಿಂಪಡೆದಿದ್ದರು.

ಆದರೆ ಜಿಲ್ಲಾಧಿಕಾರಿಗಳು ನೀಡಿದ್ದ ಭರವಸೆ ಈಡೇರಿಲ್ಲ ಎಂದು ರೈತ ಸಂಘದ ಮುಖಂಡರು ಆರೋಪಿಸಿದ್ದಾರೆ. ಮುಂಗಾರು ಬಿತ್ತನೆ ಸಮಯದಲ್ಲಿ ರೈತರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವ ಹಣದ ಕೊರತೆ ಎದುರಿಸುತ್ತಿದ್ದಾರೆ ಎಂದು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಜೂನ್ 2ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಧಿಕಾರಿ ಕಚೇರಿ ಸಮೀಪದ ಲಾವಣ್ಯ ಕಲ್ಯಾಣ ಮಂಟಪದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಮೆರವಣಿಗೆ ನಡೆಸಿ, ಬಳಿಕ ಕಚೇರಿಗೆ ಮುತ್ತಿಗೆ ಹಾಕಲಾಗುವುದು. ರೈತರ ಕಬ್ಬಿನ ಬಾಕಿ ಹಣ ಪಾವತಿಯಾಗುವವರೆಗೆ ಜಿಲ್ಲಾಧಿಕಾರಿ ಕಚೇರಿಯಿಂದ ತೆರಳುವುದಿಲ್ಲ ಎಂದು ಸಂಘದ ಮುಖಂಡರು ಎಚ್ಚರಿಕೆ ನೀಡಿದ್ದಾರೆ.

ಜಿಲ್ಲೆಯ ಎಲ್ಲಾ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪ್ರತಿಭಟನೆಯಲ್ಲಿ ಭಾಗವಹಿಸಿ ಹೋರಾಟವನ್ನು ಯಶಸ್ವಿಗೊಳಿಸಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾ ಘಟಕದ ಜಿಲ್ಲಾಧ್ಯಕ್ಷ ಶ್ರೀಮಂತ ಬಿರಾದಾರ, ಜಿಲ್ಲಾ ಗೌರವಾಧ್ಯಕ್ಷ ಸಿದ್ರಾಮಪ್ಪಾ ಆಣದೂರೆ ಹಾಗೂ ಜಿಲ್ಲಾ ಪ್ರಧಾನ ಕಾರ್ಯದರ್ಶಿ ದಯಾನಂದ ಸ್ವಾಮಿ ಸಿರ್ಸಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಚಾಲನೆ

• **ಮಲ್ಲಮ್ಮ ನುಡಿ ವಾರ್ತೆ ಔರಾದ**

ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ. ಚವ್ಹಾಣ ಅವರು ಶನಿವಾರ ಇಟಗ್ಯಾಳ, ಮುತಖೇಡ, ಅಕನಾಪೂರ ಹಾಗೂ ಚಿಕ್ಲಿ.ಯು ಗ್ರಾಮಗಳಲ್ಲಿ ಸಂಚರಿಸಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು.

ಇಟ್ಯಾಳನಲ್ಲಿ ಇಟಗ್ಯಾಳನಿಂದ ಮಾನೂರ(ಕೆ) ವರೆಗೆ 170 ಲಕ್ಷ ಮೊತ್ತದ ಹೊಸ ರಸ್ತೆ ನಿರ್ಮಾಣ, ಮುತಖೇಡ್‌ನಲ್ಲಿ 25 ಲಕ್ಷ ಮೊತ್ತ ಬ್ರಿಜ್ ಕಂ ಬ್ಯಾರೇಜ್ ದುರಸ್ತಿ ಹಾಗೂ ಅಕನಾಪೂರನಲ್ಲಿ 45 ಲಕ್ಷ ಮೊತ್ತದ ಸಣ್ಣ ನೀರಾವರಿ ಕೆರೆ ದುರಸ್ತಿ, ಚಿಕ್ಲಿ(ಯು)ನಲ್ಲಿ 20 ಲಕ್ಷ ಮೊತ್ತದ ಸಣ್ಣ ನೀರಾವರಿ ಕೆರೆಯ ದುರಸ್ತಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ವಿವಿಧ ಕಾಮಗಾರಿಗಳ ಕುರಿತು ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದ ಶಾಸಕರು, ಕಾಮಗಾರಿಗಳನ್ನು ಗುಣಮಟ್ಟದೊಂದಿಗೆ ಹಾಗೂ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳು ಮತ್ತು ಗುತ್ತಿಗೆದಾರರಿಗೆ ಸೂಚನೆ ನೀಡಿದರು. ಗ್ರಾಮ ಸಂಚಾರದ ಸಂದರ್ಭದಲ್ಲಿ ಸಾರ್ವಜನಿಕರಿಂದ ಬಂದ ಬೇಡಿಕೆಗಳಿಗೆ ಸ್ಪಂದಿಸಿ ಅಗತ್ಯ ಅನುದಾನವನ್ನು ತಂದು ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗುತ್ತಿದೆ. ಕ್ಷೇತ್ರದ



ಸಮಗ್ರ ಅಭಿವೃದ್ಧಿಯೇ ತಮ್ಮ ಮುಖ್ಯ ಗುರಿಯಾಗಿದ್ದು, ಜನರ ನಿರೀಕ್ಷೆಗೆ ತಕ್ಕಂತೆ ಮೂಲಸೌಕರ್ಯಗಳನ್ನು ಕಲ್ಪಿಸಲು ಆದ್ಯತೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಕಾಮಗಾರಿಗಳ ಗುಣಮಟ್ಟದ ವಿಷಯದಲ್ಲಿ ಯಾವುದೇ ರಾಜಿ ಇಲ್ಲ. ನಿರ್ಮಾಣ ಕಾರ್ಯಗಳಲ್ಲಿ ಲೋಪಗಳು ಕಂಡುಬಂದಲ್ಲಿ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಗುಣಮಟ್ಟದಲ್ಲಿ ನಿರ್ಲಕ್ಷ್ಯ ತೋರಿದವರನ್ನು ಯಾವುದೇ ಕಾರಣಕ್ಕೂ ಬಿಡುವುದಿಲ್ಲ. ಹಾಗಾಗಿ ಎಚ್ಚರಿಕೆಯಿಂದ ಕೆಲಸ ಮಾಡಬೇಕೆಂದು ಹೇಳಿದರು.

ಇದೇ ವೇಳೆ ಚಿಂತಾಕಿ, ವಡಗಾಂವ ಹಾಗೂ ಚಿಕ್ಲಿ.ಯು ಗ್ರಾಮಗಳಲ್ಲಿ 2026–27ನೇ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ರೈತರಿಗೆ ಗುಣಮಟ್ಟದ ಬಿತ್ತನೆ ಬೀಜಗಳನ್ನು ಸಕಾಲದಲ್ಲಿ ವಿತರಿಸುವ ಮೂಲಕ ಉತ್ತಮ ಬೆಳೆ ಉತ್ಪಾದನೆಗೆ ಸಹಕಾರಿಯಾಗುವಂತೆ ಕೃಷಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಮೇ.29 ರಂದು ಠಾಣಾ ಕುಶನೂರನಲ್ಲಿ ಠಾಣಾ ಕುಶನೂರನಿಂದ ನಿಡೋದಾವರೆಗೆ 86.40 ಲಕ್ಷ ಮೊತ್ತದ ರಸ್ತೆ, 30 ಲಕ್ಷದ ಸಮುದಾಯ ಭವನದ ಉಳಿದ ಕಾಮಗಾರಿ, ಚಟ್ನಾಳನಲ್ಲಿ ಚಟ್ನಾಳನಿಂದ ಚಂದರಮಹಾರಾಜ ತಾಂಡಾವರೆಗೆ 155.80 ಲಕ್ಷದ ರಸ್ತೆ, ಜೀರ್ಗಾ(ಕೆ)ನಿಂದ ಜೋಜನಾವರೆಗೆ 198.05 ಲಕ್ಷ ಮೊತ್ತದ ರಸ್ತೆ, ಬಾಚೇಪಳ್ಳಿಯಿಂದ ಬಾಚೇಪಳ್ಳಿ ಕ್ರಾಸ್‌ವರೆಗೆ 101.60 ಲಕ್ಷದ ರಸ್ತೆ, ಮುಂಗನಾಳನಲ್ಲಿ 206.55 ಮೊತ್ತದ ರಸ್ತೆ ಕಾಮಗಾರಿ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಧೊಂಡಿಬಾ ನರೋಟೆ, ಶಿವಾಜಿರಾವ ಪಾಟೀಲ ಮುಂಗನಾಳ, ಸತೀಷ ಪಾಟೀಲ, ಸಚಿನ ರಾಠೋಡ, ಖಂಡೋಬಾ ಕಂಗಟೆ ಪ್ರಕಾಶ ಜೀರ್ಗೆ, ಮಲ್ಲಪ್ಪ ನೇಳಗೆ, ಪ್ರಕಾಶ ಮೇತ್ರೆ, ಬಾಲಾಜಿ ಪಾಟೀಲ, ಸೋಮನಾಥ ಆಲೂರ, ಸಂಗು ಬೋರ್ಗಿ, ಹಣಮಂತ ನೇಳಗೆ, ರವೀಂದ್ರ ರೆಡ್ಡಿ, ಜಗದೀಶ ಪಾಟೀಲ, ಈರಾರೆಡ್ಡಿ, ಶರಣು ಪಾಟೀಲ, ಅನೀಲ ನಾರಾಯಣಪೂರ, ಪ್ರಕಾಶ ಬೀರಕೂರೆ, ನಾಗಶೆಟ್ಟಿ ಗಾದಗೆ, ಗೋವಿಂದ ರೆಡ್ಡಿ, ಶರಣಪ್ಪ ಇಟಗಾ, ಧಾರಾಸಿಂಗ ರಾಠೋಡ, ಶಂಕರ, ನರಸಿಂಗ್ ಪಾಟೀಲ ಸೇರಿದಂತೆ ವಿವಿಧ ಅಧಿಕಾರಿಗಳು, ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಖಂಡ್ರೆಗೆ ಉಪ ಮುಖ್ಯಮಂತ್ರಿ ಹುದ್ದೆಗೆ ಆಗ್ರಹ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ರಾಜ್ಯದಲ್ಲಿ ಹೊಸದಾಗಿ ರಚನೆ ಆಗಲಿರುವ ಕಾಂಗ್ರೆಸ್ ಸರಕಾರದಲ್ಲಿ ಅರಣ್ಯ ಇಲಾಖೆ ಸಚಿವರಾಗಿ ಮತ್ತು ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾಗಿ ಯಶಸ್ವಿಯಾಗಿ ಕರ್ತವ್ಯ ನಿರ್ವಹಿಸಿರುವ ಭಾಲ್ಕಿ ಕ್ಷೇತ್ರದ ಶಾಸಕರು ಆಗಿರುವ ಈಶ್ವರ ಖಂಡ್ರೆ ಅವರನ್ನು ಉಪ ಮುಖ್ಯಮಂತ್ರಿ ಹುದ್ದೆಯನ್ನು ನೀಡಬೇಕು ಎಂದು ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಒತ್ತಾಯಿಸಿದ್ದಾರೆ.



ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಮಾಜಿ ಸಿಎಂ ಸಿದ್ದರಾಮಯ್ಯ ನೇತೃತ್ವದ ಸರಕಾರದಲ್ಲಿ ಖಂಡ್ರೆ ಅವರು ಅರಣ್ಯ ಇಲಾಖೆ ಸಚಿವರಾಗಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ್ದಾರೆ.

ವಿನೂತನ ಯೋಚನೆ ಮತ್ತು ಯೋಜನೆಯಿಂದ ಅರಣ್ಯ ಇಲಾಖೆಗೆ ಹೊಸ ಆಯಾಮ ನೀಡಿದ್ದಾರೆ. ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾಗಿ ಜಿಲ್ಲೆಯ ಅಭಿವೃದ್ಧಿಗೆ ಭರಪೂರ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸುವ ಪ್ರಯತ್ನ ಮಾಡಿದ್ದಾರೆ.

ಅದಲ್ಲದೇ ರಾಜ್ಯದಲ್ಲಿ ಲಿಂಗಾಯತ ಸಮುದಾಯದ ಪ್ರಭಾವಿ ನಾಯಕರಾಗಿ ಗುರುತಿಸಿಕೊಂಡಿದ್ದಾರೆ. ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರಾಗಿ ಸಮುದಾಯವನ್ನು ಸಂಘಟಿಸುವ ಕೆಲಸ ಮಾಡುತ್ತಿದ್ದಾರೆ. ಇದು ವರೆಗೂ ಸರಕಾರ ಮತ್ತು ಪಕ್ಷ ನೀಡಿರುವ ಎಲ್ಲ ಹುದ್ದೆಗಳಿಗೆ ಗೌರವ ತಂದು ಕೊಡುವ ಕೆಲಸ ಮಾಡಿದ್ದಾರೆ.

ಹಾಗಾಗಿ ಹಿರಿತನ, ಅನುಭವ, ಲಿಂಗಾಯತ ಸಮುದಾಯವನ್ನು ಪರಿಗಣಿಸಿ ಈಶ್ವರ ಖಂಡ್ರೆ ಅವರನ್ನು ಹೊಸ ಸರಕಾರದಲ್ಲಿ ಉಪ ಮುಖ್ಯಮಂತ್ರಿ ಹುದ್ದೆ ನೀಡುವುದರ ಜತೆಗೆ ಅತ್ಯುತ್ತಮ ಖಾತೆಯನ್ನು ನೀಡಬೇಕು ಎಂದು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ಪಿ.ಎಸ್.ಐ ನಾಗಪ್ಪಗೆ ಗೌರವ ಸನ್ಮಾನ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ಜಿಲ್ಲೆಯ ಕುಕನೂರು ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದ ನಾಗಪ್ಪ ಕನಕಾಪುರ ಅವರು ಮೇ 31, 2026 ರಂದು ಗೌರವಪೂರ್ವಕವಾಗಿ ಸೇವಾನಿವೃತ್ತಿ ಹೊಂದುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ನೇತೃತ್ವದಲ್ಲಿ ಸನ್ಮಾನಿಸಿ ನಿವೃತ್ತಿ ಜೀವನಕ್ಕೆ ಶುಭ ಹಾರೈಸಲಾಯಿತು.

ಸುಮಾರು 32 ವರ್ಷ 10 ತಿಂಗಳು 13 ದಿನಗಳ ಕಾಲ ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸಿರುವ ನಾಗಪ್ಪ ಕನಕಾಪುರ ಅವರು ಕೊಪ್ಪಳ ನಗರ ಠಾಣೆ, ಕವಿತಾಳ, ಲಿಂಗಸೂರು, ಕಾರಟಗಿ, ಅಳವಂಡಿ, ಕೊಪ್ಪಳ ಮಹಿಳಾ ಪೊಲೀಸ್ ಠಾಣೆ ಸೇರಿದಂತೆ ವಿವಿಧ ಠಾಣೆಗಳಲ್ಲಿ ಕರ್ತವ್ಯ ನಿರ್ವಹಿಸಿ, ಪ್ರಸ್ತುತ ಕುಕನೂರು ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಸೇವೆ ಸಲ್ಲಿಸುತ್ತಿದ್ದರು.

ತಮ್ಮ ಸೇವಾ ಅವಧಿಯಲ್ಲಿ ಪ್ರಾಮಾಣಿಕತೆ, ಶಿಸ್ತು, ಕರ್ತವ್ಯನಿಷ್ಠೆ ಹಾಗೂ ಮಾನವೀಯ



ಮೌಲ್ಯಗಳನ್ನು ಅಳವಡಿಸಿಕೊಂಡು ಸಾರ್ವಜನಿಕರ ವಿಶ್ವಾಸ ಗಳಿಸಿದ್ದ ಅವರು, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವಲ್ಲಿ ತೋರಿದ ತಾಳ್ಮೆ, ಧೈರ್ಯ ಮತ್ತು ನಿಸ್ವಾರ್ಥ ಸೇವೆಯಿಂದ ಸಹೋದ್ಯೋಗಿಗಳು ಹಾಗೂ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

ನಗರದ ಎಸ್.ಪಿ. ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ಧಿ ಅವರು ನಾಗಪ್ಪ ಕನಕಾಪುರ ಹಾಗೂ ಅವರ ಕುಟುಂಬದವರನ್ನು ಸನ್ಮಾನಿಸಿ, ಉತ್ತಮ ಆರೋಗ್ಯ, ನೆಮ್ಮದಿ ಮತ್ತು ಸಂತೋಷಭರಿತ ನಿವೃತ್ತಿ ಜೀವನಕ್ಕಾಗಿ ಶುಭ ಹಾರೈಸಿದರು.

## ಭಾಲ್ಕಿ ಬಿಕೆಐಟಿ ಕಾಲೇಜಿನಲ್ಲಿ ವಿನೂತನ ಆವಿಷ್ಕಾರಕ್ಕೆ ಪ್ರೋತ್ಸಾಹ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ರಾಷ್ಟ್ರ ತಂತ್ರಜ್ಞಾನ ಕ್ಷೇತ್ರದಲ್ಲಿ ಪ್ರಗತಿ ಸಾಧಿಸಿ,ಸ್ವಾವಲಂಬಿ ಬದುಕಿಗೆ ಅನುವು ಮಾಡಿಕೊಡಬೇಕಾದರೆ ಯುವ ಇಂಜಿನೀಯರ್‌ಗಳಿಗೆ ಮುಕ್ತ ಅವಕಾಶ ಕಲ್ಪಿಸಿ,ಪ್ರೋತ್ಸಾಹ ನೀಡುವುದು ಅಗತ್ಯ ಎಂದು ಬಿಕೆಐಟಿ ಕಾಲೇಜಿನ ಪ್ರಾಚಾರ್ಯ ಡಾ.ಉದಯಕುಮಾರ ಕಲ್ಯಾಣೆ ಅಭಿಪ್ರಾಯಪಟ್ಟರು.

ಇಲ್ಲಿನ ಬಿಕೆಐಟಿ ಕಾಲೇಜಿನಲ್ಲಿ ಶನಿವಾರ ಇಂಜಿನೀಯರಿಂಗ್ ಎಲ್ಲ ವಿಭಾಗದ 2ನೇ ಸೆಮ್ ವಿದ್ಯಾರ್ಥಿಗಳಿಂದ ಸ್ವಯಂಪ್ರೇರಿತವಾಗಿ ವಿವಿಧ ಘಟಕಗಳಿಗೆ ಸಂಬಂಧಿಸಿದಂತೆ ಆವಿಷ್ಕರಿಸಲ್ಪಟ್ಟ ವಿವಿಧ ಆಪ್‌ಗಳ ಪ್ರಾಯೋಗಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.ಡಾ.ಆರತಿ ಬಚ್ಚಣ್ಣ ಅವರ ಮಾರ್ಗದರ್ಶನದಲ್ಲಿ ಮಕ್ಕಳು ಸುಮಾರು 64 ನೂತನ ಪ್ರೋಜೆಕ್ಟಳನ್ನು ಸಿದ್ಧಪಡಿಸಿದ್ದು ಅದ್ಭುತವಾಗಿದೆ. ಇದರಿಂದ ಮಕ್ಕಳ ಕಲಿಕಾ ಸಾಮರ್ಥ್ಯ ವೃದ್ಧಿಸಿ



ಜಾಗತಿಕವಾಗಿ ತಂತ್ರಜ್ಞಾನ ಮುಂದುವರೆಯಲು ಅವಕಾಶ ದೊರೆಯುತ್ತದೆ ಎಂದು ಹೇಳಿದರು.

ನಿವೃತ್ತ ಪ್ರಾಚಾರ್ಯ ಅಶೋಕ ರಾಜೋಳೆ ಮಾತನಾಡಿ,ತಾಲೂಕು ಮಟ್ಟದಲ್ಲಿರುವ ಬಿಕೆಐಟಿ ಕಾಲೇಜಿನಲ್ಲಿ ಸುಧಾರಿತ ಸಂಶೋಧನಾ ಮೂಲಸೌಕರ್ಯಗಳ ಬಗ್ಗೆ ಹರ್ಷ ವ್ಯಕ್ತಪಡಿಸಿ ,ವಿವಿಧ ವಿಷಯಗಳಿಗೆ ಸಂಬಂಧಿಸಿದ 06 ವಿದ್ಯಾರ್ಥಿಗಳ ತಂಡ ರಚಿಸಿ , ಕೃತಕ ಬುದ್ಧಿಮತೆ,ಸೆಮಿಕಂಡಕ್ಟರ್ ತಂತ್ರಜ್ಞಾನ,ಹಸಿರು ಇಂಧನ,ಡಿಜಿಟಲ್ ಮೂಲಸೌಕರ್ಯ,ಸ್ಮಾರ್ಟ್ ವಾಟರ್ ಲೆವಲ್ ಇಂಡಿಕೇಟರ್ ,ಆನ್‌ಲೈನ್ ಬ್ಯಾಂಕಿಂಗ್ ಸಿಸ್ಟಮ್,ಗ್ರಾಫಿಕಲ್ ಪಾಸ್‌ವರ್ಡ್ ಸಿಸ್ಟಮ್,ಸೋಲಾರ್ ಟ್ರಾಕಿಂಗ್ ಸಿಸ್ಟಮ್,ಫೇಕ್ ನ್ಯೂಸ್ ಡಿಟೆಕ್ಷನ್,ಸ್ಟುಡೆಂಟ್ ಪರಫಾರಮೆನ್ಸ್ ಪ್ರೆಡಿಕ್ಷನ್,ಸ್ಮಾರ್ಟ್ ಏರ್ ಪ್ಯೂರಿಫೈರ್ ,ರೂಮ್ ಹೀಟರ್,ಟ್ರಾಫಿಕ್ ಕಂಟ್ರೋಲ್ ಸಿಸ್ಟಮ್ ಸೇರಿದಂತೆ ಅನೇಕ ಆಪ್ ನಿರ್ಮಿಸಿ ಸಾರ್ವಜನಿಕರ ಬಳಕೆಗೆ ಅನುಕೂಲ ಮಾಡಿಕೊಟ್ಟಿದ್ದು ಶ್ಲಾಘನೀಯವಾಗಿದೆ ಎಂದು ಹೇಳಿದರು.ಬಿಇ ವಿದ್ಯಾರ್ಥಿನಿ ಕು.ಸವಿತಾ ಅವರು,ಕಲಿಕಾ ಹಂತದಲ್ಲಿ ಬಿಕೆಐಟಿ ಕಾಲೇಜಿನವರು ನಮಗೆ ಎಲ್ಲ ಸೌಲಭ್ಯ ಒದಗಿಸಿ ಭಾವಿ ಸೈಂಟಿಸ್ಟ್ ಆಗಲು ಅನುವು ಮಾಡಿಕೊಟ್ಟಿದ್ದಾರೆ ಎಂದು ತಮ್ಮ ಮನದಾಳದ ಮಾತು ಹೊರಹಾಕಿದರು.

ಈಸಂದರ್ಭದಲ್ಲಿಡಾ.ಸೂರ್ಯಕಾಂತಬಿರಾದಾರ,ಡಾ.ಅನೀಲ ಕೊಡಗೆ,ಡಾ.ಆರತಿ ಬಚ್ಚಣ್ಣ,ಪ್ರೊ.ಬಸವರಾಜ ಕಾವಡಿ,ಡಾ.ಪ್ರಶಾಂತ ಸಂಗೋಳಗಿ,ಪ್ರೊ.ಪ್ರಲ್ಹಾದ ',ಪ್ರೊ.ಸಂಜೀವ ಗೊಗ್ಗಾ,ಪ್ರೊ.ಸುನೀಲ ಸಂಗಮೆ ಸೇರಿದಂತೆ ಬಿಇ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕಲ್ಯಾಣ ಕರ್ನಾಟಕದ ಜನಮಾನಸ ನಾಯಕ ಖಂಡ್ರೆ ಅವರಿಗೆ ಬೇಕು ಡಿಸಿಎಂ ಪಟ್ಟ



**ವರ್ತಮಾನ–ಮನನ**
**● ಪರಶುರಾಮ ಕರಣಂ**
**ಭಾಲ್ಕಿ**

**ರಾ**ಜಕೀಯದಲ್ಲಿ ಕೆಲ ನಾಯಕರು ಅಧಿಕಾರದ ಮೂಲಕ ಗುರುತಿಸಿಕೊಂಡರೆ, ಇನ್ನೂ ಕೆಲವರು ತಮ್ಮ ಅಭಿವೃದ್ಧಿ ಕಾರ್ಯಗಳು, ಜನಪರ ಆಡಳಿತ ಮತ್ತು ದೂರದೃಷ್ಟಿಯ ನಾಯಕತ್ವದ ಮೂಲಕ ಜನಮನದಲ್ಲಿ ಶಾಶ್ವತ ಸ್ಥಾನ ಪಡೆಯುತ್ತಾರೆ. ಅಂತಹ ನಾಯಕರ ಸಾಲಿನಲ್ಲಿ ಭಾಲ್ಕಿ ಕ್ಷೇತ್ರದ ಶಾಸಕ ಹಾಗೂ ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರು ಪ್ರಮುಖರಾಗಿದ್ದಾರೆ. ನಾಲ್ಕು ದಶಕಗಳ ರಾಜಕೀಯ ಅನುಭವ, ಜನರೊಂದಿಗೆ ನಿರಂತರ ಸಂಪರ್ಕ ಮತ್ತು ಅಭಿವೃದ್ಧಿಯತ್ತ ಅವರ ಬದ್ಧತೆಯು ಅವರನ್ನು ರಾಜ್ಯ ರಾಜಕೀಯದ ಪ್ರಭಾವಿ ನಾಯಕರನ್ನಾಗಿ ರೂಪಿಸಿದೆ.

ಭಾಲ್ಕಿಯ ಸಮಗ್ರ ಅಭಿವೃದ್ಧಿಗೆ ನಿರಂತರ ಶ್ರಮ

ಈಶ್ವರ ಖಂಡ್ರೆ ಅವರು ಭಾಲ್ಕಿ ಕ್ಷೇತ್ರವನ್ನು ಕೇವಲ ರಾಜಕೀಯ ಕ್ಷೇತ್ರವನ್ನಾಗಿ ನೋಡದೆ, ತಮ್ಮ ಅಭಿವೃದ್ಧಿಯ ಕನಸಿನ ಕ್ಷೇತ್ರವನ್ನಾಗಿ ರೂಪಿಸಿದ್ದಾರೆ. ರಸ್ತೆ, ಕುಡಿಯುವ ನೀರು, ಶಿಕ್ಷಣ, ಆರೋಗ್ಯ, ನೀರಾವರಿ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಅವರು ನೀಡಿರುವ ಕೊಡುಗೆಗಳು ಕ್ಷೇತ್ರದ ಜನರ ಬದುಕಿನಲ್ಲಿ ಮಹತ್ತರ ಬದಲಾವಣೆ ತಂದಿವೆ.

ಒಂದು ಕಾಲದಲ್ಲಿ ಮೂಲಸೌಕರ್ಯಗಳ ಕೊರತೆಯಿಂದ ಬಳಲುತ್ತಿದ್ದ ಅನೇಕ ಗ್ರಾಮಗಳು ಇಂದು ರಸ್ತೆ ಸಂಪರ್ಕ, ಕುಡಿಯುವ ನೀರು ಹಾಗೂ ವಿವಿಧ ಅಭಿವೃದ್ಧಿ ಯೋಜನೆಗಳಿಂದ ಹೊಸ ರೂಪ ಪಡೆದುಕೊಂಡಿವೆ. ಗ್ರಾಮೀಣ ಪ್ರದೇಶಗಳಿಗೆ ನಗರ ಪ್ರದೇಶಗಳ ಸೌಲಭ್ಯಗಳನ್ನು ತಲುಪಿಸುವ ನಿಟ್ಟಿನಲ್ಲಿ ಅವರು ಕೈಗೊಂಡಿರುವ ಪ್ರಯತ್ನಗಳು ಗಮನಾರ್ಹವಾಗಿವೆ.

**ರೈತರ ಪರ ಕಾಳಜಿಯ ನಾಯಕ**

ಕೃಷಿ ಆಧಾರಿತ ಭಾಲ್ಕಿ ಕ್ಷೇತ್ರದಲ್ಲಿ ರೈತರ ಸಮಸ್ಯೆಗಳಿಗೆ ಸ್ಪಂದಿಸುವಲ್ಲಿ ಖಂಡ್ರೆ ಅವರು ಸದಾ ಮುಂಚೂಣಿಯಲ್ಲಿದ್ದಾರೆ. ನೀರಾವರಿ ಯೋಜನೆಗಳ ಅನುಷ್ಠಾನ, ಕೆರೆಗಳ ಪುನಶ್ಚೇತನ, ರೈತರಿಗೆ ಅಗತ್ಯ ಸೌಲಭ್ಯಗಳ ಒದಗಿಕೆ ಹಾಗೂ ಕೃಷಿ ಅಭಿವೃದ್ಧಿಗೆ ಪೂರಕ ಕಾರ್ಯಕ್ರಮಗಳನ್ನು ಜಾರಿಗೆ ತರಲು ಅವರು ನಿರಂತರವಾಗಿ ಶ್ರಮಿಸಿದ್ದಾರೆ.

ರೈತರ ಸಂಕಷ್ಟದ ಸಂದರ್ಭದಲ್ಲಿ ಅವರ ಪರವಾಗಿ ಧ್ವನಿಯಾಗಿರುವ ಖಂಡ್ರೆ ಅವರು, ಕೃಷಿಯ ಬೆಳವಣಿಗೆಯೇ ಗ್ರಾಮೀಣ ಆರ್ಥಿಕತೆಯ ಬೆಳವಣಿಗೆಗೆ ಆಧಾರ ಎಂಬ ನಿಲುವನ್ನು ಸದಾ ಪ್ರತಿಪಾದಿಸಿದ್ದಾರೆ.

**ಅರಣ್ಯ ಸಚಿವರಾಗಿ ಹೊಸ ದಿಕ್ಕು**

ರಾಜ್ಯದ ಅರಣ್ಯ ಸಚಿವರಾಗಿ ಖಂಡ್ರೆ ಅವರು ಇಲಾಖೆಗೆ ಹೊಸ ಚಿಂತನೆ ಮತ್ತು ಚೈತನ್ಯ ನೀಡಿದ್ದಾರೆ. ಪರಿಸರ ಸಂರಕ್ಷಣೆ, ಹಸಿರು ಕರ್ನಾಟಕ ನಿರ್ಮಾಣ,



ಅರಣ್ಯ ಪ್ರದೇಶಗಳ ಅಭಿವೃದ್ಧಿ ಹಾಗೂ ವನ್ಯಜೀವಿ ಸಂರಕ್ಷಣೆಗೆ ಸಂಬಂಧಿಸಿದ ಅನೇಕ ಕಾರ್ಯಕ್ರಮಗಳಿಗೆ ವೇಗ ನೀಡಿದ್ದಾರೆ.

ಅಭಿವೃದ್ಧಿ ಮತ್ತು ಪರಿಸರ ಸಂರಕ್ಷಣೆಯ ನಡುವೆ ಸಮತೋಲನ ಸಾಧಿಸುವ ನಿಟ್ಟಿನಲ್ಲಿ ಅವರು ಅನುಸರಿಸಿರುವ ನೀತಿಗಳು ರಾಜ್ಯದಾದ್ಯಂತ ಮೆಚ್ಚುಗೆ ಪಡೆದಿವೆ. ಪರಿಸರದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ಕೂ ಅವರು ಹೆಚ್ಚಿನ ಒತ್ತು ನೀಡಿದ್ದಾರೆ.

**ಭಾಲ್ಕಿ ಕ್ಷೇತ್ರದ ಅಭಿವೃದ್ಧಿಗೆ ಹೊಸ ದಿಕ್ಕು ನೀಡಿದ, ರೈತರ ಪರ ಹೋರಾಡಿದ, ಸಚಿವರಾಗಿ ಯಶಸ್ವಿ ಆಡಳಿತ ನೀಡಿದ ಹಾಗೂ ಪಕ್ಷ ಸಂಘಟನೆಯಲ್ಲಿ ತಮ್ಮದೇ ಆದ ಛಾಪು ಮೂಡಿಸಿರುವ ಈಶ್ವರ ಖಂಡ್ರೆ ಅವರು ಇಂದು ಕರ್ನಾಟಕ ರಾಜಕೀಯದ ಪ್ರಮುಖ ನಾಯಕರಲ್ಲಿ ಒಬ್ಬರಾಗಿದ್ದಾರೆ. ಅವರ ಅನುಭವ, ಕಾರ್ಯಕ್ಷಮತೆ, ಜನಪರ ನಿಲುವು ಹಾಗೂ ಆಡಳಿತ ದಕ್ಷತೆಯನ್ನು ಪರಿಗಣಿಸಿದರೆ, ಉಪ ಮುಖ್ಯಮಂತ್ರಿ ಹುದ್ದೆಯನ್ನು ಯಶಸ್ವಿಯಾಗಿ ನಿರ್ವಹಿಸುವ ಎಲ್ಲ ಅರ್ಹತೆಗಳು ಅವರಲ್ಲಿವೆ ಎಂಬುದು ರಾಜಕೀಯ ವಲಯಗಳಲ್ಲಿ ವ್ಯಕ್ತವಾಗುತ್ತಿರುವ ಅಭಿಪ್ರಾಯವಾಗಿದೆ. ಉತ್ತರ ಕರ್ನಾಟಕದ ಧ್ವನಿಯಾಗಿ ಹಾಗೂ ರಾಜ್ಯದ ಅಭಿವೃದ್ಧಿಯ ಪಾಲುದಾರರಾಗಿ ಅವರು ಮತ್ತಷ್ಟು ದೊಡ್ಡ ಜವಾಬ್ದಾರಿ ನಿರ್ವಹಿಸುವ ಸಾಮರ್ಥ್ಯ ಹೊಂದಿದ್ದಾರೆ ಎಂಬುದು ಅವರ ರಾಜಕೀಯ ಪಯಣವೇ ಸಾಬೀತುಪಡಿಸಿದೆ.**

**ಸಂಘಟನಾ ಸಾಮರ್ಥ್ಯ ಮತ್ತು ರಾಜಕೀಯ ಪ್ರಭಾವ**

ಈಶ್ವರ ಖಂಡ್ರೆ ಅವರು ಕೇವಲ ಆಡಳಿತಗಾರರಲ್ಲ, ಅತ್ಯುತ್ತಮ ಸಂಘಟಕರೂ ಹೌದು. ರಾಜ್ಯ ಕಾಂಗ್ರೆಸ್ ಪಕ್ಷದ ಕಾರ್ಯಾಧ್ಯಕ್ಷರಾಗಿ ಪಕ್ಷವನ್ನು ಸಂಘಟಿಸುವಲ್ಲಿ ಮಹತ್ವದ ಪಾತ್ರವಹಿಸಿರುವ ಅವರು, ಪಕ್ಷದ ತಳಮಟ್ಟದ ಕಾರ್ಯಕರ್ತರೊಂದಿಗೆ ನಿರಂತರ ಸಂಪರ್ಕ ಹೊಂದಿದ್ದಾರೆ.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ರಾಷ್ಟ್ರೀಯ ಅಧ್ಯಕ್ಷರಾಗಿ ಸಮಾಜದ ಸಂಘಟನೆ ಮತ್ತು ಏಕತೆಗೆ ಶ್ರಮಿಸುತ್ತಿರುವ ಅವರು, ರಾಜ್ಯದ ವಿವಿಧ ಸಮುದಾಯಗಳ ನಡುವೆ ಉತ್ತಮ ಬಾಂಧವ್ಯ ಬೆಳೆಸುವಲ್ಲಿ ಯಶಸ್ವಿಯಾಗಿದ್ದಾರೆ.

ಡಿಸಿಎಂ ಹುದ್ದೆಗೆ ಅರ್ಹತೆಯ ಎಲ್ಲ ಮಾನದಂಡಗಳು

ಉಪ ಮುಖ್ಯಮಂತ್ರಿ ಹುದ್ದೆ ಎನ್ನುವುದು ಕೇವಲ ರಾಜಕೀಯ ಸಮೀಕರಣದ ಭಾಗವಲ್ಲ; ಅದು ಅನುಭವ, ನಾಯಕತ್ವ, ಜನಬೆಂಬಲ ಮತ್ತು ಆಡಳಿತ ಸಾಮರ್ಥ್ಯದ ಪ್ರತೀಕವಾಗಿದೆ. ಈ ಎಲ್ಲ ಅಂಶಗಳನ್ನು ಗಮನಿಸಿದರೆ ಖಂಡ್ರೆ ಅವರು ಡಿಸಿಎಂ ಹುದ್ದೆಗೆ ಅತ್ಯಂತ ಸೂಕ್ತ ನಾಯಕರಾಗಿ ಕಾಣಿಸಿಕೊಳ್ಳುತ್ತಾರೆ.

ಸತತ ಜನಬೆಂಬಲ, ಸಚಿವರಾಗಿ ಯಶಸ್ವಿ ಆಡಳಿತ, ಪಕ್ಷ ಸಂಘಟನೆಯಲ್ಲಿ ಸಕ್ರಿಯ ಪಾತ್ರ, ಉತ್ತರ ಕರ್ನಾಟಕದ ಪ್ರಬಲ ಪ್ರತಿನಿಧಿತ್ವ ಹಾಗೂ ಲಿಂಗಾಯತ ಸಮುದಾಯದ ವಿಶ್ವಾಸಾರ್ಹ ನಾಯಕತ್ವವು ಅವರನ್ನು ಈ ಹುದ್ದೆಗೆ ಬಲವಾದ ಅಭ್ಯರ್ಥಿಯನ್ನಾಗಿ ಮಾಡಿದೆ.

ಉತ್ತರ ಕರ್ನಾಟಕದ ಆಶಯಗಳ ಪ್ರತಿನಿಧಿ

ರಾಜ್ಯದ ಅಭಿವೃದ್ಧಿಯಲ್ಲಿ ಉತ್ತರ ಕರ್ನಾಟಕದ ಪಾತ್ರ ಮಹತ್ವದ್ದಾಗಿದೆ. ಆದರೆ ಹಲವು ಬಾರಿ ಈ ಭಾಗದ ಪ್ರಾತಿನಿಧ್ಯದ ಕುರಿತು ಚರ್ಚೆಗಳು ನಡೆದಿವೆ. ಇಂತಹ ಸಂದರ್ಭದಲ್ಲಿ ಉತ್ತರ ಕರ್ನಾಟಕದ ಪ್ರಭಾವಿ ನಾಯಕನಾದ ಈಶ್ವರ ಖಂಡ್ರೆ ಅವರಿಗೆ ಉಪ ಮುಖ್ಯಮಂತ್ರಿ ಹುದ್ದೆ ನೀಡುವುದು ಕೇವಲ ವ್ಯಕ್ತಿಗೌರವವಲ್ಲ; ಅದು ಈ ಭಾಗದ ಜನರ ಆಶಯಗಳಿಗೆ ದೊರೆಯುವ ಮನ್ನಣೆಯಾಗಲಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)